

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 Issue: 247 ₹ ಬೆಲೆ: 4 Friday, 24, November,2023 newsbelagavi@gmail.com 9900332089 Regn,No:G-2/PMG/KA/NK/BM/139/2021-23


## ಬಿ.ವೈ.ವಿಜಯೇಂದ್ರ ಅವರನ್ನು ಅಳೆದು ತೂಗಿ ಅಧ್ಯಕ್ಷರನ್ನಾಗಿ ಮಾಡಿಲ್ಲ: ಬಿಜೆಪಿ ವಿರುದ್ಧ ಅರವಿಂದ ಲಿಂಬಾವಳಿ ಕಿಡಿ



ಬೆಳಗಾವಿ: ಬಿ.ವೈ.ವಿಜಯೇಂದ್ರ ಅವರನ್ನು ನಾವು ಅಳೆದು ತೂಗಿ ಅಧ್ಯಕ್ಷರನ್ನಾಗಿ ಮಾಡಿಲ್ಲ. ನಮ್ಮಲ್ಲಿ ಆಯ್ಕೆ ಆಗಿರುವ 66 ಜನರಲ್ಲಿ ಅನೇಕರು ಸ್ವಂತ ಶಕ್ತಿ ಮೇಲೆ ಶಾಸಕರಾಗಿದ್ದಾರೆ. ಕೆಲವರು ಹೊಂದಾಣಿಕೆ ಮೇಲೆ ಶಾಸಕರಾಗಿ ಆಯ್ಕೆ ಆಗಿದ್ದಾರೆ ಎಂದು ಮಾಜಿ ಸಚಿವ ಅರವಿಂದ ಲಿಂಬಾವಳಿ ಹೇಳಿದ್ದಾರೆ.

ಬೆಳಗಾವಿಯಲ್ಲಿ ಮಾತನಾಡಿದ ಅರವಿಂದ ಲಿಂಬಾವಳಿ, ಈ ಸಲದ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿಯಿಂದ ಆಯ್ಕೆಯಾಗಿರುವ 66 ಶಾಸಕರಲ್ಲಿ ಅನೇಕರು ಸ್ವಂತ ಶಕ್ತಿ ಮೇಲೆಯೇ ಗೆದ್ದಿದ್ದಾರೆ. ಕೆಲವರು ಹೊಂದಾಣಿಕೆ ಮೇಲೆ ಶಾಸಕರಾಗಿ ಆಯ್ಕೆಯಾಗಿದ್ದಾರೆ.

ಇದು ಹೊಂದಾಣಿಕೆ ಮಾಡಿಕೊಳ್ಳುವವರ ಕಾಲ ಎಂದು ಲೇವಡಿ ಮಾಡಿದರು.

ಬಿ.ವೈ.ವಿಜಯೇಂದ್ರ ಅವರನ್ನು ಅಳೆದು, ತೂಗಿ ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷರನ್ನಾಗಿ ಮಾಡಿಲ್ಲ' ಎಂದೂ ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ವಿರೋಧ ಪಕ್ಷದ ನಾಯಕ ಆರ್.ಅಶೋಕ ಮತ್ತು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ವಿರೋಧ ಪಕ್ಷಗಳ ಜತೆಗೆ ಹೊಂದಾಣಿಕೆ ಮಾಡಿ ಕೊಂಡಿದ್ದಾರೆ. ಹೊಂದಾಣಿಕೆಯಿಂದಲೇ ಅವರು ಲೋಕಸಭೆ ಚುನಾವಣೆಯಲ್ಲಿ ಹೆಚ್ಚಿನ ಸ್ಥಾನವನ್ನೂ ಗೆಲ್ಲಿಸಬಹುದು. ಹಾಗಾಗಿ ಅವರನ್ನು ನೇಮಕ ಮಾಡಲಾಗಿದೆ ಎಂದು ಅಸಮಾಧಾನ ವ್ಯಕ್ತ ಪಡಿಸಿದ್ದಾರೆ.

ಕಾಂತರಾಜ್ ಆಯೋಗದ ವರದಿ ಕುರಿತು ಪ್ರತಿಕ್ರಿಯಿಸಿದ ಅವರು, ಕಾಂತರಾಜ್ ಆಯೋಗದ ವರದಿಯ ಮೂಲಪ್ರತಿ ಕಳ್ಳತನವಾಗಿದೆ ಎನ್ನುತ್ತಿದ್ದಾರೆ.

ಆ ವರದಿ ಸಾಫ್ಟ್‌ಕಾಪಿ ಕಂಪ್ಯೂಟರ್‌ನಲ್ಲಿ ಇರುತ್ತದೆ. ಅದನ್ನು ಕಳ್ಳತನ ಮಾಡಲು ಆಗುವುದಿಲ್ಲವಲ್ಲ ಎಂದು ಹೇಳಿದ ಅವರು, ಈ ವರದಿ ಜಾರಿಯಾಗಬಾರದು ಎಂದು ಹೇಳುವ ಸಮಾಜಗಳು ಸ್ವಲ್ಪ ಸಾಮಾಜಿಕವಾಗಿ ಯೋಚಿಸಬೇಕು ಎಂದರು.

## ಜಾತಿಗಣತಿ ವರದಿ: ಬರೀ ಊಹೆಗಳ ಮೇಲೆ ಮಾತನಾಡುವುದು ಸರಿಯಲ್ಲ; ಬಿಜೆಪಿಯಲ್ಲಿ ಬೆಂಕಿ ಹೊತ್ತಿಕೊಂಡಿದೆ: ಸಿದ್ದರಾಮಯ್ಯ



ಬಾಗಲಕೋಟೆ: ಜಾತಿ ಜನಗಣತಿ ವರದಿ ಸಲ್ಲಿಸುವ ಮುನ್ನವೇ ಚರ್ಚೆ ಶುರುವಾಗಿದೆ. ವರದಿಯಲ್ಲೇ ಏನಿದೆ ಎಂದು ಅದನ್ನು ಬೇಡ ಎನ್ನುವವರಿಗೂ ಗೊತ್ತಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಬಾಗಲಕೋಟೆಯ ನವನಗರದ ಹೆಲಿಪ್ಯಾಡಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವರದಿ ಸಲ್ಲಿಕೆಯಾದ ನಂತರ ನೋಡೋಣ. ಸುಮ್ಮನೆ ಊಹೆಗಳ ಮೇಲೆ ಮಾತನಾಡುವುದು ಒಳ್ಳೆಯ ಬೆಳವಣಿಗೆಯಲ್ಲ ಎಂದರು.

ಜಾತಿ ಜನಗಣತಿ ಸಮಾಜವನ್ನು ಒಡೆಯುತ್ತದೆ ಎಂದಿರುವ ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಅವರ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿ, ಅವರಿಗೆ ವರದಿಯಲ್ಲಿ ಏನಿದೆ ಎಂದು ಗೊತ್ತಿದೆಯೇ? ಎಂದು ಪ್ರಶ್ನಿಸಿದರು. ಯಾರೇ ಆಗಲಿ ಗೊತ್ತಿಲ್ಲದೆ ಮಾತನಾಡಬಾರದು. ಸಮಾಜವನ್ನು ಏಕೆ ಒಡೆಯುತ್ತೇವೆ? ನಿತೀಶ್ ಕುಮಾರ್ ಬಿಹಾರದಲ್ಲಿ ಜಾತಿಗಣತಿ ಸ್ವೀಕರಿಸಿದ್ದಾರೆ. ಸಮಾಜ ಒಡೆದುಬಿಟ್ಟರೆ?ಯಾವುದೇ ಹೇಳಿಕೆ ನೀಡುವಾಗ ಅದು ಸತ್ಯಾಂಶದ ಮೇಲೆ ಅವಲಂಬಿತವಾಗಿರಬೇಕು ಎಂದರು. ಮೂಲ ವರದಿ ಕಳೆದಿದೆ ಎಂದು ಹಾಲಿ ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಜಯಯಪ್ರಕಾಶ್ ಹೆಗ್ಡೆ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ಸಿಎಂ, ಹೆಗ್ಡೆ ಅವರನ್ನು ಕರೆದು ಮಾತನಾಡುತ್ತೇನೆ ಎಂದು ತಿಳಿಸಿದರು.

ಬಿಜೆಪಿಯಲ್ಲಿ ಬೆಂಕಿ ಹತ್ತಿಕೊಂಡಿದೆ: ಬಿಜೆಪಿ ಪಕ್ಷದಲ್ಲಿ ವಿಜಯೇಂದ್ರನವರನ್ನು ಅಧ್ಯಕ್ಷರನ್ನಾಗಿ ಹಾಗೂ ಆರ್. ಅಶೋಕ್ ಅವರನ್ನು ವಿರೋಧ ಪಕ್ಷದ ನಾಯಕನನ್ನಾಗಿ ನೇಮಿಸಿದ ಮೇಲೆ ಬೆಂಕಿ ಹತ್ತಿಕೊಂಡಿದೆ.

ಬಹಳಷ್ಟು ಜನರಿಗೆ ಅಸಮಾಧಾನವಾಗಿದೆ. ಇದು ಏನಾಗುತ್ತದೆ ಎಂದು ಗೊತ್ತಿಲ್ಲ. ಅದು ಜ್ವಾಲೆಯಾಗುತ್ತದೆಯೋ ಅವರ ಬುಡಕ್ಕೆ ಬೆಂಕಿ ಹತ್ತುಕೊಳ್ಳುತ್ತದೆಯೋ ಗೊತ್ತಿಲ್ಲ. ಬೆಂಕಿ ಅಂತೂ ಹೊತ್ತಿಕೊಂಡಿದೆ ಎಂದರು.

## ಸಿಎಂ ಸಿದ್ದರಾಮಯ್ಯ 2ನೇ ದೇವರಾಜ ಅರಸು ಅಂದರೆ ತಪ್ಪಾಗಲಾರದು: ಬಿಜೆಪಿ ಶಾಸಕ ಮಾನಪ್ಪ ವಜ್ಜಲ್



ರಾಯಚೂರು: ಮುಂದಿನ ಲೋಕಸಭೆ ಚುನಾವಣೆಗಾಗಿ ಈಗಾಗಲೇ ಪಕ್ಷಗಳು ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದ್ದು, ಒಂದು ಪಕ್ಷದಿಂದ ಇನ್ನೊಂದು ಪಕ್ಷಕ್ಕೆ ಪಕ್ಷಾಂತರ ಪರವಾಗಿ ಕೂಡ ತೆರೆಮರೆಯಲ್ಲಿ ನಡೆಯುತ್ತಿದೆ. ಇದರ ಬೆನ್ನಲ್ಲೇ ಇದೀಗ ಬಿಜೆಪಿ ಶಾಸಕರು ಒಬ್ಬರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಹಾಡಿಹೋಗಳಿರುವ ಘಟನೆ ನಡೆದಿದೆ.

ಸಿಎಂ ಸಿದ್ದರಾಮಯ್ಯ ಅವರನ್ನು ಹಾಡಿ ಹೋಗಳಿದ ರಾಯಚೂರು ಜಿಲ್ಲೆ ಲಿಂಗಸೂರು ಕ್ಷೇತ್ರದ ಬಿಜೆಪಿ ಶಾಸಕ ಮಾನಪ್ಪ ವಜ್ಜಲ್ ಅವರು ಈ ರೀತಿ ಹೇಳಿಕೆ ನೀಡಿದ್ದಾರೆ. ಈ ಹಿಂದೆ ಸಿದ್ದರಾಮಯ್ಯ ಸಿಎಂ ಆಗಿದ್ದಾಗ ಎಲ್ಲಾ ಕೆಲಸ ಮಾಡಿಕೊಟ್ಟಿದ್ದಾರೆ ಬಿಜೆಪಿ ಶಾಸಕನಾದರೂ ಕೂಡ ಕ್ಷೇತ್ರದಲ್ಲಿ ಕೇಳಿದ ಎಲ್ಲಾ ಕೆಲಸ ಮಾಡಿಕೊಟ್ಟಿದ್ದಾರೆ ಎಂದು ತಿಳಿಸಿದರು.

ಎಲ್ಲಾ ಸಮುದಾಯದವರನ್ನು ಸಮಾನವಾಗಿ ಕಂಡ ಮಹಾನುಭಾವ ಎಂದ ಶಾಸಕ, ಈ ಹಿನ್ನೆಲೆಯಲ್ಲಿ ಸಿಎಂ ಸಿದ್ದರಾಮಯ್ಯವರನ್ನು ಎರಡನೇ ದೇವರಾಜ ಅರಸು ಅಂದರೆ ತಪ್ಪಾಗಲಾರದು ಎಂದು ಸಿಎಂ ಬಗ್ಗೆ ಬಿಜೆಪಿ ಶಾಸಕ ಮಾನಪ್ಪಾ ವಜ್ಜಲ್ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

## ಪ್ರಧಾನಿ ಮೋದಿ ಗುರಿಯಾಗಿಸಿ ಪನೌತಿ, ಜೇಬುಗಳ್ಳ ಹೇಳಿಕೆ: ರಾಹುಲ್ ಗಾಂಧಿಗೆ ಇಸಿ ನೋಟಿಸ್



ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಅವರನ್ನು ಗುರಿಯಾಗಿಸಿಕೊಂಡು 'ಪನೌತಿ', 'ಪಿಕ್‌ಪಾಕೆಟ್' ಮತ್ತು ಉದ್ಯಮಿಗಳ ಸಾಲ ಮನ್ನಾಗಾರ ಹೇಳಿಕೆ ನೀಡಿದ್ದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರಿಗೆ ಚುನಾವಣಾ ಆಯೋಗ(ಇಸಿ) ಗುರುವಾರ ಶೋಕಾಸ್ ನೋಟಿಸ್ ಜಾರಿ ಮಾಡಿದ್ದು, ಶನಿವಾರ ಸಂಜೆಯೊಳಗೆ ಉತ್ತರಿಸುವಂತೆ ಸೂಚಿಸಿದೆ.

ಈ ಸಂಬಂಧ ಆಡಳಿತಾರೂಢ ಭಾರತೀಯ ಜನತಾ ಪಕ್ಷ(ಬಿಜೆಪಿ), ಕಾಂಗ್ರೆಸ್ ಮಾಜಿ ಅಧ್ಯಕ್ಷರ ವಿರುದ್ಧ ಚುನಾವಣಾ ಆಯೋಗಕ್ಕೆ ದೂರು ನೀಡಿದ್ದು, ಹಿರಿಯ ನಾಯಕರೊಬ್ಬರು ಇಂತಹ ಭಾಷೆಯನ್ನು ಬಳಸುವುದು "ಅಯೋಗ್ಯ" ಎಂದು ಕಿಡಿ ಕಾರಿತ್ತು.

ರಾಜಕೀಯ ಪ್ರತಿಸ್ಪರ್ಧಿಗಳ ವಿರುದ್ಧ ಆಧಾರ ರಹಿತ ಆರೋಪಗಳನ್ನು ಮಾಡುವುದು ಮಾದರಿ ನೀತಿ ಸಂಹಿತೆ ಉಲ್ಲಂಘನೆ ಎಂದಿರುವ ಬಿಜೆಪಿ ನಾಯಕರು, ರಾಹುಲ್ ಗಾಂಧಿ ವಿರುದ್ಧ ಕ್ರಮ ತೆಗೆದುಕೊಳ್ಳುವಂತೆ ಇಸಿಗೆ ಒತ್ತಾಯಿಸಿದ್ದರು. ಪಿಎಂ ಎಂದರೆ 'ಪನೌತಿ' ಎಂದು ರಾಹುಲ್ ಗಾಂಧಿ ಹೇಳಿದ್ದರು. ಉದ್ಯಮಿ ಗೌತಮ್ ಅದಾನಿ ಅವರು ಜನರ ಜೇಬಿಗೆ ಕನ್ನಾ ಹಾಕುವಾಗ ಮೋದಿ ಜನರ ಗಮನವನ್ನು ಬೇರೆಡೆಗೆ ತಿರುಗಿಸುತ್ತಾರೆ ಎಂದು ವಾಗ್ದಾಳಿ ನಡೆಸಿದ್ದರು. ಭಾರತ ಕ್ರಿಕೆಟ್ ತಂಡಕ್ಕೆ ಪ್ರಧಾನಿ ಮೋದಿ ದುರಾದೃಷ್ಟ ತಂದರು ಎಂದು ಹೀಗಳೆದಿದ್ದರು. ಹಿಂದಿಯ ಪನೌತಿ ಎಂಬ ಪದಕ್ಕೆ ಕನ್ನಡದಲ್ಲಿ ಅಪಶಕುನ ಎನ್ನಲಾಗುತ್ತದೆ.

## ಉತ್ತರಕಾಶಿ ಸುರಂಗದಲ್ಲಿ ಸಿಲುಕಿದವರನ್ನು ತಲುಪಲು ಇನ್ನೂ 12–14 ಗಂಟೆ ತೆಗೆದುಕೊಳ್ಳುತ್ತದೆ: ಖುಲ್ಬೆ



ಡೆಹ್ರಾಡೂನ್: ಉತ್ತರಾಖಂಡದ ಉತ್ತರಕಾಶಿಯ ಸಿಲ್ಕ್ಯಾರಾದಲ್ಲಿ ನಿರ್ಮಾಣ ಹಂತದ ಸುರಂಗದಲ್ಲಿ ಸಿಲುಕಿರುವ 41 ಕಾರ್ಮಿಕರನ್ನು ರಕ್ಷಿಸುವ ಕಾರ್ಯಾಚರಣೆ 12ನೇ ದಿನವಾದ ಗುರುವಾರವೂ ಮುಂದುವರೆದಿದ್ದು, ಕಾರ್ಮಿಕರನ್ನು ತಲುಪಲು ಇನ್ನು 12 ರಿಂದ 14 ಗಂಟೆ ತೆಗೆದುಕೊಳ್ಳುತ್ತದೆ ಎಂದು ಹಿರಿಯ ಅಧಿಕಾರಿಯೊಬ್ಬರು ಹೇಳಿದ್ದಾರೆ.

ಕಾರ್ಮಿಕರನ್ನು ಕರೆತರಲು ಮಾರ್ಗ ಸೃಷ್ಟಿಸುವ ಕೊರೆಯುವ ಯಂತ್ರಕ್ಕೆ ಅಡ್ಡ ಬಂದ ಕಬ್ಬಿಣದ ಜಾಲರಿಯನ್ನು ಗುರುವಾರ ಬೆಳಗ್ಗೆ ತೆಗೆದುಹಾಕಲಾಯಿತು. ಆದರೆ ರಕ್ಷಣಾ ಕಾರ್ಯಾಚರಣೆ 12 ರಿಂದ 14 ಗಂಟೆಗಳ ಕಾಲ ವಿಳಂಬವಾಗಲಿದೆ ಎಂದು ಪ್ರಧಾನಿ ಕಚೇರಿಯ ಮಾಜಿ ಸಲಹೆಗಾರ ಭಾಸ್ಕರ್ ಖುಲ್ಬೆ ಅವರು ತಿಳಿಸಿದ್ದಾರೆ.

ಪೈಪ್‌ನ ಒಳಗಿನ ಕ್ಲಾಸ್ಟ್ರೋಫೋಬಿಕ್ ವಾತಾವರಣದಲ್ಲಿ ಜಾಲರಿ ತೆಗೆಯುವುದು ಅತ್ಯಂತ ಕಷ್ಟಕರವಾಗಿತ್ತು ಎಂದು ಅವರು ಹೇಳಿದ್ದಾರೆ.

"ಜಾಲರಿ ತೆಗೆದುಹಾಕಲು ನಮಗೆ ಆರು ಗಂಟೆಗಳು ಬೇಕಾಯಿತು. ಆದರೆ ಒಳ್ಳೆಯ ಸುದ್ದಿ ಏನೆಂದರೆ 45 ಮೀಟರ್ ವರೆಗೆ ಕೊರೆತದ ನಂತರ ನಿನ್ನೆ ಬಂದ ಅಡಚಣೆಯನ್ನು ನಾವು ತೆರವುಗೊಳಿಸಿದ್ದೇವೆ" ಎಂದು ಖುಲ್ಬೆ ಸುದ್ದಿಗಾರರಿಗೆ ತಿಳಿಸಿದ್ದಾರೆ.

ಈಗ ಪೈಪ್‌ಗಳನ್ನು 45 ಮೀಟರ್‌ಗೂ ಹೆಚ್ಚು ರವಾನಿಸಲು ವೆಲ್ಡಿಂಗ್ ಮಾಡಿ ಪೈಪ್ ಜೋಡಿಸುವ ಪ್ರಕ್ರಿಯೆ ಪುನರಾರಂಭವಾಗಿದೆ. ಕೊರೆಯುವ ಕಾರ್ಯವೂ ಶೀಘ್ರವೇ ಪುನರಾರಂಭವಾಗಲಿದೆ ಎಂದಿದ್ದಾರೆ.

ಕಾರ್ಮಿಕರನ್ನು ತಲುಪುವ ಸಂಪೂರ್ಣ ಕಾರ್ಯಾಚರಣೆಯನ್ನು ಪೂರ್ಣಗೊಳಿಸಲು ಇನ್ನೂ ಸುಮಾರು 12 ರಿಂದ 14 ಗಂಟೆಗಳನ್ನು ತೆಗೆದುಕೊಳ್ಳುತ್ತದೆ. ಅದರ ನಂತರ, ಕಾರ್ಮಿಕರನ್ನು ಒಬ್ಬೊಬ್ಬರಾಗಿ ಹೊರತೆಗೆಯಲು ಇನ್ನೂ ಮೂರು ಗಂಟೆಗಳು ಬೇಕಾಗುತ್ತದೆ. ಅದನ್ನು ಎನ್‌ಡಿಆರ್‌ಎಫ್ ಸಹಾಯದಿಂದ ಮಾಡಲಾಗುವುದು ಎಂದು ಖುಲ್ಬೆ ಹೇಳಿದ್ದಾರೆ.

## ಸುಪ್ರೀಂ ಕೋರ್ಟ್‌ನ ಮೊದಲ ಮಹಿಳಾ ನ್ಯಾಯಮೂರ್ತಿ ಫಾತಿಮಾ ಬೀವಿ ನಿಧನ



ನವದೆಹಲಿ: ಭಾರತದ ಸರ್ವೋಚ್ಚ ನ್ಯಾಯಾಲಯಕ್ಕೆ ನೇಮಕಗೊಂಡ ಮೊದಲ ಮಹಿಳಾ ನ್ಯಾಯಾಧೀಶರಾದ ಜಸ್ಟಿಸ್ ಎಂ. ಫಾತಿಮಾ ಬೀವಿ ಅವರು ಗುರುವಾರ ನಿಧನಹೊಂದಿದರು. ಅವರಿಗೆ 96 ವರ್ಷ ವಯಸ್ಸಾಗಿತ್ತು.

ಮೂರು ದಿನಗಳ ಹಿಂದೆ ಅವರ ಆರೋಗ್ಯ ಸ್ಥಿತಿ ಹದಗೆಟ್ಟ ಹಿನ್ನೆಲೆಯಲ್ಲಿ ಅವರನ್ನು ಕೊಲ್ಲಂನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು ಆದರೆ ಇಂದು ನಿಧನ ಹೊಂದಿದ್ದಾರೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

ನ್ಯಾಯಮೂರ್ತಿ ಬೀವಿ ಅವರು ಭಾರತದ ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರಾದ ಮೊದಲ ಮಹಿಳೆ. ದೇಶದ ಉನ್ನತ ನ್ಯಾಯಾಂಗಕ್ಕೆ ನೇಮಕಗೊಂಡ ಮೊದಲ ಮುಸ್ಲಿಂ ಮಹಿಳೆಯೂ ಕೂಡ ಆಗಿದ್ದರು.

ಫಾತಿಮಾ ಬೀವಿ ಅವರು ಏಪ್ರಿಲ್ 30, 1927 ರಂದು ಪಥನಂತಿಟ್ಟದಲ್ಲಿ ಜನಿಸಿದರು. 1950 ರಲ್ಲಿ, ಅವರು ಬಾರ್ ಕೌನ್ಸಿಲ್ ಪರೀಕ್ಷೆಯಲ್ಲಿ ಅಗ್ರಸ್ಥಾನ ಪಡೆದು ಚಿನ್ನದ ಪದಕವನ್ನು ಪಡೆದ ಮೊದಲ ಮಹಿಳೆಯಾದರು.

ಅವರು ಕೇರಳದಲ್ಲಿ ವಕೀಲರಾಗಿ ತಮ್ಮ ವೃತ್ತಿಜೀವನವನ್ನು ಪ್ರಾರಂಭಿಸಿದರು ಮತ್ತು 1974 ರಲ್ಲಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದರು. 1980 ರಲ್ಲಿ, ಅವರು ಆದಾಯ ತೆರಿಗೆ ಮೇಲ್ಮನವಿ ನ್ಯಾಯಮಂಡಳಿಯನ್ನು ಸೇರಿದರು ಮತ್ತು 1983 ರಲ್ಲಿ ಹೈಕೋರ್ಟ್ ನ್ಯಾಯಾಧೀಶರಾಗಿ ನೇಮಕಗೊಂಡರು.

1989ರಲ್ಲಿ ಸುಪ್ರೀಂ ಕೋರ್ಟ್‌ಗೆ ನೇಮಕಗೊಂಡ ಮೊದಲ ಮಹಿಳೆ ಎಂಬ ಹೆಗ್ಗಳಿಕೆಗೆ ಪಾತ್ರರಾದರು. ಸುಪ್ರೀಂ ಕೋರ್ಟ್ ನ್ಯಾಯಾಧೀಶರಾಗಿ, ಅವರು ಉನ್ನತ ನ್ಯಾಯಾಂಗದಲ್ಲಿ ಮೊದಲ ಮುಸ್ಲಿಂ ಮಹಿಳೆ ಮತ್ತು ಏಷ್ಯಾದ ದೇಶದಲ್ಲಿ ಸುಪ್ರೀಂ ಕೋರ್ಟ್ ನ್ಯಾಯಾಧೀಶರಾದ ಮೊದಲ ಮಹಿಳೆಯಾಗಿದ್ದಾರೆ.

1993 ರಲ್ಲಿ ನಿವೃತ್ತರಾದ ನಂತರ ಅವರು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಸದಸ್ಯರಾಗಿ ಮತ್ತು ನಂತರ ತಮಿಳುನಾಡಿನ ರಾಜ್ಯಪಾಲರಾಗಿ ಸೇವೆ ಸಲ್ಲಿಸಿದರು. ರಾಜೀವ್ ಗಾಂಧಿ ಹತ್ಯೆ ಪ್ರಕರಣದಲ್ಲಿ ನಾಲ್ವರು ಅಪರಾಧಿಗಳ ಕ್ಷಮಾದಾನ ಅರ್ಜಿಯನ್ನು ತಿರಸ್ಕರಿಸಿದ ನಂತರ ಅವರು ತಮಿಳುನಾಡು ರಾಜ್ಯಪಾಲ ಹುದ್ದೆಗೆ ರಾಜೀನಾಮೆ ನೀಡಿದರು.

## ಒಂದೆ ಕುರ್ಚಿಗಾಗಿ ಇಬ್ಬರು ಸರ್ಕಾರಿ ಅಧಿಕಾರಿಗಳ ಗುದ್ದಾಟ




ಯಾದಗಿರಿ: ಒಂದೇ ಸರ್ಕಾರಿ ಹುದ್ದೆಗಾಗಿ ಇಬ್ಬರು ಅಧಿಕಾರಿಗಳು ಗುದ್ದಾಟ ನಡೆಸಿ, ಇಬ್ಬರೂ ಅಧಿಕಾರಿಗಳು ಪ್ರತ್ಯೇಕ ಕುರ್ಚಿ ಹಾಕಿಕೊಂಡು ಕುಳಿತ ಘಟನೆ ಯಾದಗಿರಿ ತಾಲೂಕು ಸಮಾಜ ಕಲ್ಯಾಣ ಇಲಾಖೆ ಕಚೇರಿಯಲ್ಲಿ ನಡೆದಿದೆ.

ನಗರದ ಹೊಸಳ್ಳಿ ಕ್ರಾಸ್ ಬಳಿಯಿರುವ ಸಮಾಜ ಕಲ್ಯಾಣ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಸಂಗಪ್ಪ ಪೂಜಾರಿ ಹಾಗೂ ಡಿ.ರಾಜಕುಮಾರ್ ಎಂಬ ಇಬ್ಬರು ಅಧಿಕಾರಿಗಳ ಮಧ್ಯೆ ಕುರ್ಚಿಗಾಗಿ ಕಿತ್ತಾಟ ನಡೆಯುತ್ತಿದೆ. ಇದರಿಂದ ಇಲಾಖೆಯ ಕೆಲಸ ಕಾರ್ಯಗಳಿಗೆ ಕಚೇರಿಗೆ ಬಂದಿರುವ ಸಾರ್ವಜನಿಕರು ಒಂದೇ ಹುದ್ದೆಯಲ್ಲಿ ಇಬ್ಬರು ಅಧಿಕಾರಿಗಳನ್ನ ಕಂಡು ಗೊಂದಲಕ್ಕೆ ಸಿಲುಕಿದ್ದಾರೆ. ಇವರ ರಗಳೆ ನೋಡಲಾರದೇ ಪರಿಸ್ಥಿತಿ ತಿಳಿಯಾದ ಮೇಲೆ ಬರೋಣ ಎಂದು ಜನರು ಕಚೇರಿಗೆ ಬಂದು ವಾಪಸ್ ಹೋಗುತ್ತಿದ್ದಾರೆ.

ಸಂಗಪ್ಪ ಅವರು ಫೆ.1 ರಿಂದ ಅ.16ರ ವರೆಗೆ ಸಹಾಯಕ ನಿರ್ದೇಶಕರ ಹುದ್ದೆಯಲ್ಲಿ ಕೆಲಸ ಮಾಡಿದ್ದಾರೆ. ಇನ್ನೂ ರಾಜಕುಮಾರ್ ಅವರು ಇದೇ ಹುದ್ದೆಗೆ ಸರ್ಕಾರದಿಂದ ಆದೇಶ ತಂದು ಅಕ್ಟೋಬರ್ 16 ರಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ಈ ಆದೇಶವನ್ನು ಪ್ರಶ್ನಿಸಿ ಸಂಗಪ್ಪ ಪೂಜಾರಿ ಅವರು ಅವಧಿಗೂ ಮುನ್ನವೆ ನನ್ನ ಜಾಗಕ್ಕೆ ಮತ್ತೊಬ್ಬರಿಗೆ ಆದೇಶ ಆಗಿದೆ ಎಂದು ಪ್ರಶ್ನಿಸಿ ಕಲಬುರಗಿ ಹೈಕೋರ್ಟ್ (High Court) ವಿಭಾಗೀಯ ಪೀಠದ ಮೊರೆ ಹೋಗಿದ್ದರು.

ಕೋರ್ಟ್ ಸಂಗಪ್ಪ ಪರ ತೀಪು ನೀಡಿ, ಹುದ್ದೆಯಲ್ಲಿ ಮುಂದೆವರಿಯುವಂತೆ ಆದೇಶ ಹೊರಡಿಸಿದೆ. ಇದೇ ವೇಳೆ ರಾಜಕುಮಾರ್ಗೆ ಆಗಿರುವ ಆದೇಶವನ್ನ ಕೋರ್ಟ್ ರದ್ದು ಮಾಡಿದೆ ಎಂದು ಸಂಗಪ್ಪ ಅವರು ತಮ್ಮ ವಾದ ಮಂಡಿಸಿದ್ದಾರೆ. ನನಗೆ ಸರ್ಕಾರದಿಂದ ಆದೇಶ ಇದೆ ಎಂದು ರಾಜಕುಮಾರ್ ಅವರು ಕಚೇರಿಯಲ್ಲಿ ಕುಳಿತಿದ್ದಾರೆ.

## ರೈತನ ಕಾರ್ ಗ್ಲಾಸ್ ಒಡೆದು 10 ಲಕ್ಷ ರೂ. ಕಳವು



ಚಿತ್ರದುರ್ಗ: ಕಾರಿನ ಗ್ಲಾಸ್ ಒಡೆದು ಅದರಲ್ಲಿದ್ದ 10 ಲಕ್ಷ ರೂ. ಹಣವನ್ನು ಕಳ್ಳರು ದೋಚಿದ ಘಟನೆ ಹೊಸದುರ್ಗದಲ್ಲಿ ನಡೆದಿದೆ.

ಲಕ್ಕಿಹಳ್ಳಿ ಗ್ರಾಮದ ರೈತ ಮುದ್ದಪ್ಪ ಎಂಬವರು ಬ್ಯಾಂಕ್ನಿಂದ ಹಣ ಡ್ರಾ ಮಾಡಿಕೊಂಡು ಬಂದು ಕಾರಲ್ಲಿಟ್ಟಿದ್ದರು. ಬಳಿಕ ರಸ್ತೆ ಬದಿಯಲ್ಲಿನ ಅಂಗಡಿಯೊಂದಕ್ಕೆ ತೆರಳಿದ್ದರು. ವಾಪಸ್ ಬರುವಷ್ಟರಲ್ಲಿ ಬೈಕಲ್ಲಿ ಬಂದ ಇಬ್ಬರು ಚಾಲಕಿ ಕಳ್ಳರು ಹಣದ ಬ್ಯಾಗ್ ಕಳವು ಮಾಡಿಕೊಂಡು ಪಾರಾರಿಯಾಗಿದ್ದಾರೆ. ಕಳ್ಳರು ರೈತನ ಚಲನವಲನ ಗಮನಿಸಿಕೊಂಡು ಬಂದಿದ್ದು, ಈ ಕೃತ್ಯ ಎಸಗಿದ್ದಾರೆ. ಕಳ್ಳರ ಕೈಚಳಕ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಈ ವೀಡಿಯೋ ಎಲ್ಲೆಡೆ ವೈರಲ್ ಆಗಿದೆ. ಹಾಡಹಗಲೇ ಕಳ್ಳತನ ಆಗಿರುವುದರಿಂದ ನಗರದ ಜನರು ಆತಂಕಕ್ಕೆ ಒಳಗಾಗಿದ್ದಾರೆ. ಈ ಸಂಬಂಧ ಹೊಸದುರ್ಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಳ್ಳರ ಬಂಧನಕ್ಕೆ ಪೊಲೀಸರು ಬಲೆ ಬೀಸಿದ್ದಾರೆ.

## ಒಂದು ವಾರದೊಳಗೆ ಗೃಹಲಕ್ಷ್ಮಿ ಅದಾಲತ್ ಆರಂಭ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್



ಬೆಂಗಳೂರು: ಗೃಹಲಕ್ಷ್ಮಿ ಯೋಜನೆಗೆ ಉಂಟಾಗಿರುವ ಸಣ್ಣಪುಟ್ಟ ಸಮಸ್ಯೆಗಳಿಗೆ ಶೀಘ್ರವೇ ಪರಿಹಾರ ಸಿಗಲಿದ್ದು, ಇದಕ್ಕಾಗಿ ಇನ್ನೊಂದು ವಾರದಲ್ಲಿ ಗೃಹಲಕ್ಷ್ಮಿ ಅದಾಲತ್ ಆರಂಭಿಸಲಾಗುವುದು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಈಗಾಗಲೇ 1 ಕೋಟಿ 10 ಲಕ್ಷ ಮಹಿಳೆಯರಿಗೆ ಈ ಯೋಜನೆಯ ಹಣ ತಲುಪಿದ್ದು, ಪಿಡಿಓ, ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಬಾಕಿ ಉಳಿದಿರುವ ಫಲಾನುಭವಿಗಳಿಗೆ ಆಯಾ ಪಂಚಾಯಿತಿ, ಪುರಸಭೆ, ನಗರಸಭೆ ವ್ಯಾಪ್ತಿಯಲ್ಲಿ ಸಭೆ ನಡೆಸಿ ಹಣ ಹಾಕುವ ವ್ಯವಸ್ಥೆ ಮಾಡಲಾಗುವುದು ಎಂದರು.

ಈಗಾಗಲೇ ಮೂರು ಕಂತಿನ ದುಡ್ಡು ಬಾರದೇ ಇದ್ದವರಿಗೆ ಏಕಕಾಲಕ್ಕೆ ಆರು ಸಾವಿರ ದುಡ್ಡು ಹಾಕುವ ಪ್ರಕ್ರಿಯೆ ನಡೆಯುತ್ತಿದೆ ಎಂದರು. ಗೃಹಲಕ್ಷ್ಮಿ ಯೋಜನೆಗೆ ಸುಮಾರು 50 ಸಾವಿರ ತೆರಿಗೆದಾರರು ಕೂಡ ಅರ್ಜಿ ಹಾಕಿದ್ದು, ಅರ್ಜಿಗಳನ್ನು ನಿರಾಕರಿಸಿ ಡಿಲೀಟ್ ಮಾಡಲಾಗಿದೆ ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದ್ದಾರೆ.

## ರಮೇಶ್ ಜಾರಕಿಹೊಳಿ ಮನೆಗೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಭೇಟಿ



ಬೆಂಗಳೂರು: ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷರಾದ ಬಳಿಕ ಬಿ.ವೈ. ವಿಜಯೇಂದ್ರ ಇಂದು ಶಾಸಕ ರಮೇಶ್ ಜಾರಕಿಹೊಳಿ ಮನೆಗೆ ಭೇಟಿ ನೀಡಿದರು.

ಸದಾಶಿವ ನಗರದ ರಮೇಶ್ ಜಾರಕಿಹೊಳಿ ನಿವಾಸಕ್ಕೆ ಬೆಳಗ್ಗೆ ವಿಜಯೇಂದ್ರ ಭೇಟಿ ನೀಡಿದರು. ಈ ವೇಳೆ ವಿಜಯೇಂದ್ರಗೆ ಜಾರಕಿಹೊಳಿ ಹೂಗುಚ್ಛ ನೀಡಿ ಅಭಿನಂದನೆ ಸಲ್ಲಿಸಿದರು. ಇಬ್ಬರೂ ಒಟ್ಟಿಗೆ ಕುಳಿತು ಉಪಾಹಾರ ಸೇವಿಸಿದರು.

ವಿಜಯೇಂದ್ರ ನೇಮಕ ಹಾಗೂ ವಿಪಕ್ಷ ನಾಯಕ ಸ್ಥಾನವನ್ನು ಉತ್ತರ ಕರ್ನಾಟಕಕ್ಕೆ ಕೊಡದ ಹಿನ್ನೆಲೆಯಲ್ಲಿ ರಮೇಶ್ ಜಾರಕಿಹೊಳಿ ಅತೃಪ್ತಿಗೊಂಡಿದ್ದರು. ಹೀಗಾಗಿ ಅವರ ಮನವೊಲಿಕೆಗೆ ವಿಜಯೇಂದ್ರ ಮುಂದಾಗಿದ್ದಾರೆ.

ರಮೇಶ್ ಜಾರಕಿಹೊಳಿ ಭೇಟಿ ಬಳಿಕ ಮಾತನಾಡಿದ ವಿಜಯೇಂದ್ರ, ರಮೇಶ್ ಜಾರಕಿಹೊಳಿ ಅವರ ನಡೆ ಬಗ್ಗೆ ಹಲವು ರೀತಿಯಲ್ಲಿ ಚರ್ಚೆ ನಡೆಯುತ್ತಿತ್ತು. ಕೆಲವು ಸಲ ಅವರು ಅಸಮಾಧಾನ ತೋಡಿಕೊಂಡಿದ್ದರು. ನನ್ನ ಜವಾಬ್ದಾರಿ ಎಲ್ಲರನ್ನೂ ಪಕ್ಷದಲ್ಲಿ ಜೊತೆಗೆ ಕರೆದೊಯ್ಯುವುದು.

ಈ ಹಿನ್ನೆಲೆಯಲ್ಲಿ ರಮೇಶ್ ಜಾರಕಿಹೊಳಿ ಭೇಟಿ ಮಾಡಿ ಅರ್ಧ ಗಂಟೆ ಚರ್ಚೆ ಮಾಡಿದ್ದೇನೆ. ಮೋದಿಯವರು ಮತ್ತೆ ಪ್ರಧಾನಿ ಆಗಬೇಕು. ಪಕ್ಷದಲ್ಲಿ ಸಹಕಾರ ಕೊಡ್ತೇನೆ ಅಂತ ಹೇಳಿದ್ದಾರೆ ಎಂದು ಖುಷಿ ವ್ಯಕ್ತಪಡಿಸಿದರು.

ಅವರಿಗೂ ಕೆಲವು ಸಣ್ಣಪುಟ್ಟ ಅಸಮಧಾನ ಇದ್ದವು. ಅದರ ಬಗ್ಗೆ ಮಾತಾಡಿದ್ದಾರೆ. ಇವತ್ತು ಭೇಟಿ ಮಾಡಿ ಮಾತನಾಡಿದ್ದೇನೆ. ಅವರ ಹಲವು ವಿಚಾರ ಮಾತನಾಡಿದ್ದಾರೆ. ವರಿಷ್ಠರು ನಿಮಗೆ ರಾಜ್ಯಾಧ್ಯಕ್ಷ ಸ್ಥಾನ ನೀಡಿದ್ದಾರೆ.

ಇದರ ಬಗ್ಗೆ ಅಸಮಾಧಾನ ಇಲ್ಲ ಅಂದಿದ್ದಾರೆ. ಮೋದಿ ಕೈಬಲಪಡಿಸಬೇಕು ಎಂದಿದ್ದಾರೆ. ಪಕ್ಷದ ಹಿರಿಯರು ಏನೇ ಹೇಳಿಕೆ ನೀಡಿದರೂ ಗಂಭೀರವಾಗಿ ತೆಗೆದುಕೊಳ್ಳುತ್ತೇನೆ. ಎಲ್ಲರನ್ನೂ ವಿಶ್ವಾಸಕ್ಕೆ ಪಡೆಯುತ್ತೇನೆ ಎಂದು ತಿಳಿಸಿದರು.

# ಸುವರ್ಣಸೌಧದಲ್ಲಿ ರಂಗೇರಲಿದೆ ರಾಜಕೀಯ



ಬೆಳಗಾವಿ: ಡಿ. 4ರಿಂದ ವಿಧಾನಮಂಡಲ ಅಧಿವೇಶನ ಬೆಳಗಾವಿಯಲ್ಲಿ ಆರಂಭವಾಗಲಿದ್ದು, ಇಡೀ ರಾಜ್ಯಾಡಳಿತವೇ ಕುಂದಾನಗರಿಗೆ ಶಿಫ್ಟ್ ಆಗಲಿದೆ.

ಕರ್ನಾಟಕ ವಿಧಾನ ಮಂಡಲದ 151ನೇ ಅಧಿವೇಶನ ಬೆಳಗಾವಿಯ ಸುವರ್ಣ ವಿಧಾನ ಸೌಧದಲ್ಲಿ ರಂಗೇರಲಿದ್ದು, ಹೊರಗಡೆ ಚಳಿಯಿದ್ದರೆ, ಸದನದ ಒಳಗೆ ಬಿಸಿ ಹೆಚ್ಚಾಗಲಿದೆ. ಇದೇ ವೇಳೆ ಸಿಎಂ ಸಿದ್ದರಾಮಯ್ಯ ಸರ್ಕಾರಕ್ಕೆ ಸಾಲು ಸಾಲು ಪ್ರತಿಭಟನೆಗಳ ಬಿಸಿ ತಟ್ಟಲಿದೆ. ಮುಖ್ಯವಾಗಿ ಈ ಅಧಿವೇಶನದಲ್ಲಿ ಗಡಿವಿವಾದದ ಕಾವು ಮತ್ತಷ್ಟು ಹೆಚ್ಚಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ಈ ಅಧಿವೇಶನ ಅತ್ಯಂತ ಮಹತ್ವ ಪಡೆದುಕೊಂಡಿದೆ.

**10 ದಿನಗಳ ಕಾಲ ನಡೆಯಲಿದೆ ಅಧಿವೇಶ:** ಡಿ. 4ರಿಂದ ಆರಂಭವಾಗುವ ಅಧಿವೇಶನ ಡಿಸೆಂಬರ್ 15 ರವರೆಗೆ ನಡೆಯಲಿದೆ. 10 ದಿನಗಳ ಕಾಲ ಸುವರ್ಣಸೌಧದಲ್ಲಿ ನಡೆಯಲಿದ್ದು, ಆಡಳಿತಾರೂಢ ಕಾಂಗ್ರೆಸ್ ಮತ್ತು ಪ್ರಮುಖ ಪ್ರತಿಪಕ್ಷ ಬಿಜೆಪಿ ಸದಸ್ಯರ ಆರೋಪ–ಪ್ರತ್ಯಾರೋಪಗಳಿಗೆ ಈ ಅಧಿವೇಶನ ವೇದಿಕೆಯಾಗಲಿದೆ. ಇನ್ನು ಸುವರ್ಣಸೌಧ ಕೂಗಳೆಯಲ್ಲಿ ರೈತ ಸಂಘಟನೆಗಳು ಹಾಗೂ ವಿವಿಧ ಸಂಘಟನೆಗಳಿಂದ ಪ್ರತಿಭಟನೆಗಳು ಸಹ ನಡೆಯಲಿವೆ.

ಜನಪ್ರತಿನಿಧಿಗಳಿಗೆ ಆತಿಥ್ಯ ನೀಡಲು ಮುಂದಾದ ರೈತರು: ಬೆಳಗಾವಿಯಲ್ಲಿ ನಡೆಯುವ ಚಳಿಗಾಲ ಅಧಿವೇಶನಕ್ಕೆ ಬರುವ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳಿಗೆ ಆತಿಥ್ಯ ನೀಡಲು ಜಿಲ್ಲೆಯ ರೈತರು ಸಜ್ಜಾಗಿದ್ದಾರೆ. ಭೀಕರ ಬರಗಾಲ ಹಿನ್ನೆಲೆ ದುಂದು ವೆಚ್ಚಕ್ಕೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಅಧಿವೇಶನ ಮುಗಿಯೋವರೆಗೂ ನಮ್ಮ ಮನೆಯಲ್ಲಿ ಇರುವಂತೆ ಬಹಿರಂಗ ಆಹ್ವಾನ ಕೊಟ್ಟಿದ್ದಾರೆ.

ಇನ್ನು ಅಧಿವೇಶನಕ್ಕೆ ಬರುವ ಶಾಸಕರು, ಮಂತ್ರಿ ಮಹೋದಯರು ಮತ್ತು ಅಧಿಕಾರ ವರ್ಗ ಉಳಿದುಕೊಳ್ಳಲು, ಊಟ – ಉಪಚಾರಕ್ಕೆ ಕೋಟಿ, ಕೋಟಿ ಖರ್ಚಾಗುತ್ತದೆ. ಈ ಆರ್ಥಿಕ ಹೊರೆ ತಗ್ಗಿಸಲು ಬೆಳಗಾವಿ ಜಿಲ್ಲೆಯ ರೈತರು ಮುಖ್ಯಮಂತ್ರಿ ಸಹಿತ, ಸಚಿವರು, ಆಡಳಿತ ಮತ್ತು ವಿರೋಧ ಪಕ್ಷದ ಶಾಸಕರು ಹಾಗೂ ಪರಿಷತ್ ಸದಸ್ಯರಿಗೆ ತಮ್ಮ ಮನೆಗಳಲ್ಲಿ ವಸತಿ ಮತ್ತು ಊಟದ ವ್ಯವಸ್ಥೆ ಮಾಡಲು ಮುಂದಾಗಿದ್ದಾರೆ.

ಸದನಕ್ಕೆ ಅಡ್ಡಿ ಆಗುತ್ತಾ ಗಡಿ ವಿವಾದ ಕಿಚ್ಚು? ಗಡಿ ವಿಷಯ ಈ ಬಾರಿ ಪ್ರಮುಖ ಚರ್ಚಿತ ವಿಷಯವಾಗಲಿದೆ. ಬೆಳಗಾವಿಯಲ್ಲಿ ಅಧಿವೇಶನ ನಡೆಯುತ್ತಿರುವುದರಿಂದ ಈ ವಿಷಯದ ಚರ್ಚೆಗೆ ಹೆಚ್ಚಿನ ಮಹತ್ವ ಬದಲಿದೆ. ಈ ವಿಚಾರದಲ್ಲಿ ಸರ್ಕಾರ ತನ್ನ ನಿಲುವನ್ನು ಸದನದಲ್ಲಿ ಅಧಿಕೃತವಾಗಿ ಮತ್ತೊಮ್ಮೆ ಸ್ಪಷ್ಟಪಡಿಸುವ ಮೂಲಕ ರಾಜ್ಯದ ನೆಲ, ಜಲ, ಗಡಿ, ಭಾಷೆ ವಿಚಾರದಲ್ಲಿ ರಾಜಿಯಿಲ್ಲ ಎನ್ನುವುದನ್ನು ಸ್ಪಷ್ಟಪಡಿಸಿ ಪ್ರತಿಪಕ್ಷಗಳಿಗೆ ತಿರುಗೇಟು ನೀಡಲಿದೆ.

**ವಿಪಕ್ಷಗಳನ್ನು ಕಟ್ಟಿ ಹಾಕಲು ಕೈ ಪ್ಲಾನ್:** ಇನ್ನು ಅಧಿವೇಶದಲ್ಲಿ ವಿಪಕ್ಷಗಳನ್ನು ಕಟ್ಟಿ ಹಾಕಲು ಕಾಂಗ್ರೆಸ್ ಸರ್ಕಾರ ಕೂಡ ನಾನಾ ರಣತಂತ್ರ ರೂಪಿಸಿದೆ. ಇನ್ನು ವಿಪಕ್ಷಗಳ ನಾಯಕರು ನೀಡಿದ್ದ ಹೇಳಿಕೆಯನ್ನಿಟ್ಟುಕೊಂಡು ಬಿಜೆಪಿ ವಿರುದ್ಧ ಹರಿಹಾಯಲು ಕಾಂಗ್ರೆಸ್ ಪ್ಲಾನ್ಮಾಡಿಕೊಂಡಿದೆ ಎಂದು ಹೇಳಲಾಗುತ್ತಿದೆ.

ಬಿಜೆಪಿ ಕೈಯಲ್ಲಿದೆ ವಿವಿಧ ಅಸ್ತ್ರ: ಇನ್ನು ಸರ್ಕಾರಕ್ಕೆ ಬಿಸಿ ಮುಟ್ಟಿಸಲು ಬಿಜೆಪಿ ಈಗಾಗಲೇ ಸಜ್ಜಾಗಿದೆ. ರೈತರ ಬೇಡಿಕೆಗಳು ಮುಂತಾದ ವಿಷಯಗಳನ್ನು ಹಿಡಿದು ವಿರೋಧ ಪಕ್ಷಗಳು ಸರ್ಕಾರದ ವಿರುದ್ಧ ಮುಗಿಬೀಳಲು ಸಿದ್ಧತೆ ಮಾಡಿಕೊಂಡಿದೆ. ಅಲ್ಲದೆ ಸಿಂ ಪುತ್ರ ಯತಿಂದ್ರ ಮಾತನಾಡಿರುವ ಆಡಿಯೋ ಬಗ್ಗೆ ಕೂಡಾ ಸದನದಲ್ಲಿ ಚರ್ಚೆಯಾಗಲಿದೆ.

ಅಧಿವೇಶನದಲ್ಲಿ ಪ್ರತಿಧ್ವನಿಸಲಿದೆ ಮೀಸಲಾತಿ ಕೂಗು: ಎಸ್ಸಿ, ಎಸ್ಟಿ ಸಮುದಾಯಕ್ಕೆ ಮೀಸಲಾತಿ ಘೋಷಿಸಿದ ಬೆನ್ನಲ್ಲೇ, ಪಂಚಮಸಾಲಿಗಳು ಮತ್ತು ಒಕ್ಕಲಿಗರಂತಹ ವಿವಿಧ ಸಮುದಾಯಗಳು ಮೀಸಲಾತಿ ಸಂಬಂಧಿತ ಬೇಡಿಕೆಯನ್ನು ಮುಂದಿಟ್ಟಿದೆ. ರಾಜ್ಯದ ಆರ್ಥಿಕ ಸ್ಥಿತಿ ಹಾಗೂ ಪರಿಶಿಷ್ಟ ಜಾತಿಗಳ ಒಳಮೀಸಲಾತಿ ವಿಷಯವೂ ಈ ಬಾರಿ ಅಧಿವೇಶನದಲ್ಲಿ ಚರ್ಚೆಗೆ ಬರುವ ಸಾಧ್ಯತೆ ಇದೆ.

ಬೆಳಗಾವಿಯಲ್ಲಿ ಪೊಲೀಸರ ಹದ್ದಿನ ಕಣ್ಣು: ಇನ್ನು ಇತ್ತ ಪಂಚಮಸಾಲಿ ಸೇರಿದಂತೆ ರೈತ ಸಂಘಟನೆಗಳು ಸೇರಿ ವಿವಿಧ ಸಂಘಟನೆಗಳು ಪ್ರತಿಭಟನೆಗೆ ಸಜ್ಜಾಗಿದ್ದು ಯಾವುದೇ ಅಹಿತಕರ ಘಟನೆ ನಡೆಯದಂತೆ ಬೆಳಗಾವಿಯಾದ್ಯಂತ ಪೊಲೀಸ್ ಇಲಾಖೆ ಹದ್ದಿನ ಕಣ್ಣಿಡಲು ಸಿದ್ದತೆ ಮಾಡಿಕೊಂಡಿದೆ. ಇನ್ನೂ ಎಂಇಎಸ್ ಸಂಘಟನೆ ಸಹ ಕ್ಯಾತೆ ತೆಗೆಯಲು ಸಿದ್ದತೆ ನಡೆಸಿದೆ. ಒಟ್ಟಾರೆಯಾಗಿ ಈ ಬಾರಿ ನಡೆಯುವ ಚಳಿಗಾಲ ಅಧಿವೇಶನ ವಿವಿಧ ಸಂಘಟನೆ ಹಾಗೂ ಬಿಜೆಪಿ ನೀಡುವ ಬಿಸಿಗೆ ಕೈ ಯಾವ ರೀತಿ ಅಸ್ತ್ರವನ್ನು ಮಾಡಿಕೊಳ್ಳಲಿದೆ ಎಂಬುವುದನ್ನು ಕಾದು ನೋಡಬೇಕಿದೆ.

# ಜನಪರವಾದ ಎಪಿಎಂಸಿ ಕಾಯ್ದೆ ಜಾರಿಗೊಳಿಸಲಾಗುವುದು: ಶಿವಾನಂದ ಎಸ್ ಪಾಟೀಲ್



ಶಿವಮೊಗ್ಗ: ರೈತರು, ವರ್ತಕರು, ಎಪಿಎಂಸಿ ಅವಲಂಬಿತರು ಎಲ್ಲರ ಸಲಹೆಗಳಿಗೆ ಮಾನ್ಯತೆ ನೀಡಿ, ಸಮನ್ವಯತೆಯಿಂದ ಜನಪರ, ರೈತ ಪರವಾದ ಎಪಿಎಂಸಿ ವಿಧೇಯಕ 2023 ನ್ನು ಜಾರಿಗೆ ತರಲಾಗುವುದು ಎಂದು ಜವಳಿ, ಕಬ್ಬು ಅಭಿವೃದ್ದಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಎಸ್ ಪಾಟೀಲ್ ಹೇಳಿದರು.

ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ(ನಿಯಂತ್ರಣ ಮತ್ತು ಅಭಿವೃದ್ದಿ)(ತಿದ್ದುಪಡಿ) ವಿಧೇಯಕ 2023 ನ್ನು ಪರಿಶೀಲಿಸಿ ಸದನಕ್ಕೆ ವರದಿಯನ್ನು ಸಲ್ಲಿಸಲು ರಚಿಸಲಾಗಿರುವ ಪರಿಶೀಲನಾ ಸಮಿತಿಯು ಇಂದು ಜಿಲ್ಲಾಡಳಿತ ಕಚೇರಿ ಸಭಾಂಗಣದಲ್ಲಿ ನಡೆಸಿದ ರೈತರು, ವರ್ತಕರು, ದಲಾಲರು ಮತ್ತು ಹಮಾಲರ ಪ್ರತಿನಿಧಿಗಳಿಂದ ಸಲಹೆಯನ್ನು ಸ್ವೀಕರಿಸುವ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ(ನಿಯಂತ್ರಣ ಮತ್ತು ಅಭಿವೃದ್ದಿ)(ತಿದ್ದುಪಡಿ) ವಿಧೇಯಕ 2023 ಕ್ಕೆ ವಿಧಾನಸಭೆಯಲ್ಲಿ ಅನುಮೋದನೆ ದೊರೆತಿದೆ. ಆದರೆ ವಿಧಾನ ಪರಿಷತ್ತಿನಲ್ಲಿ ರೈತರು, ವರ್ತಕರು ಸೇರಿದಂತೆ ಇದಕ್ಕೆ ಸಂಬಂಧಿಸಿದವರಿಂದ ಸಲಹೆಗಳನ್ನು ಪಡೆಯುವಂತೆ ಸೂಚಿಸಿರುವ ಹಿನ್ನಲೆ ಸಭೆಗಳನ್ನು ನಡೆಸಲಾಗುತ್ತಿದೆ. ಕೋಲಾರದಲ್ಲಿ ಸಭೆ ನಡೆಸಿ, ಇದೀಗ ಇಲ್ಲಿ ನಡೆಸಲಾಗುತ್ತಿದೆ.

ಸಭೆಯಲ್ಲಿ ರೈತ ಸಂಘದವರು, ವರ್ತಕರು, ಅಕ್ಕಿ ವ್ಯಾಪಾರಿಗಳ ಸಂಘದ ಪದಾಧಿಕಾರಿಗಳು, ಎಪಿಎಂಸಿ ಮಾಜಿ ಪದಾಧಿಕಾರಿಗಳು, ಎಪಿಎಂಸಿ ಅವಲಂಬಿತ ದಲಾಲಿಗಳ ಸಂಘ, ಪೇಟೆ ಕಾರ್ಯಕರ್ತರು, ಹಮಾಲಿ, ತೂಕದವರ ಸಂಘಗಳ ಪದಾಧಿಕಾರಿಗಳ ಸಲಹೆಗಳನ್ನು ಸ್ವೀಕರಿಸಲಾಗಿದೆ. ಅವರ ಸಲಹೆಗಳಿಗೆ ಮಾನ್ಯತೆ ನೀಡಲಾಗುವುದು.

ಎಪಿಎಂಸಿ ಯಲ್ಲಿ 16 ಸಾವಿರ ಕೋಟಿ ಆಸ್ತಿ ಇದ್ದು 8 ಸಾವಿರ ಎಕರೆಯಷ್ಟು ಜಮೀನು ಇದೆ. ಇದನ್ನು ಉಳಿಸಿಕೊಂಡು ಪುನರ್ ನಿರ್ಮಾಣಕ್ಕೆ ಅವಕಾಶ ನೀಡಲಾಗುವುದು. ಸಭೆಯಲ್ಲಿ ಕೇಳಿಬಂದ ಎಪಿಎಂಸಿ ಅಧಿಕಾರ ವಿಕೇಂದ್ರೀಕರಣ, ಸೆಸ್ ಕಡಿತಗೊಳಿಸುವುದು, ಆಸ್ತಿ ತೆರಿಗೆ ಇತರೆ ವಿಷಯಗಳನ್ನು ಗಮನದಲ್ಲಿರಿಸಿಕೊಂಡು ಹೊಸ ಕಾಯ್ದೆ ಜಾರಿಗೆ ತರಲಾಗುವುದು ಎಂದರು.

ರೈತ ಸಂಘದ ರಾಜ್ಯಾಧ್ಯಕ್ಷ ಹೆಚ್. ಆರ್.ಬಸವರಾಜಪ್ಪ ಮಾತನಾಡಿ, ಪ್ರಸ್ತುತ ಎಪಿಎಂಸಿ ಕಾಯ್ದೆಯ ಪ್ರಕಾರ ರೈತ ಎಲ್ಲಿ ಬೇಕಾದರೂ ತನ್ನ ಉತ್ಪನ್ನ ಮಾರಾಟ ಮಾಡಬಹುದು. ಈ ನೀತಿಯಿಂದ ಎಪಿಎಂಸಿ ವಿನಾಶದ ಅಂಚಿಗೆ ಬರುವುದು. ಮಲ್ಟಿ ನ್ಯಾಷನಲ್ ಕಂಪೆನಿಗಳು ನೇರವಾಗಿ ರೈತರಿಂದ ಖರೀದಿಗೆ ಮುಂದಾದರೆ ಅವರು ಹೇಳುವ ತಳಿ, ಗುಣಮಟ್ಟ, ಮಾನದಂಡಗಳನ್ನು ಪಾಲಿಸಬೇಕು. ಒಂದು ವೇಳೆ ಅದರಲ್ಲಿ ಸೋತರೆ ತಿರಸ್ಕರಿಸಲಾಗುತ್ತದೆ. ಹೊಸ ತಳಿಗಳಿಂದ ಹಳೇ ತಳಿ ನಾಶವಗುತ್ತದೆ.

ರೈತರು-ಗ್ರಾಹಕರು ಕಾರ್ಪೋರೇಟ್ ಹಿಡಿತಕ್ಕೊಳಗಾಗುತ್ತಾರೆ. ಎಪಿಎಂಸಿ ಆದಾಯ ನಿಲ್ಲುತ್ತದೆ. ಅವಲಂಬಿತ ದಲಾಲರು, ಹಮಾಲರು, ಲಗ್ಗೇಜ್ ವಾಹನ ಇವರಿಗೆ ಅನ್ಯಾಯವಾಗುತ್ತದೆ. ಆದ್ದರಿಂದ ಪ್ರಸ್ತುತದ ಕಾಯ್ದೆ ರದ್ದುಪಡಿಸಬೇಕು ಹಾಗೂ ಟೆಂಡರ್ ವ್ಯವಸ್ಥೆ, ಆನ್ಲೈನ್ ಟ್ರೇಡಿಂಗ್ ವ್ಯವಸ್ಥೆಯೊಂದಿಗೆ ಹಳೆ ಕಾಯ್ದೆಗೆ ಅಗತ್ಯ ಸುಧಾರಣೆಗಳನ್ನು ತಂದು ಜಾರಿಗೆ ತರಬೇಕೆಂದು ಮನವಿ ಮಾಡಿದರು.

ಕೃಷಿಕರಾದ ಹೆಚ್.ಎಂ ರವಿಕುಮಾರ್ ಮಾತನಾಡಿ, ಎಪಿಎಂಸಿ ಯಾವಾಗಲೂ ಅಸ್ತಿತ್ವದಲ್ಲಿರುವಂತೆ ಕಾನೂನು, ಅವೈಜ್ಞಾನಿಕ ಆಸ್ತಿ ತೆರಿಗೆಗೆ ಕಡಿವಾಣ, ಆಸ್ತಿ ಹಂಚಿಕೆ ನಿಯಮ ಮತ್ತು ಪ್ರಕ್ರಿಯೆ ಸರಳಗೊಳಿಸಬೇಕು ಹಾಗೂ ನಿಯಮ 46 ರನ್ನು ಪುನರ್ಪರಿಶೀಲಿಸಬೇಕೆಂದರು.

ಜಿಲ್ಲಾ ಅಕ್ಕಿ ಗಿರಣಿ ಸಂಘದ ಉಪಾಧ್ಯಕ್ಷ ಕೆ.ಶೈಲೇಂದ್ರ, ಹಳೇ ಕಾಯ್ದೆಯಿಂದ ರೈತರಿಗೆ ಅನುಕೂಲವಿದೆ.

ಕಳೆದ ಮೂರುವರ್ಷದಲ್ಲಿ ಹೊಸ ಕಾಯ್ದೆಯಿಂದ ಕಾರ್ಮಿಕರು, ಅವಲಂಬಿತರು ಸಾಕಷ್ಟು ಕಷ್ಟಪಟ್ಟಿದ್ದಾರೆ. ನಿಯಮ 117 ನ್ನು ಮರು ಜಾರಿ ಮಾಡುವುದು ಬೇಡ. ಮಾಡಲೇಬೇಕಾದಲ್ಲಿ ಅಗತ್ಯ ಸವಲತ್ತುಗಳನ್ನು ನೀಡಿ ಜಾರಿ ಮಾಡುವಂತೆ ಮನವಿ ಮಾಡಿದರು.

ರಾಜ್ಯ ಮೆಕ್ಕೆಜೋಳ ವರ್ತಕರ ಕಾರ್ಯದರ್ಶಿ ಕೆ.ಜಾವೆದ್ ಮಾತನಾಡಿ, ಸೆಸ್ ಮಾರುಕಟ್ಟೆಗೆ ಮಾತ್ರ ಅನ್ವಯ ಆದ್ದರಿಂದ ಎಲ್ಲರೂ ಹೊರಗೆ ಮಾರಾಟ ಮಾಡುತ್ತಿದ್ದಾರೆ. ಶೇ.80 ರಷ್ಟು ಹೊರಗೆ ವ್ಯಾಪಾರ ಆಗುತ್ತಿದೆ. ಆದ್ದರಿಂದ ಹಳೇ ಕಾಯ್ದೆಯನ್ನು ಜಾರಿಗೆ ತರಬೇಕೆಂದರು.

ಬಿ.ಪಿ.ರಾಮಚಂದ್ರ ಮಾತನಾಡಿ, ಸಾವಿರಾರು ಕೋಟಿ ಎಪಿಎಂಸಿ ಆಸ್ತಿ ಇದ್ದು ನಿಷ್ಕ್ರಿಯವಾಗುತ್ತಿದೆ. ಹೊಸ ಕಾಯ್ದೆ ತಂದು ಉಳಿಸಿಕೊಳ್ಳಬೇಕು ಹಾಗೂ ಎಪಿಎಂಸಿ ಚುನಾವಣೆ ನಡೆಯಬೇಕೆಂದರು.

ರೈತ ಸಂಘದ ಕಾರ್ಯಾಧ್ಯಕ್ಷ ಪಿ.ಡಿ ಮಂಜಪ್ಪ , ಎಪಿಎಂಸಿ ಯಲ್ಲೇ ರೈತರ ಉತ್ಪನ್ನಗಳ ಮಾರುಕಟ್ಟೆ ಆಗಬೇಕು. ಸೆಸ್ ಕಡಿತಗೊಳಿಸಬೇಕು ಎಂದರು.

ಪ್ಯಾಟೆ ಈರಣ್ಣ, ಪ್ರಸ್ತುತ ಇರುವ ಕಾಯ್ದೆ ರದ್ದಾಗಬೇಕು, ಹೊಸ ಕಾಯ್ದೆ ಜಾರಿಯಾದರೆ ಮಾತ್ರ ರೈತರಿಗೆ ಅನುಕೂಲವಾಗುತ್ತದೆ ಎಂದರು.

ಮಾಜಿ ಎಪಿಎಂಸಿ ಅಧ್ಯಕ್ಷ ಶಿವಕುಮಾರ್ ಮಾತನಾಡಿ, ಎಪಿಎಂಸಿ ಯಿಂದಲೇ ಜನರಿಗೆ ಅಡಿಕೆ ದರ ಇತರೆ ದರ ಗೊತ್ತಾಗುತ್ತಿದೆ. ಎಪಿಎಂಸಿ ಉಳಿಸುವಂತಹ ಬದಲಾವಣೆ ತಂದು ಕಾಯ್ದೆ ಜಾರಿ ಮಾಡಬೇಕು.

ದಲಾಲರ ಸಂಘದ ಅಧ್ಯಕ್ಷ ಮಾತನಾಡಿ, ಎಪಿಎಂಸಿ ಯಲ್ಲಿ ಕನಿಷ್ಟ ಆಸ್ತಿ ತೆರಿಗೆ ಹಾಕಬೇಕು. ಆಸ್ತಿ ವರ್ಗೀಕರಣ ಆಗಬೇಕೆಂದರು.

ಹಸಿರು ಸೇನೆ ಜಿಲ್ಲಾಧ್ಯಕ್ಷ ಮಂಜುನಾಥ್ ಮಾತನಾಡಿ, ರೈತರ ವಿರೋಧಿ ಕಾಯ್ದೆಯಿಂದಾಗಿ ರೈತರ ತ್ಯಾಗ, ಬಲಿದಾನವೇ ಆಗಿದೆ. ಬಹಳಷ್ಟು ರಾಜ್ಯದಲ್ಲಿ ಕಾಯ್ದೆ ರದ್ದಾಗಿದ್ದು, ಇಲ್ಲಿಯೂ ರದ್ದುಪಡಿಸಿ ಹೊಸ ಕಾಯ್ದೆ ತರುವಂತೆ ಮನವಿ ಮಾಡಿದರು.

ತೂಕದವರ ಸಂಘದ ಶಬ್ಬೀರ್ ಮಾತನಾಡಿ, ಪ್ರಸ್ತುತ ಕಾಯ್ದೆಯಿಂದ ಆವಕ ಕಮ್ಮಿ ಆಗಿದ್ದು ತೂಕದವರು, ಹಮಾಲರ ಜೀವನ ಕಷ್ಟವಾಗಿದೆ. ಹೊಸ ಕಾಯ್ದೆ ಜಾರಿಗೆ ತರಬೇಕೆಂದರು.

ಶಾಸಕರಾದ ಆರಗ ಜ್ಞಾನೇಂದ್ರ ಮಾತನಾಡಿ, ತನಗೆ ಬೇಕಾದವರಿಗೆ ಉತ್ಪನ್ನ ಮಾರಾಟ ಮಾಡುವ ಸ್ವಾತಂತ್ರ್ಯವನ್ನು ಪ್ರಸ್ತುತ ಕಾಯ್ದೆ ನೀಡಿದೆ. ಜಿಲ್ಲೆಯ ಪ್ರಮುಖ ಬೆಳೆ ಅಡಿಕೆ. ಒಂದು ಕ್ವಿಂಟಾಲ್ ಅಡಿಕೆ ಎಪಿಎಂಸಿ ಗೆ ತರಲು 1500 ಖರ್ಚು ಬರುತ್ತದೆ. ಆದ್ದರಿಂದ ರೈತರು ಎಪಿಎಂಸಿ ಅಥವಾ ಮಲ್ಟಿ ನ್ಯಾಷನಲ್ ಯಾವುದಕ್ಕಾದರೂ ಮಾರಾಟ ಮಾಡಿ ಲಾಭ ಗಳಿಸಬಹುದೆಂಬ ಉದ್ದೇಶದಿಂದ ಜಾರಿಗೆ ತರಲಾಗಿತ್ತು ಎಂದರು.

ಡಿಸಿಸಿ ಬ್ಯಾಂಕ್ ಅಧ್ಯಕ್ಷ ಆರ್ ಎಂ ಮಂಜುನಾಥ ಗೌಡ ಮಾತನಾಡಿ, ಹಳೆ ಕಾಯ್ದೆಗೆ ಕೆಲ ಸುಧಾರಣೆ ತಂದು ಪರಿಣಾಮಕಾರಿಯಾಗಿ ಜಾರಿಗೊಳಿಸಿದರೆ ಎಪಿಎಂಸಿ ವ್ಯವಸ್ಥೆ ಉಳಿಯುತ್ತದೆ. ಆನ್ಲೈನ್ ಟ್ರೇಡಿಂಗ್ನಲ್ಲಿ ಸಹಕಾರಿಗಳು ಶೇ.100 ತೆರಿಗೆ ಕಟ್ಟುತ್ತಾರೆ. ಗುಣಮಟ್ಟದ ಅಡಿಕೆಗೆ ಜಿಲ್ಲೆ ನಂ.1 ಇದ್ದು ಸ್ಕ್ವಾಡ್ಗಳನ್ನು ಹಾಕಿ ಗುಣಮಟ್ಟ ಇನ್ನೂ ಕಾಪಾಡಬಹುದು.

ರೈತರಿಗೆ ಅನುಕೂಲವಾಗುವ ಹಳೇ ಕಾಯ್ದೆ ಜಾರಿಗೊಳಿಸಬೇಕು ಎಂದರು.

ಸಮಿತಿ ಸದಸ್ಯರಾದ ಡಿ.ಎಸ್.ಅರುಣ್ ಮಾತನಾಡಿ, 2019-20 ರಲ್ಲಿ ಕೇಂದ್ರ ಸರ್ಕಾರ ಜಾರಿಗೆ ತಂದ ಕಾಯ್ದೆಯಿಂದ ಸೆಸ್ ರೂ.600 ಕೋಟಿ ಸಂಗ್ರಹವಾಗಿತ್ತು.

ರೈತರಿಗೆ ಹೆಚ್ಚು ಬೆಲೆ ಸಿಗಲಿ ಎಂಬ ಉದ್ದೇಶದಿಂದ ಕಾಯ್ದೆ ತರಲಾಗಿತ್ತು. ಅಡಿಕೆ ಸೆಸ್ 0.6 ರಿಂದ 0.1 ಕ್ಕೆ ಇಳಿಸಬೇಕೆಂದು ಒತ್ತಾಯಿಸಲಾಗಿದೆ.

ನಿಯಂತ್ರಣ ಮಂಡಳಿ ಸ್ಥಾಪನೆ, ಇತರೆ ನಿಯಮ ಸರಳೀಕರಣ ಪ್ರಯತ್ನ ಆಗುತ್ತಿದ್ದು, ಹಲವು ಸುಧಾರಣೆಗಳೊಂದಿಗೆ ಹೊಸ ಕಾಯ್ದೆ ತರಬೇಕೆಂದು ಕೋರಿದರು.

ಸಮಿತಿ ಸದಸ್ಯರಾದ ಅನಿಲ್ಕುಮಾರ್ ಮಾತನಾಡಿ, ಪ್ರಸತುತ ಎಪಿಎಂಸಿ ಕಾಯ್ದೆ ವಾಪಸ್ ಪಡೆದು, ಹಳೆ ಕಾಯದೆಗೆ ಪೂರಕ ಸುಧಾರಣೆಗಳನ್ನು ತಂದು ಜಾರಿಗೆ ತರಲು ಸಚಿವರು ಸಭೆ ಮಾಡುತ್ತಿದ್ದಾರೆ. ಶಿವಮೊಗ್ಗದ ಎಪಿಎಂಸಿ ಸದೃಢವಾಗಿದ್ದು ಉಳಿಸಿಕೊಂಡು ಹೋಗಬೇಕಿದೆ. ರೈತರು ಬೆಳೆದ ಬೆಳೆಗೆ ಸೂಕ್ತ ಬೆಲೆ, ಭದ್ರತೆ ಉದ್ದೇಶದಿಂದ ಹೊಸ ಕಾಯ್ದೆ ಜಾರಿಗೆ ತರಬೇಕೆಂದು ರೈತರು ಹಾಗೂ ವರ್ತಕರು, ಇತರೆ ಅವಲಂಬಿತರು ಒತ್ತಾಯಿಸುತ್ತಿದ್ದು ಪಕ್ಷಾತೀತವಾಗಿ ಜಾರಿಗೊಳಿಸಲು ಕ್ರಮ ವಹಿಸಿ ರೈತರಿಗೆ ಶಕ್ತಿ ತುಂಬುವ ಕೆಲಸ ಮಾಡುತ್ತೇವೆ ಎಂದರು.

ಸಮಿತಿ ಸದಸ್ಯರಾದ ಕೆ.ಎ.ತಿಪ್ಪೇಸ್ವಾಮಿ ಮಾತನಾಡಿ, ಕೋಲಾರದಲ್ಲಿ ಸಭೆ ನಡೆಸಲಾಗಿದೆ. ಅಲ್ಲಿ ಮತ್ತು ಇಲ್ಲಿಯ ರೈತರು, ವರ್ತಕತು ಇತರ ಅವಲಂಬಿತರು ಕೇಂದ್ರದ ಕಾಯ್ದೆಯನ್ನು ವಾಪಸ್ ಪಡೆದು ಹೊಸ ಕಾಯ್ದೆ ತರುವಂತೆ ಒತ್ತಾಯಿಸಿದ್ದಾರೆ.

ರೈತರ ಮತ್ತು ಅವಲಂಬಿತರ ಹಿತ ಕಾಪಾಡುವಂತಹ ಕಾಯ್ದೆಯನ್ನು ಜಾರಿಗೆ ತರಬೇಕು ಹಾಗೂ ಎಪಿಎಂಸಿ ಯನ್ನು ರಕ್ಷಿಸಬೇಕೆಂಬ ಸಲಹೆಯನ್ನು ಎಲ್ಲರೂ ನೀಡಿದ್ದಾರೆ ಎಂದರು.

ಸಮಿತಿ ಸದಸ್ಯರಾದ, ಹೇಮಲತಾ ನಾಯಕ್, ಎಪಿಎಂಸಿ ನಿರ್ದೇಶಕರಾದ ಗಂಗಾಧರ ಸ್ವಾಮಿ, ಸರ್ಕಾರದ ಪ್ರಧಾನ ಕಾರ್ಯದರ್ಶಿ ಮಂಜುನಾಥ ಪ್ರಸಾದ್, ಜಿಲ್ಲಾಧಿಕಾರಿ ಡಾ.ಸೆಲ್ವಮಣಿ ಆರ್, ಜಿ.ಪಂ ಸಿಇಓ ಸ್ನೇಹಲ್ ಸುಧಾಕರ ಲೋಖಂಡೆ ಇತರರು ಉಪಸ್ಥಿತರಿದ್ದರು.

## ತರಬೇತಿಗೆ ಅರ್ಜಿ ಆಹ್ವಾನ

ಧಾರವಾಡ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಠ ಪಂಗಡಕ್ಕೆ ಸೇರಿದ ಒಟ್ಟು ನಾಲ್ಕು ಅಭ್ಯರ್ಥಿಗಳನ್ನು ವೃತ್ತಿ ತರಬೇತಿ ಆಯ್ಕೆಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಪತ್ರಿಕೋದ್ಯಮ ಪದವಿಧರ ಅಥವಾ ಸ್ನಾತಕೋತ್ತರ ಪದವಿಧರರಿಗೆ ಧಾರವಾಡ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಚೇರಿಯಲ್ಲಿ ಇಬ್ಬರು ಅಭ್ಯರ್ಥಿಗಳಿಗೆ ಹಾಗೂ ಹುಬ್ಬಳ್ಳಿಯ ರಾಜ್ಯ ಸಮಾಚಾರ ಕೇಂದ್ರದಲ್ಲಿ ಇಬ್ಬರು ಅಭ್ಯರ್ಥಿಗಳಿಗೆ 2024 ರ ಜನವರಿಯಿಂದ ಡಿಸೆಂಬರ್ ವರೆಗೆ 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿ ನೀಡಲಾಗುವುದು.

ಕರ್ನಾಟಕದಲ್ಲಿ ಕಾನೂನಾತ್ಮಕವಾಗಿ ಸ್ಥಾಪಿತಗೊಂಡ ವಿಶ್ವವಿದ್ಯಾನಿಲಯದಿಂದ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿರುವ ಹಾಗೂ ಕಂಪ್ಯೂಟರ್ ಜ್ಞಾನವಿರುವ ಕನ್ನಡ ಭಾಗಫ ಬಳಸಲು ಪ್ರಬುದ್ಧತೆ ಇರುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ.

ಮೆರಿಟ್ ಹಾಗೂ ಸಂದರ್ಶನದ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳಿಗೆ 35 ವರ್ಷ ಮೀರಿರಬಾರದು. ತರಬೇತಿಯ ಅವಧಿ ವೇಳೆ ಮಾಹೆಯಾನ 15 ಸಾವಿರ ರೂಪಾಯಿ ಸ್ಟೈಫಂಡ್ ನೀಡಲಾಗುವುದು.

ಒಮ್ಮೆ ಫಲಾನುಭವಿಯಾದವರನ್ನು ಈ ಯೋಜನೆಯಡಿ ಮತ್ತೊಂದು ಅವಧಿಗೆ ಆಯ್ಕೆ ಮಾಡಲು ಅವಕಾಶವಿರುವುದಿಲ್ಲ. ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ಜಿಲ್ಲೆಯಲ್ಲಿ ಅರ್ಹ ಅಭ್ಯರ್ಥಿಗಳು ದೊರೆಯದೆ ಇದ್ದಲ್ಲಿ ನೆರೆಯ ಜಿಲ್ಲೆಗಳಿಂದ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುವುದು.

2023ರ ಡಿಸೆಂಬರ್ 8 ರೊಳಗೆ ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಡಿ.ಸಿ. ಕಂಪೌಂಡ, ಧಾರವಾಡ ಇಲ್ಲಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಧಾರವಾಡ ಮೊ.ಸಂ: 9632511437 ಸಂಪರ್ಕಿಸಿ ಮಾಹಿತಿ ಪಡೆಯಬಹುದೆಂದು ಕಚೇರಿ ಪ್ರಕಟಣೆ ತಿಳಿಸಿದೆ.

## ಉಚಿತ ಕೌಶಲ್ಯಾಭಿವೃದ್ಧಿ ತರಬೇತಿ

ಧಾರವಾಡ: ಪ್ರಧಾನಮಂತ್ರಿ ಕೌಶಲ್ಯ ಅಭಿವೃದ್ಧಿ ಯೋಜನೆ ಅಡಿಯಲ್ಲಿ, ಧಾರವಾಡ ಕೇಂದ್ರೀಯ ವಿದ್ಯಾಲಯದಲ್ಲಿ 10ನೇ ತರಗತಿ ತೇರ್ಗಡೆ ಪ್ರಮಾಣ ಪತ್ರ ಹೊಂದಿದ 15 ರಿಂದ 45 ವರ್ಷದೊಳಗಿನ ಕೌಶಲ್ಯ ರಹಿತರಿಗೆ ಮೂರು ತಿಂಗಳು ಉಚಿತ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ.

ತರಬೇತಿ ಸಂಪೂರ್ಣವಾಗಿ ಉಚಿತವಾಗಿರುತ್ತದೆ. ಮತ್ತು ತರಬೇತಿ ಮುಗಿದ ನಂತರ ಪ್ರಮಾಣಪತ್ರವನ್ನು ನೀಡಲಾಗುತ್ತದೆ. ಈ ಪ್ರಮಾಣ ಪತ್ರವು ಪ್ರತಿಷ್ಠಿತ ಕಂಪನಿಗಳಲ್ಲಿ ಉದ್ಯೋಗ ಪಡೆಯಲು ಪ್ರಯೋಜನಕಾರಿಯಾಗುತ್ತದೆ. ತರಬೇತಿಯು ಡಿಸೆಂಬರ್ 1, 2023 ರಿಂದ ಶಾಲಾ ಆವರಣದಲ್ಲಿ ಪ್ರಾರಂಭವಾಗುತ್ತದೆ. ಆಸಕ್ತರು ತರಬೇತಿಗಾಗಿ ಶಾಲೆಗೆ ಭೇಟಿ ನೀಡಬಹುದು ಅಥವಾ ಕೇಂದ್ರೀಯ ವಿದ್ಯಾಲಯದ ಪ್ರಾಚಾರ್ಯರಾದ ರಾಕೇಶ್ಕುಮಾರ್ ಗೋಯೆಲ್ ಅವರನ್ನು ಭೇಟಿ ಮಾಡಬಹುದು ಎಂದು ಕೇಂದ್ರೀಯ ವಿದ್ಯಾಲಯದ ಪ್ರಕಟಣೆ ತಿಳಿಸಿದೆ.

## ಬಯೋಮೆಟ್ರಿಕ್ ಯಂತ್ರಗಳ ಪೂರೈಕೆಗೆ ದರಪಟ್ಟಿ ಆಹ್ವಾನ

ಧಾರವಾಡ: ಧಾರವಾಡ ಜಿಲ್ಲಾ ನ್ಯಾಯಲಯ ಹಾಗೂ ತಾಲೂಕು ನ್ಯಾಯಲಯದ ಕಟ್ಟಡಗಳಲ್ಲಿ ಹಾಜರಾತಿ ಬಯೋಮೆಟ್ರಿಕ್ ಯಂತ್ರಗಳನ್ನು ಪೂರೈಸಲು ಅರ್ಹ ಅಭ್ಯರ್ಥಿಗಳಿಂದ ಟೆಂಡರ್ ಕರೆಯಲಾಗಿದೆ.

ಸೀಲ್ ಬಂದ ಮಾಡಿದ ಟೆಂಡರ್ ಅರ್ಜಿಗಳನ್ನು ಪ್ರಧಾನ ಜಿಲ್ಲಾ ಸತ್ರ ನ್ಯಾಯಲಯ, ಧಾರವಾಡ- 580008 ಇವರಿಗೆ ಡಿಸೆಂಬರ್ 07 ರ ಸಂಜೆ 05-45 ವರೆಗೆ ಸಲ್ಲಿಸಬಹುದು. ಬಂದ ಮಾಡಿದ ಟೆಂಡರ್ ಅರ್ಜಿಗಳನ್ನು ಡಿಸೆಂಬರ್ 08, 2023 ರ ಸಂಜೆ 05-45 ಕ್ಕೆ ಪ್ರಧಾನ ಜಿಲ್ಲಾ ನ್ಯಾಯಾಧೀಶರ ಕಚೇರಿಯಲ್ಲಿ ತೆರೆಯಲಾಗುವುದು.

ಟೆಂಡರ ಪ್ರಕಟಣೆಯ ಹೆಚ್ಚಿನ ಮಾಹಿತಿಗಾಗಿ https://dharwad.dcourts.gov.in/notice-category/tenders ಈ ವೆಬ್ಸೈಟ್ ಸಂಪರ್ಕಿಸಬಹುದೆಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಉಸ್ತುವಾರಿ ಸಚಿವರ ಧಾರವಾಡ ಜಿಲ್ಲಾ ಪ್ರವಾಸ

ಧಾರವಾಡ: ಕಾರ್ಮಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರು ನವೆಂಬರ್ 24 ಹಾಗೂ 25 ರಂದು ಧಾರವಾಡ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.

ನವೆಂಬರ್ 23 ರ ರಾತ್ರಿ ಧಾರವಾಡಕ್ಕೆ ಆಗಮಿಸುವ ಸಚಿವರು ನ.24 ರ ಶುಕ್ರವಾರದಂದು ಬೆಳಿಗ್ಗೆ 10-30 ಗಂಟೆಗೆ ಧಾರವಾಡ ಜಿಲ್ಲೆಯ ಬರಗಾಲಪೀಡಿತ ಪ್ರದೇಶಗಳ ವಿವಿಧ ಅಭಿವೃದ್ಧಿ ಯೋಜನೆಗಳನ್ನು ತುರ್ತಾಗಿ ಅನುಷ್ಠಾನಗೊಳಿಸುವ ಕುರಿತು ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಕೃಷಿ ವಿಶ್ವವಿದ್ಯಾಲಯದ ರೈತ ಜ್ಞಾನಾಭಿವೃದ್ಧಿ ಕೇಂದ್ರದಲ್ಲಿ ಸಭೆ ಜರುಗಿಸಲಿದ್ದಾರೆ.

ನವೆಂಬರ್ 25 ರಂದು ಸಚಿವರು ವಿವಿಧ ಖಾಸಗಿ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವರು. ನಂತರ ಅವರು ರಾತ್ರಿ 8-45 ಗಂಟೆಗೆ ಹೈದ್ರಾಬಾದ್ಗೆ ಪ್ರಯಾಣ ಬೆಳೆಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕದಲ್ಲಿ ಕ್ರೀಡಾ ಅಕಾಡೆಮಿ ನಿರ್ಮಿಸುವುದಾಗಿ 18 ಲಕ್ಷ ರೂ. ಪಡೆದು ವಂಚನೆ: ಶ್ರೀಶಾಂತ್ ವಿರುದ್ಧ ಕೇಸ್ ದಾಖಲು



ಕಣ್ಣೂರು: ವ್ಯಕ್ತಿಯೊಬ್ಬರು ನೀಡಿದ ದೂರಿನ ಆಧಾರದ ಮೇಲೆ ಕೇರಳ ಪೊಲೀಸರು ಕ್ರಿಕೆಟಿಗ ಎಸ್ ಶ್ರೀಶಾಂತ್ ಮತ್ತು ಇತರ ಇಬ್ಬರ ವಿರುದ್ಧ ವಂಚನೆ ಪ್ರಕರಣ ದಾಖಲಿಸಿದ್ದಾರೆ.

ಚೂಂಡಾ ಮೂಲದ ದೂರುದಾರರು, ಆರೋಪಿಗಳಾದ ರಾಜೀವ್ ಕುಮಾರ್ ಮತ್ತು ವೆಂಕಟೇಶ್ ಕಿಣಿ ಅವರು ಕರ್ನಾಟಕದ ಕೊಲ್ಲೂರಿನಲ್ಲಿ ಕ್ರೀಡಾ ಅಕಾಡೆಮಿ ನಿರ್ಮಿಸುವುದಾಗಿ ಹೇಳಿ 2019 ರ ಏಪ್ರಿಲ್ 25 ರಿಂದ ವಿವಿಧ ದಿನಾಂಕಗಳಲ್ಲಿ 18.70 ಲಕ್ಷ ರೂ.ಗಳನ್ನು ತೆಗೆದುಕೊಂಡು ವಂಚಿಸಿದ್ದಾರೆ. ಇದರಲ್ಲಿ ಶ್ರೀಶಾಂತ್ ಸಹ ಪಾಲುದಾರ ಎಂದು ಆರೋಪಿಸಿದ್ದಾರೆ.

ಅಕಾಡೆಮಿಯಲ್ಲಿ ತಮ್ಮನ್ನು ಪಾಲುದಾರರಾಗಿ ಮಾಡುವುದಾಗಿ ಭರವಸೆ ನೀಡಿದ ನಂತರ ತಾನು ಹಣ ಹೂಡಿಕೆ ಮಾಡಿರುವುದಾಗಿ ಸರೀಶ್ ಗೋಪಾಲನ್ ಅವರು ತಮ್ಮ ದೂರಿನಲ್ಲಿ ತಿಳಿಸಿದ್ದಾರೆ.

ಶ್ರೀಶಾಂತ್ ಮತ್ತು ಇತರ ಇಬ್ಬರ ವಿರುದ್ಧ ಐಪಿಸಿ ಸೆಕ್ಷನ್ 420(ವಂಚನೆ ಮತ್ತು ಅಪ್ರಾಮಾಣಿಕವಾಗಿ ಆಸ್ತಿ ವಿತರಣೆಗೆ ಪ್ರಚೋದನೆ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಪ್ರಕರಣದಲ್ಲಿ ಶ್ರೀಶಾಂತ್ ಅವರನ್ನು ಮೂರನೇ ಆರೋಪಿ ಎಂದು ಹೆಸರಿಸಲಾಗಿದೆ.

## 'ಪಾಪಿ ಹೋದ್ರು, ಅವ್ರು ಸೋತ್ರು' ಭಾರತ ವಿಶ್ವಕಪ್ ಸೋಲಿಗೆ ಪ್ರಧಾನಿ ಮೋದಿ ವಿರುದ್ಧ ಮಮತಾ ಪರೋಕ್ಷ ವಾಗ್ದಾಳಿ



ಕೋಲ್ಕತ್ತಾ: ಇತ್ತೀಚಿನ ವಿಶ್ವಕಪ್ ಫೈನಲ್ ನಲ್ಲಿ ಆಸ್ಟ್ರೇಲಿಯಾ ವಿರುದ್ಧ ಭಾರತ ಸೋಲಿನ ಬಗ್ಗೆ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಗುರುವಾರ ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಪರೋಕ್ಷವಾಗಿ ವಾಗ್ದಾಳಿ ನಡೆಸಿದ್ದಾರೆ.

ಕೊಲ್ಕತ್ತಾದ ಈಡನ್ ಗಾರ್ಡನ್ ಅಥವಾ ಮುಂಬೈಯ ವಾಂಖೆಡೆಯಲ್ಲಿ ಫೈನಲ್ ಪಂದ್ಯ ನಡೆದಿದ್ದರೆ ಟೀಮ್ ಇಂಡಿಯಾ ಗೆಲ್ಲುತ್ತಿತ್ತು. ನಮ್ಮ ಆಟಗಾರರನ್ನು ಕೇಸರಿ ಧರಿಸುವಂತೆ ಮಾಡಲಾಯಿತು. ಆಟಗಾರರು ವಿರೋಧಿಸಿದ್ದರಿಂದ ಭಾರತ ತಂಡ ಪಂದ್ಯಗಳ ಸಮಯದಲ್ಲಿ ಕೇಸರಿ ಜರ್ಸಿ ಧರಿಸಲಿಲ್ಲ ಎಂದು ಅವರು ತಿಳಿಸಿದ್ದಾರೆ.

ತೃಣಮೂಲ ಕಾಂಗ್ರೆಸ್ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಮಮತಾ ಬ್ಯಾನರ್ಜಿ, 'ಅವರು ನಮ್ಮ ಆಟಗಾರರು ಕೇಸರಿ ಜರ್ಸಿಯನ್ನು ಧರಿಸುವಂತೆ ಮಾಡಿದರು. ಆದರೆ, ಆಟಗಾರರು ನೀಲಿ ಜೆರ್ಸಿ ಬದಲಾಯಿಸುವುದನ್ನು ವಿರೋಧಿಸಿದರು, ಆದ್ದರಿಂದ ಅವರು ನೀಲಿ ಜೆರ್ಸಿಗೆ ಕೇಸರಿ ಸ್ಪರ್ಶ ನೀಡಿದ್ದರು ಎಂದು ಅವರು ವಾಗ್ದಾಳಿ ನಡೆಸಿದರು.

"ಭಾರತೀಯ ಕ್ರಿಕೆಟಿಗರು ಎಲ್ಲಾ ಪಂದ್ಯಗಳನ್ನು ಗೆದ್ದಿದ್ದರು. ಆದರೆ ಕೊನೆಯ ಪಂದ್ಯವನ್ನು ವೀಕ್ಷಿಸಲು ಪ್ರಧಾನಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ಹೋಗಿದ್ದರು ಎಂದು ಹೇಳಿದ ಮಮತಾ, ಯಾರ ಹೆಸರನ್ನೂ ಉಲ್ಲೇಖಿಸದೆ ಪಾಪಿಗಳು ಎಲ್ಲಿಗೆ ಹೋದರು, ತಮ್ಮ ಪಾಪಗಳನ್ನು ತೆಗೆದುಕೊಂಡು ಹೋಗುತ್ತಾರೆ. ಪಾಪ ಯಾವುದನ್ನೂ ಬಿಡುವುದಿಲ್ಲ ಎಂಬ ಮಾತನ್ನು ಯಾರೂ ಮರೆಯಬಾರದು ಎಂದು ಹೇಳಿದರು.

ನವೆಂಬರ್ 19 ರಂದು ಅಹಮದಾಬಾದ್ನಲ್ಲಿ ನಡೆದ ಐಸಿಸಿ ವಿಶ್ವಕಪ್ ಫೈನಲ್ನಲ್ಲಿ ಭಾರತವು ಆಸ್ಟ್ರೇಲಿಯಾ ವಿರುದ್ಧ ಸೋತಿತ್ತು. ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಹಾಜರಿದ್ದ ಕಾರಣ ಭಾರತ ತಂಡ ಸೋತಿದೆ ಎಂದು ರಾಹುಲ್ ಗಾಂಧಿ ಟೀಕಿಸಿದ್ದರು.

ಅಲ್ಲದೆ, ಪಕ್ಷದ ಸಂಸದೆ ಮಹುವಾ ಮೊಯಿತ್ರಾ ವಿರುದ್ಧ ಕೇಳಿಬಂದ ಪ್ರಶ್ನೆ ಕೇಳಲು ಹಣದ ಆರೋಪದ ಬಗ್ಗೆ ಮೊದಲ ಬಾರಿಗೆ ಪ್ರತಿಕ್ರಿಯಿಸಿದ ಮಮತಾ, ಸಂಸತ್ತಿನಿಂದ ಮಹುವಾ ಅವರನ್ನು ಹೊರಹಾಕಲು ಬಿಜೆಪಿ ಈ ರೀತಿಯ ಸಂಚು ಮಾಡಿದೆ. ಇದು ಚುನಾವಣೆಗೆ ಮುನ್ನ ಅವರು ಹೆಚ್ಚು ಜನಪ್ರಿಯರಾಗಲು ಸಹಾಯ ಮಾಡುತ್ತದೆ. ಮಹುವಾ ಅವರನ್ನು ಲೋಕಸಭೆಯಿಂದ ಉಚ್ಚಾಟಿಸಿರುವುದು 2024ರ ಲೋಕಸಭೆ ಚುನಾವಣೆಯಲ್ಲಿ ಸಂಸದರಿಗೆ ನೆರವಾಗಲಿದೆ ಎಂದು ಮುಖ್ಯಮಂತ್ರಿ ಹೇಳಿದ್ದಾರೆ.

ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ ಮಮತಾ, ಇಂತಹ ಹೇಡಿತನದ ಪಕ್ಷವನ್ನು ನಾನೆಂದೂ ನೋಡಿಲ್ಲ. ನಮ್ಮ ಮೈತ್ರಿಯ ಹೆಸರನ್ನು ಭಾರತ ಎಂದು ಇಟ್ಟುಕೊಂಡರೇ, ಮರುದಿನವೇ ದೇಶದ ಹೆಸರನ್ನು ಭಾರತ್ ಎಂದು ಬದಲಾಯಿಸಿದರು ಎಂದು ಭಾಷಣದುದ್ದಕ್ಕೂ ಬಿಜೆಪಿ ವಿರುದ್ಧ ಕಿಡಿಕಾರಿದರು.


## 17 ವರ್ಷದ ಹುಡುಗನಿಗೆ ಕತ್ತು ಸೀಳಿ ಕೊಂದ 16ರ ಬಾಲಕ

ನವದೆಹಲಿ: ಈ ವಾರದ ಆರಂಭದಲ್ಲಿ ಪೂರ್ವ ದೆಹಲಿಯ ವೆಲ್ಕಮ್ ಕಾಲೋನಿಯಲ್ಲಿ 16 ವರ್ಷದ ಯುವಕನೊಬ್ಬ, ಮತ್ತೊಬ್ಬ 17 ವರ್ಷದ ಯುವಕನಿಗೆ 55ಕ್ಕೂ ಹೆಚ್ಚು ಬಾರಿ ಇರಿದು, ಆತನ ಕತ್ತು ಸೀಳಿ ಹತ್ಯೆ ಮಾಡಿ, ಬಳಿಕ ಶವವನ್ನು ರಸ್ತೆಯಲ್ಲಿ ಎಳೆದುಕೊಂಡು ಹೋಗಿದ್ದಾನೆ ಎಂದು ಪೊಲೀಸರು ಗುರುವಾರ ತಿಳಿಸಿದ್ದಾರೆ.

ಮಂಗಳವಾರ ಜಂತಾ ಮಜ್ದೂರ್ ಕಾಲೋನಿಯಲ್ಲಿ ನಡೆದ ಈ ಭೀಕರ ಹತ್ಯೆಯ ಕೆಲವು ಭಯಾನಕ ದೃಶ್ಯಗಳು ಸಿಸಿಟಿವಿಯಲ್ಲಿ ಸೆರೆಯಾಗಿದ್ದು, ಆರೋಪಿ ಸುತ್ತಮುತ್ತಲಿನ ಜನರಿಗೂ ಬೆದರಿಕೆ ಹಾಕಿದ್ದಾನೆ.

ಬುಧವಾರ ಬೆಳಗ್ಗೆ ಆರೋಪಿಯನ್ನು ಬಂಧಿಸಲಾಗಿದ್ದು, ತಪ್ಪೊಪ್ಪಿಕೊಂಡಿದ್ದಾನೆ. ಬಿರಿಯಾನಿ ಖರೀದಿಸಲು ತನಗೆ ಹಣ ಕೇಳಿದ 17 ವರ್ಷದ ಯುವಕನನ್ನು ಹತ್ಯೆ ಮಾಡಿದ್ದಾನೆ. ಮೃತ ಯುವಕನ ಗುರುತು ಇನ್ನೂ ಪತ್ತೆಯಾಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

"ನಾವು ಈಗಾಗಲೇ ಕೊಲೆಗೆ ಬಳಸಿದ ಆಯುಧವನ್ನು ವಶಪಡಿಸಿಕೊಂಡಿದ್ದೇವೆ. ಯುವಕ ಚಾಕುವನ್ನು ಎಲ್ಲಿಂದ ಖರೀದಿಸಿದ ಎಂಬ ಬಗ್ಗೆ ನಾವು ತನಿಖೆ ನಡೆಸುತ್ತಿದ್ದೇವೆ" ಎಂದು ಪೊಲೀಸ್ ಉಪ ಆಯುಕ್ತ (ಈಶಾನ್ಯ) ಜಾಯ್ ಟಿರ್ಕಿ ಹೇಳಿದ್ದಾರೆ.




ಮಂಗಳವಾರ ರಾತ್ರಿ 11.15ರ ಸುಮಾರಿಗೆ ಈ ಕೃತ್ಯ ನಡೆದಿದೆ. ದಾಳಿಗೊಳಗಾದ ಯುವಕನನ್ನು ಕೂಡಲೇ ಆಸ್ಪತ್ರೆಗೆ ಸಾಗಿಸಲಾಯಿತಾದರೂ ಮಾರ್ಗಮಧ್ಯೆ ಮೃತಪಟ್ಟಿದ್ದಾರೆ.

"ಅವನು ಭೀಕರ ಕೃತ್ಯವನ್ನು ಮಾಡುವಾಗ ನೃತ್ಯ ಮಾಡುತ್ತಿದ್ದ. ಏನಾಗುತ್ತಿದೆ ಎಂದು ನೋಡಲು ಬಾಗಿಲು ತೆರೆಯಲು ಯತ್ನಿಸಿದ ಒಬ್ಬ ವ್ಯಕ್ತಿಗೆ ಚಾಕು ತೋರಿಸಿ ಬೆದರಿಕೆ ಹಾಕಿದ್ದಾನೆ" ಎಂದು ಅಪರಾಧದ ತನಿಖೆ ನಡೆಸುತ್ತಿರವವ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಹೃದಯಾಘಾತ: ಗ್ರಾಪಂ ಉಪಾಧ್ಯಕ್ಷ ನಿಧನ



ಬೆಳಗಾವಿ: ಮಾರಿಹಾಳ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ, ಹಾಲಿ ಉಪಾಧ್ಯಕ್ಷ ತೌಸಿಫ್ ಫನಿಬಂದ್ ಹೃದಯಾಘಾತದಿಂದ ಗುರುವಾರ ಸಂಜೆ ನಿಧನರಾಗಿದ್ದಾರೆ. ಅವರಿಗೆ 34 ವರ್ಷ ವಯಸ್ಸಾಗಿತ್ತು.

ಸಾಮಾಜಿಕ ಕ್ಷೇತ್ರದಲ್ಲಿ ಗುರುತಿಸಿಕೊಂಡಿದ್ದ ಅವರಿಗೆ ಗುರುವಾರ ಸಂಜೆ ತೀವ್ರ ಹೃದಯಾಘಾತವಾಯಿತು.

ತಕ್ಷಣ ಆಸ್ಪತ್ರೆಗೆ ಸಾಗಿಸಲಾಯಿತಾದರೂ ಬದುಕುಳಿಯಲಿಲ್ಲ.

ಅವರಿಗೆ ತಂದೆ, ತಾಯಿ, ಸಹೋದರ, ಇಬ್ಬರು ಸಹೋದರಿಯರು, ಪತ್ನಿ, ಮಗ ಹಾಗೂ ಮೂವರು ಹೆಣ್ಣು ಮಕ್ಕಳಿದ್ದಾರೆ. 4 ದಿನಗಳ ಹಿಂದಷ್ಟೆ ಅವರ ಪತ್ನಿ ಹೆಣ್ಣು ಮಗುವಿಗೆ ಜನ್ಮ ನೀಡಿದ್ದಾಳೆ.

ಇಂದು ಶುಕ್ರವಾರ ಬೆಳಗ್ಗೆ ಅವರ ಅಂತ್ಯಕ್ರಿಯೆ ನಡೆಯಲಿದೆ.

## ಕನ್ನಡಕ್ಕೆ ಶಿವಶರಣರ ವಚನಗಳ ಕೊಡುಗೆ ಅಪಾರ: ಶಿಕ್ಷಕಿ ಲಕ್ಷ್ಮಿ

ಶಿವಮೊಗ್ಗ: ಕನ್ನಡ ಭಾಷೆ ಇಂದು ಶ್ರೀಮಂತವಾಗಿದೆ ಎಂದರೆ ಅದಕ್ಕೆ 12ನೇ ಶತಮಾನದ ಶಿವಶರಣರ ವಚನಗಳ ಕೊಡುಗೆ ಅಪಾರ ಎಂದು ಶಿಕ್ಷಕಿ ಶ್ರೀಮತಿ ಲಕ್ಷ್ಮಿ ತಿಳಿಸಿದರು.

ಅವರು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಮೈಸೂರು, ಮತ್ತು ಜಿಲ್ಲಾ  ತಾಲೂಕು ಶರಣ ಸಾಹಿತ್ಯ ಪರಿಷತ್ತು, ಶಿವಮೊಗ್ಗ ಹಾಗೂ ಶಿವಮೊಗ್ಗ ಸಹ್ಯಾದಿ ವಿಜ್ಞಾನ ಕಾಲೇಜು, ಕನ್ನಡ ವಿಭಾಗದ ಸಹಯೋಗದಲ್ಲಿ ಆಯೋಜಿಸಿದ 51ನೇ ವಚನ ಮಂಟಪ-ದತ್ತಿ ಕಾರ್ಯಕ್ರಮ-ವಿಶೇಷವಾಗಿ ಪದವಿ ಪಠ್ಯಾಧಾರಿತ ವಚನಗಳ ಪರಿಚಯ, ಗಾಯನ, ವಿಶ್ಲೇಷಣೆ, ನೃತ್ಯ ಹಾಗೂ ರೂಪಕ ಕಾರ್ಯಕ್ರಮದಲ್ಲಿ ಮುಖ್ಯ ಉಪನ್ಯಾಸಕರಾಗಿ ಭಾಗವಹಿಸಿ ಮಾತನಾಡಿದರು.

ಕೇವಲ ಕೆಲವೇ ಜನರಿಗೆ ಅರ್ಥವಾಗುತಿದ್ದ ಕಾಲಘಟ್ಟದಲ್ಲಿ ಸರಳವಾಗಿ ಅರ್ಥವಾಗುವಂತೆ ಎಲ್ಲ ಜನಸಮಾನ್ಯರಿಗೂ ಮುಟ್ಟಿದ್ದು ವಚನಗಳು. ಯುದ್ದದಾಹದಲ್ಲಿ ತೇಲಾಡುತ್ತಿರುವ ಈ ಜಗತ್ತಿಗೆ ಶರಣರ ವಚನಗಳು ಇಂದು ಪರಿಹಾರವಾಗಬಲ್ಲದು ಎಂದು ಇದೇ ಸಂದರ್ಭದಲ್ಲಿ ನುಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅಥಿತಿಯಾಗಿ ಭಾಗವಹಿಸಿದ್ದ,ವಿಧಾನ ಪರಿಷತ್ ಶಾಸಕರಾದ ಶ್ರೀಯುತ ರುದ್ರೇಗೌಡರು ಮಾತನಾಡಿ, ವಚನಗಳ ಸಾರ ಇಂದಿನ ಯುವ ಪೀಳಿಗೆಢಗೆ ಅದರಲ್ಲೂ ಪದವಿ ಕಾಲೇಜಿನ ಮಕ್ಕಳಿಗೆ ಮುಟ್ಟಿಸುವುದು ಅಗತ್ಯವಾಗಿದೆ. ದ್ವೇಷ, ಅಸೂಯೆ, ಸ್ವಜಾತಿ ಪ್ರೇಮವೇ ಮೇಳೈಸುತ್ತಿರುವ ಈ ಹೊತ್ತಿಗೆ ಸಮಭಾವ ಮೂಡಲು ವಚನಗಳೇ ಮದ್ದಾಗಬಲ್ಲದು ಎಂದರು.



ಕಾರ್ಯಕ್ರಮವನ್ನು ಬಸವಣ್ಣನ ಕಳಬೇಡ ಕೊಲಬೇಡ ಎಂಬ ವಚನವನ್ನು ವಾಚಿಸುವುದರ ಮೂಲಕ ಕಾಲೇಜಿನ ಪ್ರಾಚಾರ್ಯರಾದ ಡಾ, ರಾಜೇಶ್ವರಿ ಎನ್ ಇವರು ಉದ್ಘಾಟಿಸಿದ್ದು ವಿಶೇಷವಾಗಿತ್ತು. ಕಾರ್ಯಕ್ರಮದಲ್ಲಿ ಮುಖ್ಯವಾಗಿ ಪದವಿ ಪಠ್ಯವಾಗಿರುವ ಬಸವಣ್ಣನ ವಚನಗಳ ಗಾಯನ-ವಿಶ್ಲೇಷಣೆ, ನೃತ್ಯ ಹಾಗೂ ರೂಪಕ ಕಾರ್ಯಕ್ರಮ ವಿದ್ಯಾರ್ಥಿಗಳಿಂದ ನಡೆದಿದ್ದು ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.

ವೇದಿಕೆಯಲ್ಲಿ ಶ್ರೀ ಬಸವನಗೌಡ ಮಾಳಿಗಿ, ಶ್ರೀ ಎನ್ ಜಿ ಬಸವಲಿಂಗಪ್ಪ, ಶ್ರೀ ಆರ್ ಎಸ್ ಸ್ವಾಮಿ ಇದ್ದರು. ಅಧ್ಯಕ್ಷತೆಯನ್ನು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು, ಶಿವಮೊಗ್ಗ ಜಿಲ್ಲೆಯ ಅಧ್ಯಕ್ಷರಾದ ಹೆಚ್ ಎನ್ ಮಹಾರುದ್ರ ಅವರು ವಹಿಸಿದ್ದರು. ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ. ಎಸ್. ಎಂ. ಮುತ್ಯಯ್ಯ ಇವರು ಸ್ವಾಗತಿಸಿದರೆ. ಬಾರಂದೂರು ಪ್ರಕಾಶ ಇವರು ಪ್ರಾಸ್ತಾವಿಕ ಮಾತುಗಳನ್ನಾಡಿದರು. ಕಾರ್ಯಕ್ರಮ ಸಂಚಾಲನೆ ಮತ್ತು ನಿರೂಪಣೆ ಗಣೇಶ್ ಕೆಂಚನಾಲ್ ಮಾಡಿದರೆ. ಡಾ ಪ್ರೇಮ ವಂದಿಸಿದರು.

**ಪಟ್ಟಣ ಪಂಚಾಯತ ಕಾರ್ಯಾಲಯ, ಕಲ್ಲೋಳಿ**
**ತಾ:ಮೂಡಲಗಿ ಜಿ:ಬೆಳಗಾವಿ ದೂರವಾಣಿ ನಂ-08332-284636**
ನಂ:ಪ.ಪಂ.ಕ:ಲೋ.ಇ:15ನೇ.ಹ:ಎಸ್.ಎಫ್.ಸಿ:ಕ.ನಿ.ಟೆ.ಪ್ರ.: 2023-24 ದಿನಾಂಕ:22-11-2023

**-:: ಕೆ.ಪಿ.ಪಿ.ಪಿ ಪೋರ್ಟಲ್ ಅಲ್ಪಾವಧಿ ಟೆಂಡರ ಪ್ರಕಟಣೆ::-**

ಪಟ್ಟಣ ಪಂಚಾಯತ ಕಲ್ಲೋಳಿ ವ್ಯಾಪ್ತಿಯಲ್ಲಿ ಸನ್ 2022-23 ನೇ ಸಾಲಿನ 15ನೇ ಹಣಕಾಸು ಸಾಮಾನ್ಯ ಮೂಲ ಅನುದಾನದಡಿ ಬದಲಾವಣೆ ಕಾಮಗಾರಿ, ಸನ್ 2021-22 ನೇ ಸಾಲಿನ ಎಸ್.ಎಫ್.ಸಿ ಮುಕ್ತನಿಧಿ (TSP & SCSP) ಅನುದಾನದಡಿ ಬದಲಾಣೆ ಕಾಮಗಾರಿಗಳು ಹಾಗೂ ಸನ್ 2023-24 ನೇ ಸಾಲಿನ ಎಸ್.ಎಫ್.ಸಿ ಕುಡಿಯುವ ನೀರಿನ ಅನುದಾನದ ಮೊದಲನೇ ಕಂತಿನ ಅನುದಾನದಡಿಯ ಕಾಮಗಾರಿಗಳಿಗೆ, ಲೋಕೋಪಯೋಗಿ ಇಲಾಖೆಯ ಇಂಜಿನಿಯರಿಂಗ ವಿಭಾಗದಲ್ಲಿ ನೊಂದಾಯಿಸಲ್ಪಟ್ಟ ಅರ್ಹ ಸಿವ್ಹಿಲ ಗುತ್ತಿಗೆದಾರರಿಂದ ಕೆ.ಡಬ್ಲ್ಯೂ-1. ಪ್ರಕಾರ ಐಟಂವಾರು ಒಟ್ಟು-6 ಪ್ಯಾಕೇಜಗಳ ಕೆ.ಪಿ.ಪಿ.ಪಿ ಪೋರ್ಟಲ್ ಮುಖಾಂತರ ಟೆಂಡರ ಅಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿಗಧಿಪಡಿಸಿದ ಟೆಂಡರ ದಾಖಲಾತಿಯನ್ನು ಕೆ.ಪಿ.ಪಿ.ಪಿ ಪೋರ್ಟಲ್ ನಿಂದ ನಿಗಧಿತ ಶುಲ್ಕ ಪಾವತಿಯೊಂದಿಗೆ ಡೌನ್ ಲೋಡ್ ಮಾಡಿಕೊಳ್ಳ ತಕ್ಕದ್ದು ಇ.ಎಂ.ಡಿ ಮೊತ್ತದೊಂದಿಗೆ ಭರ್ತಿ ಮಾಡಿದ ಟೆಂಡರುಗಳನ್ನು ದಿ:28-11-2023 ರ ಸಾಯಂಕಾಲ 5-30 ಘಂಟೆಯೊಳಗಾಗಿ ಕೆ.ಪಿ.ಪಿ.ಪಿ ಪೋರ್ಟಲ್ನಲ್ಲಿ ಸಲ್ಲಿಸತಕ್ಕದ್ದು. ಟೆಂಡರ ತೆರೆಯುವ,ದಿ:01-12-2023 ರಂದು ಮುಂಜಾನೆ 11 ಘಂಟೆಗೆ ತೆರೆಯಲಾಗುವುದು. ಕಾಮಗಾರಿಗಳ ಟೆಂಡರ್ ಪಡೆಯಲು ಬೇಕಾದ ಅರ್ಹತೆ ಹಾಗೂ ಇತರೆ ಷರತ್ತುಗಳನ್ನು ಟೆಂಡರ್ ಫಾರಂಗಳಲ್ಲಿ ವಿವರವಾಗಿ ನಮೂದಿಸಲಾಗಿದೆ. ವಿವರವಾದ ಟೆಂಡರ ಪ್ರಕಟಣೆಯನ್ನು ಗುತ್ತಿಗೆದಾರರು ಈ ಕೆಳಗೆ ಸಹಿ ಮಾಡಿದವರ ಕಛೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದಾಗಿದೆ.ಹಾಗೂ ಕಛೇರಿ ದೂರವಾಣಿ ನಂ-08332-284636 ರಿಂದ ಮಾಹಿತಿ ಪಡೆಯಬಹುದು ಮತ್ತು ಅಂತರ್ಜಾಲದ ಮೂಲಕ ವೆಬ್ಸೈಟ್ ಕಾಮಗಾರಿ ವಿವರ ಹಾಗೂ ಶರತ್ತುಗಳು www.kppp.karnataka.gov.in,ಅಥವಾ ಈ ಕಛೇರಿ web site: www.kallollitown.mrc.gov.in ಇದರಲ್ಲಿ ಪಡೆಯಬಹುದು.

ಸಹಿ/-ಮುಖ್ಯಾಧಿಕಾರಿ
ಪಟ್ಟಣ ಪಂಚಾಯತ ಕಲ್ಲೋಳಿ

ಸಹಿ/-ಆಡಳಿತಾಧಿಕಾರಿ
ಪಟ್ಟಣ ಪಂಚಾಯತ ಕಲ್ಲೋಳಿ

DIPR/BGM/RO-NO-654/MCA/2023-24

## ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕೆ ಅಭಿವೃದ್ಧಿ ನಿಗಮ ನಿಯಮಿತ: ವಿವಿಧ ಯೋಜನೆಗಳಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ: ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕೆ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ ವಿವಿಧ ಯೋಜನೆಗಳಿಗಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನ

ಮಹಿಳಾ ಚರ್ಮ ಕುಶಲಕರ್ಮಿಗಳಿಗೆ ಕಾಯಕ ಸ್ಪೂರ್ತಿಯೋಜನೆಯಡಿ ಕನಿಷ್ಟ 10 ತರಬೇತಿ ಪಡೆದ ಮಹಿಳೆಯರು ಸ್ವಸಹಾಯ ಸಂಘ ರಚಿಸಿಕೊಂಡು ಗುಂಪು ಆರ್ಥಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ತನ್ಮೂಲಕ ಆದಾಯ ಗಳಿಸಿ ಸ್ವಾವಲಂಬಿಗಳಾಗಲು ಅನುಕೂಲವಾಗುವಂತೆ ಪ್ರತಿ ಸಂಘಕ್ಕೆ ಗರಿಷ್ಟ ರೂ.2.50 ಲಕ್ಷ ಸಾಲ ಒದಗಿಸಲಾಗುವುದು. (ಪ್ರತಿ ಮಹಿಳಾ ಚರ್ಮ ಕುಶಲಕರ್ಮಿಗೆ ರೂ. 15 ಸಾವಿರ ಸಹಾಯಧನ ಮತ್ತು 10 ಸಾವಿರ ಸಾಲ ನೀಡಲಾಗುತ್ತದೆ.

ಕೌಶಲ್ಯ ಉನ್ನತೀಕರಣ ಯೋಜನೆಯಡಿ 3 Year Diploma in Leather Technology (ಕೋರ್ಸ್ ಫೀ. ಊಟ ಮತ್ತು ವಸತಿ ಸೇರಿ 18 Month Higher Diploma Course in Footwear Manufacturing and Management Studies one Year Diploma in Footwear Design and Production Technology (NIFT) 6 ತಿಂಗಳ ಲೆದರ್ ಫ್ಯಷನ್ ಗಾರ್ಮೆಂಟ್ಸ ತಯಾರಿಕೆ (FDDI) 2 ತಿಂಗಳ ಪಾದರಕ್ಷೆ ತಯಾರಿಕೆಯಲ್ಲಿ ಕೌಶಲ್ಯ ಅಭಿವೃದ್ಧಿ ತರಬೇತಿ 1 ತಿಂಗಳ ಪಾದರಕ್ಷೆ ರಿಪೇರಿ ಮತ್ತು ತಯಾರಿಕೆ (CFTI) ಕುಶಲಕರ್ಮಿಗಳಿಗೆ ತರಬೇತಿ ನೀಡಲಾಗುವುದು.

ಪಾದುಕೆ ಕುಟೀರ ಯೋಜನೆಯಡಿ ಚರ್ಮ ಕುಶಲಕರ್ಮಿಗಳಿಗೆ ಸ್ವಯಂ ಉದ್ಯೋಗ ಕಲ್ಪಿಸಿಕೊಡುವ ನಿಟ್ಟಿನಲ್ಲಿ ಅವರು ತಯಾರಿಸಿದ ಉತ್ಪನ್ನಗಳನ್ನು ಮಾರಾಟ ಮಾಡಲು, ದುರಸ್ತಿ ಕಾರ್ಯ ಮಾಡಲು ಅನುವಾಗುವಂತೆ ಸಂಬಂಧಪಟ್ಟ ಸ್ಥಳೀಯ ಪ್ರಾಧಿಕಾರಗಳಿಂದ, ಇಲಾಖೆಗಳ ಪರವಾನಗಿ ಪಡೆದು ಅರ್ಜಿ ಸಲ್ಲಿಸಿದವರಿಗೆ ಪಾದುಕೆ ಕುಟೀರಗಳನ್ನು ಸ್ಥಾಪಿಸಿಕೊಡಲಾಗುವುದು.

ಘಟಕ ವೆಚ್ಚ : ರೂ. 1,25,000/– (ಪಾದುಕೆ ಕುಟೀರ, ಉಪಕರಣ ಪೆಟ್ಟಿಗೆ ಸೇರಿ)

ಚರ್ಮಕಾರರ ಕಿರು ಆರ್ಥಿಕ ಚಟುವಟಿಕೆಗಳಿಗಾಗಿ ನೇರ ಸಾಲ ಯೋಜನೆಯಡಿ ಕಚ್ಚಾ ಮಾಲು ಖರೀದಿ, ಕುಟೀರದಲ್ಲಿ ಉತ್ಪಾದನೆ ಮತ್ತು ಮಾರಾಟ, ಶೂ,ಪಾದರಕ್ಷೆ ಮತ್ತು ಇತರೆ ಚರ್ಮ ವಸ್ತುಗಳ ದುರಸ್ತಿ

ಮಾಡುವ ಅಂಗಡಿ ತೆರೆಯುವುದು,ತಳ್ಳುವ ಗಾಡಿ, ಲಘು ವಾಹನ ಇತ್ಯಾದಿ. ಘಟಕದ ವೆಚ್ಚ ರೂ 1,00,000, (ರೂ.50,000 ಸಹಾಯಧನ ಮತ್ತು 50,000 ಸಾವಿರ 5.50,000 ಸಾಲ ನೀಡಲಾಗುವುದು.

ಮಾರುಕಟ್ಟೆ ಸಹಾಯ ಯೋಜನೆಯಡಿ ಕುಶಲಕರ್ಮಿಗಳು ತಯಾರಿಸಿದ ಉತ್ಪನ್ನಗಳಿಗೆ ಮಾರುಕಟ್ಟೆ ಒದಗಿಸುವುದು ಮತ್ತು ಅವರ ಉತ್ಪನ್ನಗಳಿಗೆ ರಿಯಾಯಿತಿ ನೀಡುವುದು, ವಸ್ತು ಪ್ರದರ್ಶನದಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗುವುದು.

**ಚರ್ಮಕಾರ ವಸತಿ ಯೋಜನೆ (ಗುಂಪು/ವೈಯಕಿಕ)**

ಚರ್ಮ ಕುಶಲಕರ್ಮಿಗಳು ಖಾಲಿ ನಿವೇಶನ ಗುಡಿಸಲು ಶಿಥಿಲಗೊಂಡ ಮನೆಗಳನ್ನು ಹೊಂದಿರುವ ಚರ್ಮಕಾರರಿಗೆ ವಾಸಕ್ಕೆ ಮತ್ತು ಉದ್ಯೋಗ ಮುಂದುವರೆಸಲು ಅನುಕುಲವಾಗುವಂತೆ ವಸತಿ ಕಾರ್ಯಾಗಾರಗಳನ್ನು ನಿರ್ಮಿಸಿಕೊಳ್ಳಲು ನಿಗಮದ ಮೂಲಕ ರೂ.2.20 ಲಕ್ಷ ಧನಸಹಾಯ ನೀಡಲಾಗುವುದು.

ಸ್ವಾವಲಂಬಿ,ಸಂಚಾರಿ ಮಾರಟ ಮಳಿಗೆ ಯೋಜನೆ ಪಾರಂಪರಿಕ ಚರ್ಮ ಕುಶಲಕರ್ಮಿಗಳು ಅವರು ತಯಾರಿಸಿದ ಚರ್ಮೋತ್ಪನ್ನಗಳನ್ನು ಹಾಗೂ ಇತರೆ ಸಂಬಂಧಿತ ಉತ್ಪನ್ನಗಳನ್ನು ಸಂಚಾರಿ ವಾಹನದ ಮೂಲಕ ಗ್ರಾಹಕರ ಮನೆ ಬಾಗಿಲಿಗೆ ಹೋಗಿ ಮಾರಾಟ ಮಾಡಲು ಅವಕಾಶ ಕಲ್ಪಿಸಿ ಸ್ವಯಂ ಉದ್ಯೋಗ ಒದಗಿಸುವ ಉದ್ದೇಶ ಹೊಂದಿದೆ.

ತಾಲ್ಲೂಕು ಮಟ್ಟದವರೆಗೆ ರೂ. 2. ಲಕ್ಷ ಸಹಾಯಧನ, ಜಿಲ್ಲಾ ಕೇಂದ್ರಕ್ಕೆ ರೂ. 3. ಲಕ್ಷ ಸಹಾಯಧನ, ಮಹಾನಗರ ಪಾಲಿಕೆ ವ್ಯಾಪ್ತಿ ರೂ.4 ಲಕ್ಷ ಸಹಾಯಧನ, ಬಿ.ಬಿ.ಎಂ.ಪಿ ವ್ಯಾಪ್ತಿ ರೂ.5. ಲಕ್ಷ (ನಿಗಮವು ನೀಡುವ ಸಹಾಯಧನದ ಮೊತ್ತದಷ್ಟೇ ಬ್ಯಾಂಕಿನಿಂದ ಸಾಲ ಪಡೆಯಬೇಕಾಗಿರುತ್ತದೆ).

ಹೆಚ್ಚಿನ ಮಾಹಿತಿಗಾಗಿ ಸೇವಾ ಸಿಂಧು ಪೋರ್ಟಲ್ ಸಂಪರ್ಕಿಸಬಹುದಾಗಿದೆ ಎಂದು ಬೆಳಗಾವಿಯ ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಜಿಲ್ಲಾ ಸಂಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚಿಗುರು– 23–24: ಚಿಣ್ಣರ ಹಬ್ಬ

ಬೆಳಗಾವಿ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಬೆಳಗಾವಿಯ ಬಿ.ಕೆ. ಮಾಡಲ್ ಪ್ರೌಢಶಾಲೆ ಇವರ ಸಂಯುಕ್ತ ಆಶ್ರಯದಲ್ಲಿ "ಚಿಗುರು 2023–24" ಮಕ್ಕಳಲ್ಲಿರುವ ಕಲಾ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಚಿನ್ನರ ಹಬ್ಬವನ್ನು ನವೆಂಬರ್ 25, 2023 ರಂದು ಬೆಳಿಗ್ಗೆ 9.30 ಗಂಟೆಗೆ ಬಿ.ಕೆ. ಮಾಡೆಲ್ ಪ್ರೌಢಶಾಲೆಯ ಸಭಾಭವನದಲ್ಲಿ ಆಯೋಜಿಸಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಲ ಜಾರಕಿಹೊಳಿಯವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರಾದ ಲಕ್ಷ್ಮೀ ಆರ್ ಹೆಬ್ಬಾಳ್ಕರ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಶಾಸಕರಾದ ಆಸೀಫ್ ಸೇಠ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ್ ಮ. ಪಟ್ಟಣ, ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ–2 ನವದೆಹಲಿ ಪ್ರಕಾಶ್ ಬಾ ಹುಕ್ಕೇರಿ ವಿಶೇಷ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಪ್ರಾದೇಶಿಕ ಆಯುಕ್ತರಾದ ಸಂಜಯ್ ಬಿ. ಶಟ್ಟೆಣ್ಣವರ, ಪೊಲೀಸ್ ಮಹಾನಿರೀಕ್ಷಕರಾದ ವಿಕಾಶ್ ಕುಮಾರ್ ವಿಕಾಶ್, ಜಿಲ್ಲಾಧಿಕಾರಿಗಳಾದ ನಿತೇಶ್ ಕೆ ಪಾಟೀಲ, ಪೊಲೀಸ್ ಆಯುಕ್ತರಾದ ಎಸ್.ಎನ್. ಸಿದ್ದರಾಮಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಭೀಮಾ ಶಂಕರ್ ಎಸ್. ಗುಳೇದ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹರ್ಷಲ್ ಭೋಯರ್, ಮಹಾನಗರ ಪಾಲಿಕೆ ಆಯುಕ್ತರಾದ ಅಶೋಕ್ ದುಡುಗುಂಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕರಾದ ಬಸವರಾಜ ಹೂಗಾರ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ (ಪ್ರಭಾರ) ಎಸ್.ಡಿ.ಹಂಜಿ, ಮೋಹನ್ ಹಂಚಾಟೆ, ಸಾಹಿತಿಗಳಾದ ಹೇಮಾ ಸುನ್ನೋಳಿ, ಸುಧಾ ಪಾಟೀಲ, ಬಿ. ಕೆ. ಮಾಡೆಲ್ ಪ್ರೌಢ ಶಾಲೆಯ ಶಿಕ್ಷಕರು ಸಿಬ್ಬಂದಿ ವರ್ಗ ಹಾಗೂ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಲೇಖನ ಆಹ್ವಾನ

ಬೆಳಗಾವಿ: ರಾಜ್ಯವು 'ಕರ್ನಾಟಕ' ಎಂದು ಮರುನಾಮಕರಣಗೊಂಡು ಐವತ್ತು ವರ್ಷ ತುಂಬಿರುವ ಈ ಶುಭ ಗಳಿಗೆಯ ಸವಿ ನೆನಪಿಗಾಗಿ ಕರ್ನಾಟಕದ ಸರ್ವಾಂಗೀನ ಅಭಿವೃದ್ಧಿಯ ಜೊತೆಗೆ ಕರ್ನಾಟಕ ಏಕೀಕರಣಕ್ಕೆ ದುಡಿದ ಮಹನೀಯರು ಮತ್ತು ಸಂಘ–ಸಂಸ್ಥೆಗಳ ಪರಿಚಯಾತ್ಮಕ ಸಂವಾದಿತ ಕೃತಿಯನ್ನು ಪ್ರಕಾಶಿಸಲು ಯೋಜನೆ ಹಾಕಿಕೊಳ್ಳಲಾಗಿದೆ.

ಆಸಕ್ತ ಲೇಖಕರು ಕರ್ನಾಟಕ ಸುವರ್ಣ ಸಂಭ್ರಮಕ್ಕೆ ಪೂರಕವಾಗಿರುವ ಹಾಗೂ ಕನ್ನಡ ನಾಡು–ನುಡಿಗೆ ದುಡಿದ ಮಹನೀಯರು/ಸಂಘ–ಸಂಸ್ಥೆಗಳನ್ನು ಆಯ್ಕೆ ಮಾಡಿಕೊಂಡು 5–8 ಪುಟಕ್ಕೆ ಸೀಮಿತ ಲೇಖನ ರಚಿಸಿ, ಸ.ರಾ. ಸುಳಕೊಡೆ # 1319, ಶ್ರೀ ಶಿವಪ್ರಸಾದ ರಾಮತೀರ್ಥನಗರ ಬೆಳವಾವಿ – 590015 ವಿಳಾಸಕ್ಕೆ 25–12–2023 ಗೆ ಒಳಗಾಗಿ ಕಳುಹಿಸಲು ಕೋರಿದೆ.

ಈ ಕೃತಿಯಲ್ಲಿ ಆಯ್ದ ಉತ್ತಮ 50 ಲೇಖನಗಳನ್ನು ಮಾತ್ರ ಪ್ರಕಟಿಸುವ ಅವಕಾಶವಿರುವದನ್ನು ಲೇಖಕರು ಗಮನಿಸಬೇಕಾಗಿ ವಿನಂತಿ.

# ನ. 25, 26ರಂದು ಸತೀಶ್ ಪ್ರತಿಭಾ ಪುರಸ್ಕಾರ: ಕಿರಣ ರಜಪೂತ

ಯಮಕನಮರಡಿ: ಇಲ್ಲಿನ ಎಸ್ಎಸ್ಎಫ್ ಶಾಲಾ ಆವರಣದಲ್ಲಿ ತಾಲೂಕಿನ ಪ್ರಾಥಮಿಕ, ಪ್ರೌಢ ಹಾಗೂ ಕಾಲೇಜು ವಿಭಾಗದ ಗ್ರಾಮೀಣ ಬಡ ವಿದ್ಯಾರ್ಥಿಗಳಿಗೆ ನಿಯೋಜನೆ ಮಾಡಲಾದ 10ನೇ ಸತೀಶ್ ಪ್ರತಿಭಾ ಪುರಸ್ಕಾರವು ನ. 25, 26ರಂದು ಎರಡು ದಿನಗಳ ಕಾಲದ ಮಹಾಸಮರದ ಭವ್ಯ ಕಾರ್ಯಕ್ರಮ ನಡೆಯಲಿದೆ ಎಂದು ಕಾಂಗ್ರೆಸ್ ಮುಖಂಡ ಕಿರಣ ರಜಪೂತ ಹೇಳಿದರು.




ಯಮಕನಮರಡಿಯಲ್ಲಿ ಗುರುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದ ಪ್ರತಿಭೆಗಳಲ್ಲಿ ಹುದಗಿರುವ ಪ್ರತಿಭೆಯನ್ನು ಗುರುತಿಸಿ ಅವರನ್ನು ರಾಜ್ಯಮಟ್ಟದಲ್ಲಿ ಪರಿಸುವ ಕಾರ್ಯವನ್ನು ಕ್ಷೇತ್ರದ ಶಾಸಕರು ಹಾಗೂ ಜಿಲ್ಲಾ ಉಸ್ತುವರಿ ಸಚಿವ ಸತೀಶ್ ಜಾರಕಿಹೊಳಿ ನೇತೃತ್ವದಲ್ಲಿ ಕಳೆದ 10 ವರ್ಷದಿಂದ ಸತೀಶ್ ಜಾರಕಿಹೊಳಿ ಪೌಂಡೇಶನ್ ಮೂಲಕ ನಡೆಯುತ್ತಿದೆ ಎಂದು ತಿಳಿಸಿದರು.

ಸತೀಶ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಕೋವಿಡ್ ಕಾರಣದಿಂದ ಕಳೆದ 3 ವರ್ಷದಿಂದ ನಡೆದಿರಲಿಲ್ಲ. ಹಾಗಾಗಿ ಈ ದಶಮಾನೋತ್ಸವ ಸಾಂಸ್ಕೃತಿಕ ಕಾರ್ಯಕ್ರಮ ನಡೆಯುತ್ತಿದೆ. ಇದೇ ನ. 5ರಂದು ಜರುಗಿರುವ ಪ್ರಥಮ ಹಂತ ಆಯ್ಕೆಯಲ್ಲಿ ಸುಮಾರು 15 ನೂರು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಅದರಲ್ಲಿ ಕೊನೆಯ ಮಹಾಸ್ಪರ್ಧೆಯಲ್ಲಿ 700 ವಿದ್ಯಾರ್ಥಿಗಳ ಭಾವವಹಿಸಲಿದ್ದಾರೆ.

ಈ ಮೂರು ವಿಭಾಗದಲ್ಲಿ ವಿಜೇತ ಸ್ಪರ್ಧಾಳುಗಳಿಗೆ ಒಟ್ಟು 10 ಲಕ್ಷ ರೂ. ಗಳ ಬಹುಮಾನ ನೀಡಲಾಗಿದೆ. ಎರಡು ದಿನಗಳ ಕಾಲ ನಡೆಯುವ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಗೆ 10 ಸಾವಿರ ಆಸನದ ವ್ಯವಸ್ಥೆ ಮಾಡಲಾಗಿದೆ.

ಮೂರು ಎಲ್ಇಡಿ ಬೆಳಗಿನ ವ್ಯವಸ್ಥೆ, ಪಾರ್ಕಿಗ್ ವ್ಯವಸ್ಥೆ ಮಾಡಲಾಗಿದೆ. ದಿ.25ರಂದು ಸಂಜೆ 5ಗಂಟೆಗೆ ನಡೆಯುವ ಪ್ರಥಮ ದಿನದಂದು ಕಾರ್ಯಕ್ರಮ ದಿವ್ಯ ಸಾನ್ನಿಧ್ಯವನ್ನು ಯಮಕನಮರಡಿ ಹುಣಸಿಕೊಳ್ಳಮಠದ ಶ್ರೀರಾಚೋಟಿ ಶ್ರೀಗಳು, ಹತ್ತರಗಿಯ ಶ್ರೀ ಗುರುಸಿದ್ದ ಮಹಾಸ್ವಾಮಿಗಳು, ಉಳ್ಳಾಗಡ್ಡಿ ಖಾನಾಪೂರದ ಶ್ರೀಸಿದ್ದೇಶ್ವರ ಶಿವಾಚಾರ್ಯ ಶ್ರೀಗಳು ವಹಿಸುವರು.

ಯಮಕನಮರಡಿ ಹಾಗೂ ಹತ್ತರಗಿ ಗ್ರಾಪಂ ಅಧ್ಯಕ್ಷರು, ಉಪಾಧ್ಯಕ್ಷರು, ಹುಕ್ಕೇರಿ ಬಿಇಒ ಆಗಮಿಸುವರು. ದಿ.26ರಂದು ಸಂಜೆ 5ಗಂಟೆಗೆ ನಡೆಯುವ ಸಮಾರೋಪ ಸಮಾರಂಭದಲ್ಲಿ ನಿಡಸೋಸಿಯ ಶ್ರೀ ಶಿವಲಿಂಗೇಶ್ವರ ಮಹಾಸ್ವಾಮಿಗಳು, ಹುಕ್ಕೇರಿ ಶ್ರೀ ಚಂದ್ರಶೇಖ ಮಹಾಸ್ವಾಮಿಗಳು, ಹುಕ್ಕೇರಿ ವಿರಕ್ತ ಮಠದ ಶರಣ ಬಸವ ದೇವರ, ಹತ್ತರಗಿ ಹರಿಮಂದಿರದ ಆನಂದ ಗೋಸಾವಿ ಮಹಾರಾಜರು ಹಾಗೂ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರನ್ನು ಸನ್ಮಾನಿಸಲಾಗುವುದು.

ಸಭೆಯ ಅಧ್ಯಕ್ಷತೆ ವಹಿಸಿ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಸಮಾರೋಪ ಭಾಷಣ ಮಾಡುವರು. ಕ್ಷೇತ್ರದ ಮಾಜಿ ಜಿಪಂ, ತಾಪಂ ಸದಸ್ಯರು ಹಲವಾರು ಗಣ್ಯರು ಆಗಮಿಸುವರು ಎಂದರು.

ಈ ಸಂದರ್ಭದಲ್ಲಿ ದಡ್ಡಿಯ ಯುವ ಮುಖಂಡ ದಯಾನಂದ ಪಾಟೀಲ, ಶಶಿ ಹಟ್ಟಿ, ಮಹಾದೇವ ಪಟೋಳಿ, ಈರಣ್ಣಾ ಬಿಸಿರೊಟ್ಟಿ, ಆರ್ಜಿಂಡ್ರಾಳಿ, ದಸ್ತಗೀರ ಬಸಾಪೂರಿ, ಎಸ್.ಎ.ಅತ್ಯಾಳಿ ಮುಂತಾದವರು ಇದ್ದರು.

## ಬೆಳೆ ಹಾನಿ ಸಮೀಕ್ಷೆಯಲ್ಲಿ ನಿರ್ಲಕ್ಷ್ಯ: ಪಿಡಿಒ ಅಮಾನತು

ಹಾವೇರಿ: ಜಿಲ್ಲೆಯ ಹಿರೇಕೆರೂರ ತಾಲೂಕಿನ ಚನ್ನಳ್ಳಿ ಗ್ರಾಮ ಪಂಚಾಯಿತಿಯ ಗ್ರೇಡ್–1 ಕಾರ್ಯದರ್ಶಿ ಹಾಗೂ ಪ್ರಭಾರಿ ಪಿಡಿಒ ಕೆ.ಪಿ. ಮಾನೆ ಅವರನ್ನು ಸರ್ಕಾರಿ ಕರ್ತವ್ಯದಲ್ಲಿ ಲೋಪವೆಸಗಿದ ಮತ್ತು ಬೇಜವಾಬ್ದಾರಿ ತೋರಿದ ಹಿನ್ನೆಲೆಯಲ್ಲಿ ಅಮಾನತು ಮಾಡಿ ಜಿಲ್ಲಾಧಿಕಾರಿ ರಘುನಂದನ ಮೂರ್ತಿ ಆದೇಶಿಸಿದ್ದಾರೆ.




ಕೆ.ಪಿ. ಮಾನೆ ಚನ್ನಳ್ಳಿ ಗ್ರಾಮ ಪಂಚಾಯಿತಿಯ ಗ್ರೇಡ್–1 ಕಾರ್ಯದರ್ಶಿ ಹುದ್ದೆಯಲ್ಲಿದ್ದು, ಅದರ ಪ್ರಭಾರಿ ಪಿಡಿಒ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದರು.

ಇತ್ತೀಚೆಗೆ ಬೆಳೆ ಹಾನಿ ಸ್ಥಳ ಸಮೀಕ್ಷೆ ಜವಾಬ್ದಾರಿ ಹಂಚಿಕೆ ವೇಳೆ ಸಮರ್ಪಕವಾಗಿ ಬೆಳೆ ಹಾನಿ ಆದುದರ ಕುರಿತು ಆನ್‌ಲೈನ್‌ನಲ್ಲಿ ಮಾಹಿತಿ ಅಪ್‌ಲೋಡ್ ಮಾಡದೇ ರೈತರಿಗೆ ನಷ್ಟ ಉಂಟು ಮಾಡಿದ್ದಲ್ಲದೇ, ತಪ್ಪು ಮಾಹಿತಿ ನೀಡಿದ್ದಾರೆ ಎಂದು ಆರೋಪಿಸಿ ರೈತರು ದೂರು ದಾಖಲಿಸಿದ್ದರು.

ಬಳಿಕ, ಈ ಕುರಿತು ತಾಪಂ ಇಓಗಳು ಸ್ಥಳ ಪರಿಶೀಲನೆ ನಡೆಸಿ ಆನ್‌ಲೈನ್‌ನಲ್ಲಿ ತಪ್ಪು ಮಾಹಿತಿ ಅಪ್‌ಲೋಡ್ ಮಾಡಿರುವ ಬಗ್ಗೆ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದಿದ್ದರು.

ಈ ಕರ್ತವ್ಯ ಲೋಪವನ್ನು ಗಂಭೀರವಾಗಿ ಪರಿಗಣಿಸಿದ ಜಿಲ್ಲಾಧಿಕಾರಿಗಳು ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಹಿರೇಕೆರೂರ ತಾಲೂಕಿನ ಚನ್ನಳ್ಳಿ ಗ್ರಾಮ ಪಂಚಾಯಿತಿಯ ಗ್ರೇಡ್–1 ಕಾರ್ಯದರ್ಶಿ ಹಾಗೂ ಪ್ರಭಾರಿ ಪಿಡಿಒ ಕೆ.ಪಿ. ಮಾನೆ ಅವರನ್ನು ಅಮಾನತು ಮಾಡಿ ಆದೇಶಿಸಿದ್ದಾರೆ.

## ಶಾಲೆಯ ಮೊದಲ ಮಹಡಿಯಿಂದ ಬಿದ್ದು ವಿದ್ಯಾರ್ಥಿ ಸಾವು

ವಿಜಯಪುರ: ಶಾಲೆಯ ಒಂದನೇ ಮಹಡಿಯಿಂದ ಆಯತಪ್ಪಿ ನೀರಿನ ಟ್ಯಾಂಕ್ ಮೇಲೆ ಬಿದ್ದು ವಿದ್ಯಾರ್ಥಿಯೊಬ್ಬ ಮೃತಪಟ್ಟ ಘಟನೆ ಇಂಡಿ ಪಟ್ಟಣದಲ್ಲಿ ನಡೆದಿದೆ.

ಪಟ್ಟಣದಲ್ಲಿರುವ ಖಾಸಗಿ ಶಾಲೆಯಲ್ಲಿ ಯುಕೆಜಿ ಓದುತ್ತಿದ್ದ ಶಿವಾರಾಜ್ ರೋಡಗಿ ಮೃತಪಟ್ಟ ಬಾಲಕ. ಮೆಟ್ಟಿಲಿನ ಮೇಲಿಂದ ಬಿದ್ದ ತಕ್ಷಣ ಬಾಲಕ ಶಿವಾರಾಜ್ನನ್ನು ಇಂಡಿ ಆಸ್ಪತ್ರೆಗೆ ರವಾನಿಸಲಾಗಿತ್ತು. ಅಲ್ಲಿಂದ ಹೆಚ್ಚಿನ ಚಿಕಿತ್ಸೆಗಾಗಿ ವಿಜಯಪುರದ ಖಾಸಗಿ ಆಸ್ಪತ್ರೆಗೆ ತರಲಾಗಿತ್ತು.

ಆದರೆ, ದಾರಿ ಮಧ್ಯೆಯೇ ಬಾಲಕ ಮೃತಪಟ್ಟಿದ್ದಾನೆ. ಬಾಲಕನನ್ನು ಆಸ್ಪತ್ರೆಗೆ ತಂದ ವಿಷಯ ತಿಳಿದ ಸಂಬಂಧಿಕರು, ಬಂದು ನೋಡಿದಾಗ ಬಾಲಕ ಮೃತಪಟ್ಟಿದ್ದ. ಈ ಬಗ್ಗೆ ವೈದ್ಯರನ್ನು ಕೇಳಿದಾಗ, ಶಾಲಾ ಆಡಳಿತ ಮಂಡಳಿಯವರು ಕರೆದುಕೊಂಡ ಬರುವ ಮೊದಲೇ ಬಾಲಕ ಮೃತಪಟ್ಟಿದ್ದಾನೆ ಎಂದು ತಿಳಿಸಿದ್ದಾರೆ.

ಪೋಷಕರ ಆಕ್ರೋಶ: ಆದರೆ, ಬಾಲಕ ಮೃತಪಟ್ಟರೂ ತಮಗೆ ಸರಿಯಾದ ಮಾಹಿತಿ ನೀಡಿಲ್ಲ, ನಿಮ್ಮ ಹುಡುಗ ಶಾಲೆಯಲ್ಲಿ ಬಿದ್ದಿದ್ದಾನೆ.



ಆಸ್ಪತ್ರೆಗೆ ಬನ್ನಿ ಎಂದಷ್ಟೇ ಮಾಹಿತಿ ನೀಡಿದ್ದಾರೆ ಎಂದು ಪೋಷಕರು ಶಾಲಾ ಆಡಳಿತ ಮಂಡಳಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ವಿಷಯ ತಿಳಿದ ಇಂಡಿ ಪೊಲೀಸರು, ವಿಜಯಪುರಕ್ಕೆ ಆಗಮಿಸಿ ಮೃತ ಬಾಲಕನ ಪೋಷಕರ ಜೊತೆ ಮಾತುಕತೆ ನಡೆಸಿ ಮಾಹಿತಿ ಕಲೆ ಹಾಕಿದರು.

ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಕೆಲ ಸಂಘಟನೆಗಳ ಮುಖಂಡರು ಇದೇ ವೇಳೆ ಒತ್ತಾಯಿಸಿದ್ದಾರೆ.

## ದಿ.25 ರಂದು ವೇಮನ ಅಕ್ಯಾಡೆಮಿ ಅಡಿಗಲ್ಲು ಸಮಾರಂಭ




ಮುಧೋಳ : ನಗರದಲ್ಲಿ ಭಕ್ತಿ ಶಿರೋಮಣಿ ಕರ್ಮಯೋಗಿ ಹೇಮರಡ್ಡಿ ಮಲ್ಲಮ್ಮ ಶೈಕ್ಷಣಿಕ ಮತ್ತು ಧಾರ್ಮಿಕ ಸಂಸ್ಥೆ 50 ವರ್ಷಗಳ ಹಿಂದೆ ಸಮಾಜದ ಅನೇಕ ಹಿರಿಯರಿಂದ ಸ್ಥಾಪಿಸತವಾಗಿರುವ ಸಂಸ್ಥೆಯಾಗಿದೆ. ಅನೇಕ ಧಾರ್ಮಿಕ ಕಾರ್ಯಗಳನ್ನು ಕೈಗೊಳ್ಳುತ್ತ ಬಂದಿದ್ದು, ಈಗ ಮಕ್ಕಳ ಉನ್ನತ ವಿದ್ಯಾಭ್ಯಾಸದ ಉದ್ದೇಶದಿಂದ ಶೈಕ್ಷಣಿಕ ಸಂಸ್ಥೆಯನ್ನು ಆರಂಭಿಸಲು ನಿರ್ಧರಿಸಲಾಗಿದೆ ಎಂದು ಸಂಸ್ಥೆಯ ಕಾರ್ಯದರ್ಶಿ ವಿಠ್ಠಲ ದ್ಯಾಮಪ್ಪ ನಾಗನೂರ ಹೇಳಿದರು.

ನಗರದ ಕಾನಿಪ ಕಾರ್ಯಾಲಯದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸುಮಾರು 6 ಎಕರೆ ಸಂಸ್ಥೆಯ ಸ್ವಂತ ಜಮೀನಿನಲ್ಲಿ ಬೃಹತ್ ಹಾಗೂ ಅತ್ಯಾಧುನಿಕ ಸೌಲಭ್ಯಗಳೊಂದಿಗೆ ಸುಸಜ್ಜಿತ ಕಟ್ಟಡವನ್ನು ಸುಮಾರು 11 ಕೋಟಿ ರೂ.ಗಳಲ್ಲಿ ನಿರ್ಮಿಸಲು ತೀರ್ಮಾನಿಸಲಾಗಿದ್ದು, ಅದಕ್ಕೆ ರೆಡ್ಡಿ ಸಮಾಜದ ಕೊಡುಗೈ ದಾನಿಗಳಿಂದ ದೇಣಿಗೆ ಸಂಗ್ರಹಿಸಲಾಗುತ್ತಿದೆ. ಕಟ್ಟಡವನ್ನು ಅಂದಾಜು ಬರುವ ಶೈಕ್ಷಣಿಕ ವರ್ಷದೊಳಗಾಗಿ ಶಾಲೆ ಪ್ರಾರಂಭವಾಗುವಂತೆ ನಿರ್ಮಿಸಲು ಸಿದ್ಧತೆ ಕೈಗೊಳ್ಳಲಾಗುತ್ತಿದೆ ಎಂದು ಅವರು ತಿಳಿಸಿದರು.

ನ್ಯಾಯವಾದಿ ರಾಮಕೃಷ್ಣ ಬುದ್ನಿ ಮಾತನಾಡಿ, ದಿ. 25 ರಂದು ಕಟ್ಟಡದ ಅಡಿಗಲ್ಲು ಶಂಕುಸ್ಥಾಪನೆ ಮಾಡಲು ನಿರ್ಧರಿಸಲಾಗಿದ್ದು, ವೇಮನ ಅಕ್ಯಾಡೆಮಿ ಸಿಬಿಎಸ್ಇ ಸ್ಕೂಲಿನ ಅಡಿಗಲ್ಲು ಸಮಾರಂಭದ ದಿವ್ಯ ಸಾನಿಧ್ಯವನ್ನು ಹರಿಹರದ ಮಹಾಯೋಗಿ ವೇಮನ್ ಗುರುಪೀಠ ಎರೆಹೊಸಳ್ಳಿಯ ಶ್ರೀ ವೇಮನಾನಂದ ಮಹಾಸ್ವಾಮಿಗಳು ವಹಿಸಲಿದ್ದು, ಅಧ್ಯಕ್ಷತೆಯನ್ನು ಭಕ್ತ ಶಿರೋಮಣಿ ಕರ್ಮಯೋಗಿ ಹೇಮರಡ್ಡಿ ಮಲ್ಲಮ್ಮ ಶೈಕ್ಷಣಿಕ ಮತ್ತು ಧಾರ್ಮಿಕ ಸಂಸ್ಥೆಯ ಅಧ್ಯಕ್ಷರಾದ ದಯಾನಂದ ಪಾಟೀಲ ವಹಿಸಲಿದ್ದಾರೆ. ಈ ಸಮಾರಂಭಕ್ಕೆ ಮುಧೋಳ ತಾಲೂಕಿನ ಮತ್ತು ಜಿಲ್ಲೆಯ ರೆಡ್ಡಿ ಸಮಾಜದ ಬಂಧುಗಳು ಹಾಗೂ ವಿವಿಧ ಸಮಾಜದ ಸಾರ್ವಜನಿಕರು ಈ ಸಮಾರಂಭದಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಅವರು ವಿನಂತಿಸಿದರು. ಈ ಸಂದರ್ಭದಲ್ಲಿ ಕೆ.ಆರ್.ಮಾಚಪ್ಪನವರ, ತಮ್ಮಣ್ಣ ಅರಳಿಕಟ್ಟಿ, ಮಹಾದೇವ ದಾಸರಡ್ಡಿ, ಶ್ರೀನಿವಾಸ ಪಾಟೀಲ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರ

## ರೈಲಿಗೆ ಸಿಲುಕಿ ಸ್ಟೇಷನ್ ಮಾಸ್ಟರ್ ಸಾವು




ಶಿವಮೊಗ್ಗ: ರೈಲಿಗೆ ಸಿಲುಕಿ ರೈಲ್ವೆ ಸ್ಟೇಷನ್ ಮಾಸ್ಟರ್ ಮೃತಪಟ್ಟಿರುವ ಘಟನೆ ಶಿವಮೊಗ್ಗ ತಾಲ್ಲೂಕಿನ ಕುಂಸಿಯಲ್ಲಿ ನಡೆದಿದೆ.

ಬಿಹಾರ ಮೂಲದ, ಆನಂದಪುರ ರೈಲ್ವೆ ನಿಲ್ದಾಣದ ಸ್ಟೇಷನ್ ಮಾಸ್ಟರ್ ಅರುಣ್ಕುಮಾರ್ ಮೃತಪಟ್ಟ ದುರ್ದೈವಿಯಾಗಿದ್ದಾರೆ. ರೈಲ್ವೆ ಹಳಿಗೆ ತಲೆಕೊಟ್ಟು ಮೃತಪಟ್ಟ ರೀತಿಯಲ್ಲಿ ಅರುಣ್ಕುಮಾರ್ ಅವರ ಮೃತದೇಹ ಪತ್ತೆಯಾಗಿದೆ.

ನಿನ್ನೆ ಬೆಳಗ್ಗೆ ಬೆಂಗಳೂರಿನಿಂದ ರೈಲಿನಲ್ಲಿ ಆಗಮಿಸಿದ ಅವರು ಕುಮ್ಸಿ ನಿಲ್ದಾಣದಲ್ಲಿ ಇಳಿದಿದ್ದರು.

ತಾವು ಬಂದಿದ್ದ ರೈಲಿಗೆ ಸಿಲುಕಿ ಸಾವನ್ನಪ್ಪಿರುವುದು ನಿಗೂಢವಾಗಿದೆ. ಈ ಸಂಬಂಧ ಶಿವಮೊಗ್ಗ ರೈಲ್ವೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

## ಆಸ್ತಿ ವಿಚಾರಕ್ಕೆ ಗ್ರಾಪಂ ಸದಸ್ಯನ ಹತ್ಯೆ




ಹುಬ್ಬಳ್ಳಿ: ಆಸ್ತಿ ವಿಚಾರವಾಗಿ ಗ್ರಾಮ ಪಂಚಾಯಿತಿ ಸದಸ್ಯರೊಬ್ಬರನ್ನು ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಜಿಲ್ಲೆಯ ಕಲಘಟಗಿ ತಾಲೂಕಿನ ಬಗಡಗೇರಿ ಗ್ರಾಮದಲ್ಲಿ ನಡೆದಿದೆ.

ಬಗಡಗೇರಿ ಗ್ರಾಮ ಪಂಚಾಯಿತಿ ಸದಸ್ಯ ನಿಂಗಪ್ಪ ದಾಸಪ್ಪನವರ ಹತ್ಯೆಯಾದವರು. ಆಸ್ತಿ ವಿಚಾರವಾಗಿ ದುಷ್ಕರ್ಮಿಗಳು ಮಾರಕಾಸ್ತ್ರದಿಂದ ಬರ್ಬರವಾಗಿ ಕೊಲೆ ಮಾಡಿ ಪರಾರಿಯಾಗಿದ್ದಾರೆ. ಸ್ಥಳಕ್ಕೆ ಕಲಘಟಗಿ ಠಾಣೆಯ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ತನಿಖೆ ಕೈಗೊಂಡಿದ್ದಾರೆ.

## ಕಚೇರಿಯಲ್ಲಿ ಮೈಮರೆತಿದ್ದ ಪೊಲೀಸ್ ಜೋಡಿ: ಮಧ್ಯರಾತ್ರಿ ಶಾಕ್ ನೀಡಿದ ಎಸ್ಪಿ

ಚೆನ್ನೈ: ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯ ಕೊಠಡಿಯೊಂದರ ಒಳಗಡೆ ಏಕಾಂತದಲ್ಲಿದ್ದ ಪೊಲೀಸ್ ಜೋಡಿ, ಉಪ ಪೊಲೀಸ್ ವರಿಷ್ಠಾಧಿಕಾರಿಯ ಕೈಗೆ ರೆಡ್ ಹ್ಯಾಂಡ್ ಆಗಿ ಸಿಕ್ಕಿಬಿದ್ದಿರುವ ಘಟನೆ ತಮಿಳುನಾಡಿನ ಮೈಲಾಡುತುರೈನಲ್ಲಿ ನಡೆದಿದೆ.

ಸಿಕ್ಕಿಬಿದ್ದ ಪೊಲೀಸ್ ಜೋಡಿಯನ್ನು ಅಮಾನತು ಮಾಡಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆದೇಶ ಹೊರಡಿಸಿದ್ದಾರೆ. ಆದಾಗ್ಯೂ ಈ ಘಟನೆ ಇದೀಗ ಸ್ಥಳೀಯವಾಗಿ ಭಾರೀ ವಿವಾದಕ್ಕೆ ಕಾರಣವಾಗಿದೆ.

ಕಳೆದ ವಾರ ಮಧ್ಯರಾತ್ರಿ ಕಚೇರಿಯ ಒಂದು ಕೊಠಡಿಯಲ್ಲಿ ಪೊಲೀಸ್ ಜೋಡಿಯೊಂದು ಏಕಾಂತದಲ್ಲಿ ಇದ್ದರು. ಈ ವೇಳೆ ಅಲ್ಲಿಯೇ ಕಾರ್ಯ




ನಿರ್ವಹಿಸುತ್ತಿದ್ದ ಇತರೆ ಸಿಬ್ಬಂದಿ ಈ ಬಗ್ಗೆ ಡಿಎಸ್ಪಿಗೆ ದೂರು ನೀಡಿದಾಗ, ಮಧ್ಯರಾತ್ರಿ ಅಲ್ಲಿಗೆ ತೆರಳಿದ ಡಿಎಸ್ಪಿ, ಒಳಗಡೆಯಿಂದ ಲಾಕ್ ಮಾಡಿದ ಕೋಣೆ'ಂ'ು ಬಾಗಿಲನ್ನು ಬಡಿದಿದ್ದಾರೆ.

ಒಂದೇ ಕೊಠಡಿಯಿಂದ ಪುರುಷ ಮತ್ತು ಮಹಿಳೆ ಹೊರಬರುತ್ತಿರುವುದನ್ನು ಕಂಡ ಉಪ ಪೊಲೀಸ್ ವರಿಷ್ಠಾಧಿಕಾರಿ ಇಬ್ಬರನ್ನೂ ಕರೆಸಿ ವಿಚಾರಣೆ ನಡೆಸಿದರು. ಪುರುಷ ಕಾನ್‌ಸ್ಟೆಬಲ್ ಮೈಲಾಡುತುರೈ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಯಲ್ಲಿ ಕೆಲಸ ಮಾಡುತ್ತಿದ್ದು, ಮಹಿಳೆಯು ಮೈಲಾಡುತುರೈ ಜಿಲ್ಲೆಯ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಕಾನ್ಸ್‌ಟೆಬಲ್ ಆಗಿ ಕೆಲಸ ಮಾಡುತ್ತಿರುವುದು ಕಂಡುಬಂದಿದೆ. ಇಬ್ಬರೂ ಅವಿವಾಹಿತರು ಎಂಬುದು ತನಿಖೆಯಿಂದ ತಿಳಿದುಬಂದಿದೆ.

ಇದರ ಬೆನ್ನಲ್ಲೇ, ಮೈಲಾಡುತುರೈ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೀನಾ ಅವರು ಕರ್ತವ್ಯದ ಸಮಯದಲ್ಲಿ ಅಸಭ್ಯ ಮತ್ತು ಅನುಚಿತ ವರ್ತನೆಯ ಆರೋಪದ ಮೇಲೆ ಪುರುಷ ಮತ್ತು ಮಹಿಳಾ ಕಾನ್ಸ್‌ಟೇಬಲ್‌ಗಳನ್ನು ಅಮಾನತುಗೊಳಿಸಿ ಆದೇಶಿಸಿದರು.

## 'ದಿಲ್ಲಿ ಚಲೋ' ಎರಡನೇ ಹಂತದ ಚಿತ್ರೀಕರಣ ಮುಕ್ತಾಯ

ಹುಬ್ಬಳ್ಳಿ: ಮಾರ್ರ್ಸ ಸ್ಟುಡಿಯೋ ಪ್ರೊಡಕ್ಷನ್ ಹುಬ್ಬಳ್ಳಿ ಅವರ 'ದಿಲ್ಲಿ ಚಲೋ' ಎಂಬ ಕನ್ನಡ ಚಲನಚಿತ್ರದ ಎರಡನೇ ಹಂತದ ಚಿತ್ರೀಕರಣ ಇದೀಗ ಮುಕ್ತಾಯಗೊಂಡಿದೆ.

ಹುಬ್ಬಳ್ಳಿ–ಧಾರವಾಡ, ಕೆಲಗೇರಿ, ಹೆಬ್ಬಳ್ಳಿ, ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಕಳೆದ ಇಪ್ಪತ್ತು ದಿನಗಳ ಕಾಲ ಸತತ ಚಿತ್ರೀಕರಣ ನಡೆಸಿ ಪ್ರಮುಖ ದೃಶ್ಯಗಳನ್ನು ಚಿತ್ರೀಕರಿಸುವದರೊಂದಿಗೆ ಚಿತ್ರದ ಎರಡನೆ ಹಂತದ ಚಿತ್ರೀಕರಣ ಮುಕ್ತಾಯಗೊಂಡಿದೆ. ಊರೂರು ತಿರುಗಿ ಬಲೂನ ಮಾರುವ (ಟೆನ್ನಿಸ್‌ಕೃಷ್ಣ) ವ್ಯಕ್ತಿಯೊಬ್ಬನ ಮಗಳು ಕ್ರೀಡೆಯಲ್ಲಿ ಪಾಲ್ಗೊಂಡು ವಿಜೇತಳಾಗಿ ಹಳ್ಳಿಯಿಂದ–ದಿಲ್ಲಿವರೆಗೂ ಸಾಗಿ ಯಶಸ್ಸಿನ ಗುರಿ ಹೇಗೆ ತಲುಪುತ್ತಾಳೆ ಮತ್ತು ಮುಂದೆ ಪೊಲೀಸ್

ಇಲಾಖೆಯಲ್ಲಿ ಸೇರಿ ಜವಾಬ್ದಾರಿಯುತ ಹುದ್ದೆ ಅಲಂಕರಿಸುವ ವಿಷಯದ ಕಥಾ ವಸ್ತು ಚಿತ್ರದಲ್ಲಿದೆ. ಹೆಣ್ಣೊಬ್ಬಳು ಮನಸ್ಸು ಮಾಡಿದರೆ ಯಾವುದೂ ಅಸಾಧ್ಯವಲ್ಲ.

ಸ್ತ್ರೀಶಕ್ತಿಯ ಕುರಿತು ಚಿತ್ರದಲ್ಲಿ ಹೇಳಲಾಗಿದೆ. ಚಿತ್ರದಲ್ಲಿ ನಾಲ್ಕು ಹಾಡುಗಳಿವೆ. ಡಿಸೆಂಬರ್ ತಿಂಗಳಲ್ಲಿ ಅಂತಿಮ ಹಂತದ ಚಿತ್ರೀಕರಣ ಮುಗಿಸಿ ಫೇಬ್ರುವರಿಯಲ್ಲಿ ಚಿತ್ರವನ್ನು ರಾಜ್ಯಾದ್ಯಂತ ತೆರೆಗೆ ತರುಲಾಗುತ್ತದೆ ಎಂದು ನಿರ್ದೇಶಕ ಶ್ರೀಪಾದ ಹೇಳಿದರು.



ಪಾತ್ರವರ್ಗದಲ್ಲಿ ಹಾಸ್ಯನಟ ಟೆನ್ನಿಸ್‌ಕೃಷ್ಣ, ಗಣೇಶ್‌ರಾವ್ ಕೇಸರಕರ, ಅಪೂರ್ವ ಭರಣಿ, ಶ್ರೀಪಾದ ಕುಲಕರ್ಣಿ, ಮಹಾಂತೇಶ ಹಳ್ಳೂರ, ಡಾ.ಶಿವಕುಮಾರ್ ಸ್ವಾಮೀಜಿ , ಸಿದ್ದುಕೃಷ್ಣ ಢೇಕಣೆ, ವಿನಾಯಕ ರುಡ್ನೂರ್. ರಾಜೀವ್‌ಸಿಂಗ್, ರಾಜು ಗಡ್ಡಿ, ಲಕ್ಷ್ಮೀ ಹುಬ್ಬಳ್ಳಿ, ಸುಕನ್ಯಾ, ನೀತಾ ಜಾಧವ್, ಅಮೃತಾ ನಾಯ್ಕ, ನಾರಾಯಣ್ ದೇಸಾಯಿ, ಅನ್ನಪೂರ್ಣಾ ಉಂಡಿ, ಪ್ರಭು ಹಂಚಿನಾಳ, ವೀರನಗೌಡ ಸಿದ್ದಾಪುರ, ಕಿರಣ್ ಸಿದ್ದಾಪುರ, ಮಹಾದೇವ ಸತ್ತಿಗೇರಿ, ಮಂಜುನಾಥ ಹಗೇದಾರ, ಆಸಿಫ್ , ರೋಶನ್ ಸಿಂಗ್. ಚಂದ್ರು ದಾಸರ. ಮಾರ್ಝ್ ಸುಲ್ತಾನ್, ಮುತ್ತಪ್ಪ ಪಾಲ್ತಿ, ಆನಂದ್ ಜೋಶಿ ಮೊದಲಾದವರು ಅಭಿನಯಿಸಿದ್ದಾರೆ.

ತಾಂತ್ರಿಕ ವರ್ಗದಲ್ಲಿ ಓಂ ಪ್ರಕಾಶ್ ಛಾಯಾಗ್ರಹಣ, ಸಿದ್ದು ಯ, ಶ್ರೀಪಾದ ಕುಲಕರ್ಣಿ ಸಾಹಿತ್ಯ, ಪ್ರೇಮ್ ಭರತ್ ಸಂಗೀತ , ಅಶೋಕ್ ದೇವ್, ಸ್ಮೈಲ್ ಚಂದ್ರು ಸಾಹಸ . ಪ್ರಕಾಶ್ ಕಮ್ಮಾರ ಪ್ರಸಾಧನ, ರೋಹಿತ್ ಪುಣೆ ನೃತ್ಯ , ಶ್ರೀಪಾದ್ ಕೆ, ಅಶೋಕ್‌ದೇವ್ ಕಥೆ–ಸಂಭಾಷಣೆ , ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ ಪತ್ರಿಕಾಸಂಪರ್ಕ, ಅಶೋಕ್‌ದೇವ್ ಸಹನಿರ್ದೇಶನ, ಶಾಮ್‌ಸುಂದರ್ ನಿರ್ವಹಣೆ , ಶ್ರೀಪಾದ ಕುಲಕರ್ಣಿ ಚಿತ್ರಕಥೆ ಬರೆದು ನಿರ್ದೇಶನ ಮಾಡಿರುವ ಈ ಚಿತ್ರಕ್ಕೆ , ಶ್ರೀಮತಿ ಸಂಧ್ಯಾ ಜೋಶಿ, ಶ್ರೀಪಾದ ಕುಲಕರ್ಣಿ ನಿರ್ಮಾಪಕರಾಗಿದ್ದಾರೆ.

## ಬೆಂಗಳೂರು: ಎಲ್‌ಪಿಜಿ ಸಿಲಿಂಡರ್ ಸ್ಫೋಟ, ಐವರಿಗೆ ಗಾಯ

ಬೆಂಗಳೂರು: ಎಲ್ಪಿಜಿ ಸಿಲಿಂಡರ್ ಸ್ಫೋಟಗೊಂಡು ಐವರು ಗಾಯಗೊಂಡಿರುವ ಘಟನೆ ನಗರದ ವೀವರ್ಸ್ ಕಾಲೋನಿ ಸಮೀಪದ ಮಾರುತಿ ಬಡಾವಣೆಯಲ್ಲಿ ಬುಧವಾರ ನಡೆದಿದೆ.

ಉತ್ತರ ಪ್ರದೇಶದ ಬನಾರಸ್ ಮೂಲದ ಜಮಾಲ್(32) ನಾಜಿಯಾ(22) ಇರ್ಫಾನ್ (21)ಗುಲಾಬ್(18) ಶಹಜಾದ್(9) ಗಾಯಗೊಂಡವರಾಗಿದ್ದಾರೆ.

ಮಾರ್ಟಿನ್ ಎಂಬುವವರಿಗೆ ಸೇರಿದ ಮನೆಯಲ್ಲಿ ಕುಟುಂಬ ವಾಸವಾಗಿತ್ತು. ಆಡುಗೆ ಅನಿಲ ಸೋರಿಕೆಯಾಗಿರುವುದು ತಿಳಿಯದೆ ನ.22 ಮುಂಜಾನೆ 5:30 ರ ಸುಮಾರಿಗೆ ಲೈಟ್ನ ಸ್ವಿಚ್ ಆನ್ ಮಾಡಿದಾಗ ಸಿಲಿಂಡರ್ ಸ್ಫೋಟಗೊಂಡಿದೆ. ಸ್ಫೋಟದ ತೀವ್ರತೆಗೆ ಮನೆಯ ಕಿಡಕಿ ಬಾಗಿಲುಗಳು ಛಿದ್ರಗೊಂಡಿವೆ. ಅಲ್ಲದೆ, ಮನೆಯ ಮುಂಭಾಗ ನಿಲ್ಲಿಸಿದ್ದ ಕಾರಿನ ಗಾಜು ಕೂಡ ಪುಡಿ ಪುಡಿಯಾಗಿವೆ. ಸುದ್ದಿ ತಿಳಿಯುತ್ತದ್ದಂತೆಯೇ ಸ್ಥಳಕ್ಕಾಗಮಿಸಿದ ಅಗ್ನಿಶಾಮಕ ದಳ ಸಿಬ್ಬಂದಿ ಹಾಗೂ ಕೋಣನಕುಂಟೆ ಪೊಲೀಸರು ಸ್ಥಳಕ್ಕೆ ಭೇಟಿ ಪರಿಶೀಲನೆ ನಡೆಸಿದ್ದಾರೆ.

## ಅಲ್ಪಸಂಖ್ಯಾತರ ಸಮುದಾಯದ ಕುಂದು ಕೊರತೆಗಳ ಸಭೆ

ಮಂಗಳೂರು: ರಾಜ್ಯ ಅಲ್ಪಸಂಖ್ಯಾತರ ಆಯೋಗದ ಅಧ್ಯಕ್ಷ ಅಬ್ದುಲ್ ಅಜೀಮ್ ಮತ್ತು ಕಾರ್ಯದರ್ಶಿ ಸಲ್ಮಾ ಫಿರ್ದೋಸ್ ನವೆಂಬರ್ 27ರಂದು ಬೆಳಗ್ಗೆ 11.30 ರಿಂದ 1 ಗಂಟೆಯವರೆಗೆ ಜಿಲ್ಲಾ ಪಂಚಾಯತ್ ನೇತ್ರಾವತಿ ಸಭಾಂಗಣದಲ್ಲಿ ಅಲ್ಪಸಂಖ್ಯಾತರ ಸಮುದಾಯದ ಕುಂದು ಕೊರತೆಗಳ ಸಭೆ ನಡೆಸುವರು. ಅಲ್ಪಸಂಖ್ಯಾತ ಸಮುದಾಯದವರು ಈ ಸಭೆಗೆ ಹಾಜರಾಗಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಜನರಿಗೆ ಉಧ್ಯಮಶೀಲತಾ ತರಬೇತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ: 2023–24ನೇ ಸಾಲಿನ ಬೆಳಗಾವಿ ತಾಲೂಕಾ ವ್ಯಾಪ್ತಿಯಲ್ಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಉಧ್ಯಮಶೀಲತಾ ತರಬೇತಿ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಸದರಿ ಅಭ್ಯರ್ಥಿಗಳು https://www.scsptsp.karnataka.gov.in ನಲ್ಲಿ ಆನ್ಲೈನ್ ಮೂಲಕ ನ 30 2023 ರೊಳಗಾಗಿ ಅರ್ಜಿಯನ್ನು ಸಲ್ಲಿಸಬಹುದಾಗಿದೆ.

**ಷರತ್ತುಗಳು :**

ಅರ್ಜಿದಾರರಿಗೆ ನಿಗಧಿಪಡಿಸಿರುವ ವಯೋಮಿತಿ 21 ರಿಂದ 50 ವರ್ಷ ಒಳಗಿರಬೇಕು, ಶೈಕ್ಷಣಿಕ ಅರ್ಹತೆ– ಪಿಯುಸಿ ಮತ್ತು ಮೇಲ್ಪಟ್ಟು ಪಟ್ಟಿರಬೇಕು, ಉದ್ದಿಮೆ ವಾಣಿಜ್ಯ ಚಟುವಟಿಕೆಗಳನ್ನು ಪ್ರಾರಂಭಿಸಲು ನೀಡುತ್ತಿರುವ ತರಬೇತಿಯಾಗಿದ್ದು, ಯಾವುದೇ

ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ತರಬೇತಿಗೆ ಅರ್ಹರಿರುವುದಿಲ್ಲ,ತರಬೇತಿಗೆ ಆಯ್ಕೆಯಾದ ಅಭ್ಯರ್ಥಿಗಳಿಗೆ 10 ದಿನಗಳ ಅವಧಿಯ ತರಬೇತಿಯಲ್ಲಿ ಉಚಿತವಾಗಿ ಮದ್ಯಾಹ್ನದ ಊಟದ ವ್ಯವಸ್ಥೆ ಮಾಡಲಾಗುವುದು ಹಾಗೂ ತರಬೇತಿಗೆ ಹಾಜರಾಗಲು ಪ್ರತಿ ಅಭ್ಯರ್ಥಿಗೆ ಪ್ರಯಾಣ ಭತ್ಯೆಯಾಗಿ 10 ದಿನಗಳಿಗೆ ರೂ:1000=00ಗಳನ್ನು ನೀಡಲಾಗುವುದು. ಅಭ್ಯರ್ಥಿಗಳಿಗೆ ಉಪಹಾರ ಮತ್ತು ಮದ್ಯಾಹ್ನ ಊಟದ ವ್ಯವಸ್ಥೆ ಇರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ದೂರವಾಣಿ ಸಂ:0831–2470545 ಗೆ ಸಂಪರ್ಕಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆಇಎ ಪರೀಕ್ಷಾ ಅಕ್ರಮದ ಕಿಂಗ್ ಪಿನ್ ಬಂಧಿಸಲು ನಿರ್ಲಕ್ಷ್ಯ; ಸಿಪಿಐ ಸಸ್ಪೆಂಡ್




ಕಲಬುರ್ಗಿ: ಕೆಇಎ ಹಾಗೂ ಪಿಎಸ್ ಐ ಹುದ್ದೆ ನೇಮಕಾತಿ ಪರೀಕ್ಷಾ ಅಕ್ರಮದ ಪ್ರಮುಖ ಆರೋಪಿಯನ್ನು ಬಂಧಿಸಲು ನಿರ್ಲಕ್ಷ್ಯ ತೋರಿದ್ದ ಆರೋಪದಲ್ಲಿ ಅಫಜಲಪುರ ಸಿಪಿಐ ಅವರನ್ನು ಅಮಾನತು ಮಾಡಲಾಗಿದೆ.

ಪ್ರಕರಣದ ಪ್ರಮುಖ ಆರೋಪಿ ಆರ್ಡಿ. ಪಾಟೀಲ್ ನನ್ನು ಬಂಧಿಸಲು ನಿರ್ಲಕ್ಷ ತೋರಿದ ಆರೋಪದಲ್ಲಿ ಕಲಬುರ್ಗಿ ಜಿಲ್ಲೆಯ ಅಫಜಲಪುರ ಸಿಪಿಐ ಪಂಡಿತ ಸಗರ ಅವರನ್ನು ಸಸ್ಪೆಂಡ್ ಮಾಡಲಾಗಿದೆ.

ನ.6ರಂದು ಕಲಬುರ್ಗಿ ನಗರದ ಅಪಾರ್ಟ್ ಮೆಂಟ್ ನಿಂದ ತಪ್ಪಿಸಿಕೊಂಡು ಆರೋಪಿ ಆರ್ಡಿ. ಪಾಟೀಲ್ ಪರಾರಿಯಾಗಿದ್ದ. ಈ ಹಿನ್ನೆಲೆಯಲ್ಲಿ ಸಿಪಿಐ ನಿರ್ಲಕ್ಷ ಎಂದು ಪಂಡಿತ ಸಗರ ಅವರನ್ನು ಅಮಾನತು ಮಾಡಿ ಐಜಿಪಿ ಆದೇಶ ಹೊರಡಿಸಿದ್ದಾರೆ.

# ಮಹಾನಗರ ಪಾಲಿಕೆ: 155 ಪೌರಕಾರ್ಮಿಕರನ್ನು ಖಾಯಂಗೊಳಿಸಲು ನಿರ್ಧಾರ

## ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ– ಆಕ್ಷೇಪಣೆ ಆಹ್ವಾನ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಅರ್ಹ 155 ಪೌರಕಾರ್ಮಿಕರನ್ನು ಖಾಯಂಗೊಳಿಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದ್ದಾರೆ.

ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ ನೇರ ನೇಮಕಾತಿಯಡಿ ಖಾಲಿ ಇರುವ ಒಟ್ಟು 155 ಪೌರಕಾರ್ಮಿಕರ ಹುದ್ದೆಗಳ ನೇಮಕಾತಿಗಾಗಿ ನೇಮಕಾತಿ ಅಧಿಸೂಚನೆ ಹೊರಡಿಸಿದ ದಿನಾಂಕದ ಪೂರ್ವದಲ್ಲಿ ನಿರಂತರವಾಗಿ ಕ್ಷೇಮಾಭಿವೃದ್ಧಿ/ದಿನಗೂಲಿ/ಗುತ್ತಿಗೆ/ಸಮಾನ ಕೆಲಸಕ್ಕೆ ಸಮಾನ ವೇತನ/ಹೊರಗುತ್ತಿಗೆ ಮೇರೆಗೆ ಕನಿಷ್ಠ 2 ವರ್ಷಗಳ ಸೇವೆ ಸಲ್ಲಿಸಿರುವ ಮತ್ತು ಹಾಲಿ ಕಾರ್ಯನಿರ್ವಹಿಸುತ್ತಿರುವ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿತ್ತು.

ಸ್ವೀಕೃತ ಅರ್ಜಿಗಳನ್ನು ಪರಿಶೀಲನಾ ಸಮಿತಿಯಿಂದ ಪರಿಶೀಲನೆಗೆ ಒಳಪಡಿಸಿ ಅಂತಿಮವಾಗಿ ಸಲ್ಲಿಕೆಯಾದ ಒಟ್ಟು 468 ಅರ್ಹ ಅಭ್ಯರ್ಥಿಗಳ ಪೈಕಿ ನೇರನೇಮಕಾತಿಯಡಿ ಖಾಲಿ ಇರುವ ಹಾಗೂ ಮೀಸಲಾತಿಗನುಗುಣವಾಗಿ 155 ಅಭ್ಯರ್ಥಿಗಳನ್ನು ಖಾಯಂಗೊಳಿಸಲು ದಿನಾಂಕ: 18.11.2023 ರಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಸಭೆ ಜರುಗಿಸಿ ಅಂತಿಮಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ.



ಜಿಲ್ಲಾ ಆಯ್ಕೆ ಸಮಿತಿ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿದಂತೆ ಬೆಳಗಾವಿ ಮಹಾನಗರ ಪಾಲಿಕೆಯಲ್ಲಿ ಹೊರಗುತ್ತಿಗೆ ಆಧಾರದ ಮೇರೆಗೆ ಕಾರ್ಯನಿರ್ವಹಿಸುತ್ತಾ ಪ್ರಸ್ತುತ ನೇರವೇತನದಡಿ ಕೆಲಸ ನಿರ್ವಹಿಸುತ್ತಿರುವ 155 ಸದರಿ ಪೌರಕಾರ್ಮಿಕರನ್ನು ಖಾಯಂಗೊಳಿಸಲು ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ದಿ: 18–11–2023 ರಂದು ಪ್ರಕಟಿಸಲಾಗಿದೆ.

ಸದರಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಬೆಳಗಾವಿ ಮಹಾನಗರ ಪಾಲಿಕೆಯ, ಸಂಬಂಧಿಸಿದ ಉಪವಿಭಾಗಾಧಿಕಾರಿಗಳ, ತಹಶೀಲ್ದಾರ ಕಾರ್ಯಾಲಯದ ಹಾಗೂ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ ಹಾಗೂ ಪಾಲಿಕೆಯ / ಡಿಯುಡಿಸಿ ವೆಬ್ ಸೈಟಿನಲ್ಲಿ ಅಳವಡಿಸಲಾಗಿದೆ.

ಸದರಿ ತಾತ್ಕಾಲಿಕ ಆಯ್ಕೆಪಟ್ಟಿಗೆ ಈ ಪ್ರಕಟಣೆಯನ್ನು ಹೊರಡಿಸಿದ 15 ದಿನಗಳೊಳಗಾಗಿ ಅಂದರೆ ದಿನಾಂಕ: 04.12.2023 ರ ಸಾಯಂಕಾಲ 4.00 ಘಂಟೆಯೊಳಗಾಗಿ ಬಾಧಿತ ವ್ಯಕ್ತಿಗಳಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿರುತ್ತದೆ.

ಆಕ್ಷೇಪಣೆಗಳನ್ನು ಸಲ್ಲಿಸಲು ಇಚ್ಚಿಸುವ ಅಭ್ಯರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ಆಯುಕ್ತರು, ಬೆಳಗಾವಿ ಮಹಾನಗರ ಪಾಲಿಕೆ, ಬೆಳಗಾವಿ ಇವರಿಗೆ ಕಚೇರಿ ವೇಳೆಯಲ್ಲಿ ಸಲ್ಲಿಸಿ ಸ್ವೀಕೃತಿ ಪಡೆಯಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಹಶೀಲ್ದಾರ್ ಬಂಧನಕ್ಕೆ ಸಿವಿಲ್ ಕೋರ್ಟ್ ಆದೇಶ



ಹಾಸನ: ಸಾಕ್ಷ್ಯ ಹೇಳುವುದಕ್ಕೆ ಕೋರ್ಟ್‌ಗೆ ಹಾಜರಾಗದ ಹಿನ್ನೆಲೆಯಲ್ಲಿ ತಹಶೀಲ್ದಾರ್ ಶ್ವೇತಾ ಅವರ ಬಂಧನಕ್ಕೆ ಸಿವಿಲ್ ಕೋರ್ಟ್ ಆದೇಶ ನೀಡಿದೆ.

ಸಾಕ್ಷ್ಯ ಹೇಳುವ ವಿಷಯದಲ್ಲಿ ತಹಶೀಲ್ದಾರ್ ನ್ಯಾಯಾಲಯಕ್ಕೆ ಗೈರು ಹಾಜರಾಗಿದ್ದಾರೆ. ಇದರ ಜೊತೆಗೆ ಸಮನ್ಸ್ ಕೂಡ ಪಡೆಯದ ಹಿನ್ನೆಲೆಯಲ್ಲಿ ತಹಶೀಲ್ದಾರ್ ಅವರನ್ನು ಬಂಧಿಸಿ ಕೋರ್ಟ್ ಮುಂದೆ ಹಾಜರುಪಡಿಸಲು ಸೂಚನೆ ನೀಡಲಾಗಿದೆ. ಹಾಸನ ಸಿವಿಲ್ ಕೋರ್ಟ್ ಆದೇಶದ ಹಿನ್ನೆಲೆಯಲ್ಲಿ ತಹಶೀಲ್ದಾರ್ ಶ್ವೇತಾ ಅವರನ್ನು ಬಂಧಿಸೋ ಪ್ರಕ್ರಿಯೆ ಕೂಡ ಆರಂಭವಾಗಿದೆ. ಕೋರ್ಟ್ ತಹಶೀಲ್ದಾರ್ ಹಾಗೂ ವಕೀಲರು ಶ್ವೇತಾ ಅವರ ಕಚೇರಿಗೆ ತೆರಳಿದ್ದಾರೆ. ಬಂಧಿಸಲು ಬಂದ ವೇಳೆ ತಹಶೀಲ್ದಾರ್ ಅವರು ಕಚೇರಿಯಲ್ಲಿ ಇರಲಿಲ್ಲ. ಹೀಗಾಗಿ ಕಚೇರಿಯಲ್ಲಿದ್ದ ಆಡಳಿತ ಶಿರಸ್ತೇದಾರ್ ಕೆ.ಕೆ ತಿಮ್ಮಯ್ಯ ಅವರನ್ನು ವಕೀಲರು ತರಾಟೆಗೆ ತೆಗೆದುಕೊಂಡಿದ್ದಾರೆ. ಕೋರ್ಟ್ ಆದೇಶ ಪಾಲಿಸದ ಹಿನ್ನೆಲೆಯಲ್ಲಿ ಶಿರಸ್ತೆದಾರ್‌ಗೆ ಹಿಗ್ಗಾಮುಗ್ಗಾ ಜಾಡಿಸಿದ ಘಟನೆ ನಡೆದಿದೆ.

## ಬೆಳಗಾವಿ ಅಧಿವೇಶನಕ್ಕೆ ಪ್ರತಿಯಾಗಿ 'ಮಹಾಮೇಳಾವ್'ಗೆ ಎಂಇಎಸ್ ತಯಾರಿ

ಬೆಳಗಾವಿ: ಇಲ್ಲಿನ ಸುವರ್ಣ ವಿಧಾನಸೌಧದಲ್ಲಿ 10 ದಿನಗಳ ಕಾಲ ನಡೆಯುವ ಚಳಿಗಾಲ ಅಧಿವೇಶನಕ್ಕೆ ಪ್ರತಿಯಾಗಿ ಮಹಾಮೇಳಾವ್ ನಡೆಸಲು ಎಂಇಎಸ್ ನಿಂದ ಸಿದ್ಧತೆ ನಡೆಸಿದ್ದು, ಗಡಿ ಜಿಲ್ಲೆಯಲ್ಲಿ ಮತ್ತೆ ಭಾಷಾ ದ್ವೇಷದ ಕಿಡಿ ಹಚ್ಚಲು ಮುಂದಾಗಿದೆ.

ಮರಾಠಾ ಮಂದಿರದಲ್ಲಿ ಸಭೆ ಸೇರಿ ಮಹಾಮೇಳಾವ್ ನಡೆಸಲು ಎಂಇಎಸ್ ತೀರ್ಮಾನ ಕೈಗೊಳ್ಳುವ ಮೂಲಕ ಗಡಿ ಕನ್ನಡಿಗರ ಕೆಂಗಣ್ಣಿಗೆ ಗುರಿಯಾಗಿದೆ.

ಮಹಾಮೇಳಾವ್ ಯಶಸ್ಸಿಗಾಗಿ ಬೆಳಗಾವಿ ಮತ್ತು ಖಾನಾಪುರದಲ್ಲಿ ಸಮಿತಿ ರಚನೆಗೆ ತಯಾರಿ



ನಡೆಸುತ್ತಿದ್ದು, ಈ ವಿಷಯವನ್ನು ಮಹಾರಾಷ್ಟ್ರ ಸರ್ಕಾರ ಮತ್ತು ಅಲ್ಲಿನ ಸಚಿವರ ಗಮನಕ್ಕೆ ತರಲು ನಿರ್ಧರಿಸಿದ್ದಾರೆ.

ಅಲ್ಲದೇ ಮಹಾರಾಷ್ಟ್ರದ ನಾಯಕರನ್ನು ಕರ್ನಾಟಕಕ್ಕೆ ಆಹ್ವಾನಿಸಿ ಮತ್ತೊಮ್ಮೆ ರಾಜ್ಯ ಸರ್ಕಾರಕ್ಕೆ ಸೆಡ್ಡು ಹೊಡೆಯಲು ಮುಂದಾಗಿದೆ.

ಪ್ರತಿ ವರ್ಷ ಬೆಳಗಾವಿಯಲ್ಲಿ ನಡೆಯುವ ಚಳಿಗಾಲ ಅಧಿವೇಶನ ಪ್ರತಿಯಾಗಿ ಎಂಇಎಸ್ ಕಾರ್ಯಕರ್ತರು ಮಹಾಮೇಳಾವ್ ನಡೆಸುತ್ತಾ ಬಂದಿದ್ದಾರೆ. ಕಳೆದ ವರ್ಷ ಮಹಾಮೇಳಾವ್ಗೆ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಅನುಮತಿ ನಿರಾಕರಿಸಿತ್ತು.

ಪದೇ ಪದೇ ಗಡಿ ವಿವಾದ ಕೆದಕುತ್ತಿರುವ ಎಂಇಎಸ್ ಕಾರ್ಯಕರ್ತರು ಕನ್ನಡ ಮತ್ತು ಮರಾಠಿ ಜನರ ನಡುವೆ ಭಾಷಾ ಕಿಡಿ ಹೊತ್ತಿಸಲು ಯತ್ನಿಸುತ್ತಿದ್ದಾರೆ. ಮಹಾಮೇಳಾವ್ ನಡೆಸುವ ಎಂಇಎಸ್ ನಿರ್ಧಾರಕ್ಕೆ ಕನ್ನಡಿಗರು ವಿರೋಧ ವ್ಯಕ್ತಪಡಿಸಿದ್ದು, ಅನುಮತಿ ನೀಡದಂತೆ ಜಿಲ್ಲಾಡಳಿತವನ್ನು ಆಗ್ರಹಿಸಿದ್ದಾರೆ.

# ಹುಕ್ಕೇರಿ ಕನ್ನಡ ಕೆಲಸಗಳಿಗೆ ಮಾದರಿ: ಶಾಸಕ ನಿಖಿಲ್ ಕತ್ತಿ

ಕರ್ನಾಟಕ ರಾಜ್ಯೋತ್ಸವದಲ್ಲಿ ಮೊಳಗಿದ ಕನ್ನಡದ ಕಹಳೆ

ಹುಕ್ಕೇರಿ: ಶಾಂತಿ–ಸಹಬಾಳ್ವೆ ಮತ್ತು ಭಾವೈಕ್ಯತೆಗೆ ಹೆಸರುವಾಸಿಯಾದ ಹುಕ್ಕೇರಿ ಕನ್ನಡದ ಕೆಲಸಗಳಿಗೆ ಇಡೀ ರಾಜ್ಯಕ್ಕೆ ಮಾದರಿಯಾಗಬೇಕು ಎಂದು ಶಾಸಕ ನಿಖಿಲ ಕತ್ತಿ ಹೇಳಿದರು.

ಪಟ್ಟಣದಲ್ಲಿ ಗುರುವಾರ ಕರ್ನಾಟಕ ರಾಜ್ಯೋತ್ಸವ ಉತ್ಸಾಹಿ ಸಮಿತಿ ಏರ್ಪಡಿಸಿದ್ದ 68ನೇ ಕನ್ನಡ ರಾಜ್ಯೋತ್ಸವದಲ್ಲಿ ಭುವನೇಶ್ವರಿ ಭಾವಚಿತ್ರದ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದ ಅವರು, ಕನ್ನಡ ಕಟ್ಟುವ ಕಾರ್ಯದಲ್ಲಿ ಹುಕ್ಕೇರಿ ತಾಲೂಕು ಬರುವ ದಿನಗಳಲ್ಲಿ ಐತಿಹಾಸಿಕ ಹೆಜ್ಜೆಗಳಿಗೆ ಕಾರಣವಾಗಬೇಕು ಎಂದರು.

ರಾಜ್ಯೋತ್ಸವ ಕೇವಲ ಆಚರಣೆಗೆ ಸೀಮಿತವಾಗಿರಬಾರದು. ಕನ್ನಡ ಉಳಿಸಿ ಬೆಳೆಸುವ ಕಾರ್ಯ ನಿತ್ಯ ನಿರಂತರವಾಗಬೇಕು. ಕನ್ನಡನಾಡಿನ ಹಿತಾಸಕ್ತಿ ಕಾಪಾಡುವಲ್ಲಿ ರಾಜಿಯಾಗುವ ಪ್ರಶ್ನೆಯೇ ಇಲ್ಲ. ನಾಡಿಗೆ ಧಕ್ಕೆಯಾಗುವಂಥ ಪ್ರಸಂಗಗಳನ್ನು ಸಹಿಸಲಾಗದು. ಕನ್ನಡದ ಮನಸ್ಸುಗಳು ಅನ್ಯ ಭಾಷಿಕರಿಗೆ ಎಂದಿಗೂ ನೋವು ತರಿಸುವಂಥ ಕೆಲಸ ಮಾಡಿಲ್ಲ ಎಂದು ಅವರು ಹೇಳಿದರು.

ಯುವ ನಾಯಕರಾದ ಪೃಥ್ವಿ ಕತ್ತಿ, ಪವನ ಕತ್ತಿ ಅವರು ರೂಪಕಗಳು ಮತ್ತು ಕಲಾ ತಂಡಗಳ ಸಾಂಸ್ಕೃತಿಕ ಮೆರವಣಿಗೆ ಉದ್ಘಾಟಿಸಿದರು. ತಾಪಂ ಕಾರ್ಯನಿರ್ವಾಹಕ



ಅಧಿಕಾರಿ ಪ್ರವೀಣ ಕಟ್ಟಿ, ಸಿಪಿಐ ಮಹಾಂತೇಶ ಬಸ್ಸಾಪುರ ಮಾತನಾಡಿದರು.

ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ, ಕ್ಯಾರಗುಡ್ ಅವುಜೀಕರ ಆಶ್ರಮದ ಅಭಿನವ ಮಂಜುನಾಥ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ರಾಜ್ಯೋತ್ಸವ ಉತ್ಸಾಹಿ ಸಮಿತಿ ಅಧ್ಯಕ್ಷ ರಾಜು ಮುನ್ನೋಳಿ ಅಧ್ಯಕ್ಷತೆ ವಹಿಸಿದ್ದರು.

ಮಹಾವೀರ ಉದ್ಯೋಗ ಸಮೂಹ ಸಂಸ್ಥೆ ಅಧ್ಯಕ್ಷ ಮಹಾವೀರ ನಿಲಜಗಿ, ಪುರಸಭೆ ಮಾಜಿ ಅಧ್ಯಕ್ಷರಾದ ಎ.ಕೆ.ಪಾಟೀಲ, ಜಯಗೌಡ ಪಾಟೀಲ, ಹಿರಾಶುಗರ ಕಾರ್ಖಾನೆ ನಿರ್ದೇಶಕ ಅಶೋಕ ಪಟ್ಟಣಶೆಟ್ಟಿ, ಮುಖಂಡರಾದ ಗುರು ಕುಲಕರ್ಣಿ, ಸುಹಾಸ ನೂಲಿ, ಅಪ್ಪುಶ ತುಬಚಿ, ಭೀಮಶಿ ಗೋರಖನಾಥ, ಮಧುಕರ ಕರನಿಂಗ, ಕುಮಾರ ಜುಟಾಳೆ, ಜ್ಯೋತಿಬಾ ದುಪ್ಪಟ್ಟಿ, ಸದಾಶಿವ ಕರೆಪ್ಪಗೋಳ, ಪ್ರಜ್ವಲ ನಿಲಜಗಿ, ಗವೀಶ ರವದಿ, ಶಿವರಾಜ ನಾಯಿಕ, ರಮೇಶ ಬೋಳಗಾಂವಿ, ರಾಜು ಅಂಕಲೆ, ವೈಭವ ಶಿವಮೊಗ್ಗಿಮಠ, ಸಂತೋಷ ಸುಣಗಾರ, ಸುಭಾಶ ಹಾವನ್ನವರ ಮತ್ತಿತರರು ಉಪಸ್ಥಿತರಿದ್ದರು.

ಹಾರಾಡಿದ ಕನ್ನಡ ಭಾವುಟ: ವೈಭವದ ಈ ಮೆರವಣಿಗೆ ಕಣ್ತುಂಬಿಸಿಕೊಳ್ಳಲು ತಾಲೂಕು ಸೇರಿದಂತೆ ಜಿಲ್ಲೆಯ ವಿವಿಧ ಭಾಗಗಳಿಂದ ಜನಸಾಗರವೇ ಹರಿದು ಬಂದಿತು. ಬಾನೆತ್ತರಕ್ಕೆ ಕನ್ನಡದ ಭಾವುಟಗಳು ಹಾರಾಡಿದವು. ಕಣ ಕಣದಲ್ಲೂ ಕನ್ನಡ ಎಂಬ ಭಾವ ಮೂಡಿತು. ಸ್ತಬ್ದಚಿತ್ರ–ರೂಪಕಗಳು ಕನ್ನಡ ನಾಡಿನ ಗತವೈಭವ ಸಾರಿದವು. ಕನ್ನಡ ನಾಡು–ನುಡಿ, ನೆಲ–ಜಲ, ಭಾಷೆ, ಸಾಹಿತ್ಯ, ಸಂಸ್ಕೃತಿಯನ್ನು ಅನಾವರಣಗೊಳಿಸಿದವು. ಕರಡಿ ಮಜಲು, ಡೊಳ್ಳು, ಲೇಜಿಮ್ ಝಾಂಜಪಥಕ, ನಾನಾ ವೇಷಧಾರಿಗಳು ನೋಡುಗರ ಗಮನ ಸೆಳೆದವು.

ನೃತ್ಯಕ್ಕೆ ಕತ್ತಿ ಸಹೋದರರ ಸಾಥ್ : ರಾಜ್ಯದ ಗಡಿಗೆ ಹೊಂದಿಕೊಂಡಿರುವ ಹುಕ್ಕೇರಿಯಲ್ಲಿ ಗುರುವಾರ ನಡೆದ ಅದ್ದೂರಿ ರಾಜ್ಯೋತ್ಸವದಲ್ಲಿ ಕನ್ನಡದ ಕಹಳೆ ಮೊಳಗಿತು. ಇಡೀ ಪಟ್ಟಣದಲ್ಲಿ ಕನ್ನಡದ ಕಂಪು ಸೂಸಿತು. ರಾಜ್ಯೋತ್ಸವದ ಮೆರಗು ಹೆಚ್ಚಿಸಲು ಮತ್ತು ಯುವ ಸಮೂಹ ಹುರಿದುಂಬಿಸಲು ಶಾಸಕ ನಿಖಿಲ ಕತ್ತಿ, ಉದ್ಯಮಿ ಪೃಥ್ವಿ ಕತ್ತಿ ಕೂಡ ನೃತ್ಯಕ್ಕೆ ಹೆಜ್ಜೆ ಹಾಕಿ ರಂಜಿಸಿದರು. ಕಣ್ಣು ಹಾಯಿಸಿದಲೆಲ್ಲ ಕನ್ನಡ ತಾಯಿಯ ಮಕ್ಕಳ ಸಂಭ್ರಮ ಮುಗಿಲು ಮುಟ್ಟಿತ್ತು. ರಾತ್ರಿವರೆಗೂ ಡಿಜೆ–ಡಾಲ್ಬಿಯಲ್ಲಿ ಮಾರ್ದನಿಸಿದ ಕನ್ನಡದ ಹಾಡುಗಳಿಗೆ ಯುವಕ–ಯುವತಿಯರು ಹುಚ್ಚೆದ್ದು ಕುಣಿದು ಕುಪ್ಪಳಿಸಿ ರಾಜ್ಯೋತ್ಸವ ಸಂಭ್ರಮಕ್ಕೆ ಸಾಕ್ಷಿಯಾದರು.

## ನೇರ ಸಂದರ್ಶನ

ಬೆಳಗಾವಿ: ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ನವೆಂಬರ್ 28, 2023 ರಂದು ಬೆಳಗ್ಗೆ 10 ಗಂಟೆಯಿಂದ ಮದ್ಯಾಹ್ನ 1 ಗಂಟೆಯವರೆಗೆ ಕ್ರೆಡಿಟ್ ಆಕ್ಸೆಸ್ ಗ್ರಾಮೀಣ ಲಿಮಿಟೆಡ್ ಪ್ಲಾಟ್ ನಂಬರ್ 9 ಸಿಎಸ್ #1837, ಬಸವ ಕಾಲೋನಿ ವೈಭವ ನಗರ ಬೆಳಗಾವಿ ಇಲ್ಲಿ ನೇರ ಸಂದರ್ಶನವನ್ನು ಆಯೋಜಿಸಲಾಗಿದೆ. ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ ಮತ್ತು ಪದವಿ ವಿದ್ಯಾರ್ಹತೆ ಹೊಂದಿರುವ ಆಸಕ್ತ ಪುರುಷ/ಮಹಿಳಾ ಅಭ್ಯರ್ಥಿಗಳು https://tinyurl.com/2f6utajp ಈ ವೆಬ್ ಸೈಟ್ ನಲ್ಲಿ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ಅಭ್ಯರ್ಥಿಗಳಿಗೆ ಉದ್ಯೋಗಾವಕಾಶವು ಉಚಿತವಾಗಿದ್ದು, ಇನ್ನುಳಿದ ಯಾವುದೇ ಸೌಲಭ್ಯಗಳು ಇರುವುದಿಲ್ಲ. ಅರ್ಹ ಹಾಗೂ ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಳಿಗಾಗಿ ಮೊಬೈಲ್ ಸಂಖ್ಯೆ: 7975856566, ಇವರನ್ನು ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಎಂದು ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ನಿಲುಗಡೆ

ಬೆಳಗಾವಿ: ಬೆಳಗಾವಿಯ 110ಕೆವ್ಹಿ ಸುವರ್ಣ ಸೌಧ ಉಪ ಕೇಂದ್ರದಲ್ಲಿ 3 ನೇಯ ತ್ರೈಮಾಸಿಕ ಹಾಗೂ ಇತರೆ ಕೆಲಸಗಳನ್ನು ನಿರ್ವಹಿಸುವ ಪ್ರಯುಕ್ತ ಸದರಿ ವಿದ್ಯುತ್ ಸ್ವೀಕರಣಾ ಕೇಂದ್ರದಿಂದ ವಿದ್ಯುತ್ ಸರಬರಾಜು ಆಗುವ ಬೆಳಗಾವಿ ನಗರದ ವಿವಿಧ ಪ್ರದೇಶಗಳ ವಿದ್ಯುತ್ ಉಪ ಕೇಂದ್ರದಿಂದ ಹೊರಡುವ ಪೂರಕಗಳ ಮೇಲೆ ಬರುವ ಪ್ರದೇಶಗಳಲ್ಲಿ ಶುಕ್ರವಾರ ನವೆಂಬರ್ 24, 2023 ರಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 5 ರವರೆಗೆ ವಿದ್ಯುತ್ ನಿಲುಗಡೆಯಾಗಲಿದೆ.

**ವಿದ್ಯುತ್ ನಿಲುಗಡೆಯಾಗುವ ಪ್ರದೇಶಗಳು :** ಕೆಎಚ್‌ಬಿ ಕಾಲೋನಿ, ವೃದ್ಧಾಶ್ರಮ ಪ್ರದೇಶ, ಅಲ್ಲಾರವಾಡ, ಸುವರ್ಣ ಸೌಧ ಲೈನ್ –2, ಸುವರ್ಣ ಸೌಧ ಲೈನ್ –1, ಬಸವೇಶ್ವರ ವೃತ್ತ, ಜೋಶಿಯಲ್ಲಿ ನಾರ್ವೇಕರಗಲ್ಲಿ, ಆಚಾರ್ಯಗಲ್ಲಿ, ಗದೆ ಮಾರ್ಗ, ಶಹಪೂರ, ಗಣೇಶಪೂರ ಗಲ್ಲಿ, ಪವಾರಗಲ್ಲಿ, ಬಸವನಗಲ್ಲಿ, ಸರಾಫ್ ಗಲ್ಲಿ ಬಿಚ್ಚುಗಲ್ಲಿ, ಗ್ವಿಟ್ ಗಲ್ಲಿ 1 2 3 4 5 ಕ್ರಾಸ್, ಮಾರುತಿ ನಗರ, ಹರಿಕಾಕಾ ಕಂಪೌಂಡ್, ಪರ್ಯಾಯ ಸುವರ್ಣಸೌಧ, ಸಾಯಿ ಕಾಲೋನಿ, ಯಡಿಯೂರಪ್ಪ ಮಾರ್ಗ, ಹಲಗಾ ರಸ್ತೆ ಸಾರ್ವಜನಿಕರು ಸಹಕರಿಸಬೇಕು ಎಂದು ಕಾರ್ಯನಿರ್ವಾಹಕ ಅಭಿಯಂತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳಗಾವಿ: ಎಣ್ಣೆ ಪಾರ್ಟಿ ಮಾಡಿದ್ದ ಇಬ್ಬರು ಪೊಲೀಸ್ ಸಿಬ್ಬಂದಿ ಅಮಾನತು

ಬೆಳಗಾವಿ: ಕರ್ತವ್ಯದ ವೇಳೆ ಎಣ್ಣೆ ಪಾರ್ಟಿ ಮಾಡಿದ್ದ ಇಬ್ಬರು ಪೊಲೀಸ್ ಸಿಬ್ಬಂದಿಯನ್ನು ಅಮಾನತು ಮಾಡಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ ಗುಳೇದ ಆದೇಶ ಹೊರಡಿಸಿದ್ದಾರೆ.

ಚಿಕ್ಕೋಡಿ ತಾಲೂಕಿನ ನಾಗರಾಳ ಗ್ರಾಮದ ಹೊರ ವಲಯದಲ್ಲಿ ಈ ಘಟನೆ ನಡೆದಿದ್ದು, 112 ಪೆಟ್ರೋಲಿಂಗ್ ವಾಹನದಲ್ಲಿ ಎಣ್ಣೆ, ಮಾಂಸದೂಟ ಮಾಡಿದ್ದ ಸಿಬ್ಬಂದಿ ಎಚ್.ಎಮ್. ಕಮತೆ ಮತ್ತು ದುಮಾಳ ಅವರನ್ನು ಎಸ್ಪಿ ಅಮಾನತು ಮಾಡಿದ್ದಾರೆ.

ಈ ಬಗ್ಗೆ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಎಸ್ಪಿ ಡಾ. ಭೀಮಾಶಂಕರ ಗುಳೇದ ಅವರು, ಖಡಕಲಾಟ್ ಪೊಲೀಸ್ ಠಾಣೆಯ ಇಬ್ಬರು ಪೊಲೀಸ್ ಸಿಬ್ಬಂದಿ ಊಟ ಮಾಡುವ ನೆಪದಲ್ಲಿ ಸಾರಾಯಿ ಸೇವನೆ ಮಾಡಿರುವುದು ನನ್ನ ಬಗ್ಗೆ ಗಮನಕ್ಕೆ ಬಂದ ತಕ್ಷಣ ಶಿಸ್ತು ಕ್ರಮಕ್ಕೆ ಆದೇಶ ಮಾಡಿದ್ದೇನೆ.

ಆ ಬಳಿಕ ಇಬ್ಬರು ಪೊಲೀಸ್ ಸಿಬ್ಬಂದಿಯನ್ನು ಸೇವೆಯಿಂದ ಅಮಾನತು ಮಾಡಿ ಆದೇಶಿಸಿದ್ದೇನೆ. ಅಲ್ಲದೇ ಇಬ್ಬರು ಪೊಲೀಸ್ ಸಿಬ್ಬಂದಿ ಮೇಲೆ ನಿಗಾ ಇಡಲು ವಿಫಲವಾಗಿದ್ದರಿಂದ ಚಿಕ್ಕೋಡಿ ಮತ್ತು ಖಡಕಲಾಟ್ ಎರಡು ಠಾಣೆ ಪಿಎಸ್‌ಐಗೆ ಶೋಕಾಸ್ ನೋಟಿಸ್ ನೀಡಿದ್ದೇನೆ. ಚಿಕ್ಕೋಡಿ ಡಿಎಸ್ಪಿಗೂ ಪ್ರಕರಣದ ಕುರಿತು ವರದಿ ಸಲ್ಲಿಸುವಂತೆ ಆದೇಶಿಸಿದ್ದೇನೆ ಎಂದರು.

## ಲೈಟ್ ಕಂಬಕ್ಕೆ ಡಿಕ್ಕಿ ಹೊಡೆದ ಕೆಎಸ್‌ಆರ್‌ಟಿಸಿ ಬಸ್

ರಾಮನಗರ: ಸ್ಟೇರಿಂಗ್ ಕಟ್ಟಾಗಿ ಕೆಎಸ್‌ಆರ್ಟಿಸಿ ಬಸ್ ಏಕಾಏಕಿ ಲೈಟ್ ಕಂಬಕ್ಕೆ ಡಿಕ್ಕಿ ಹೊಡೆದ ಘಟನೆ ಮಾಗಡಿ ತಾಲೂಕಿನ ಬಾಚೇನಹಟ್ಟಿ ಗ್ರಾಮದ ಬಳಿ ನಡೆದಿದೆ.

ಬೆಂಗಳೂರಿನಿಂದ ಹುಲಿಯೂರು ದುರ್ಗಾಕ್ಕೆ ಹೋಗುವಾಗ ಈ ದುರ್ಘಟನೆ ಸಂಭವಿಸಿದೆ. ಕೆಎಸ್‌ಆರ್ಟಿಸಿ ಬಸ್ ಡಿಕ್ಕಿ ಹೊಡೆದ ಪರಿಣಾಮ ವಿದ್ಯುತ್ ಕಂಬ ಮುರಿದು



ಬಿದ್ದಿದೆ. ಅದೃಷ್ಟವಶಾತ್ ಬಸ್ಸಿನಲ್ಲಿದ್ದ ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಬಸ್ ಚಾಲಕನಿಗೆ ಹಾಗೂ ಬಸ್ಸಿನಲ್ಲಿದ್ದವರಿಗೆ ಸಣ್ಣ ಪುಟ್ಟ ಗಾಯಗಳಾಗಿವೆ.

ಕೂಡಲೇ ಅವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ವಿಷಯ ತಿಳಿದ ಕೂಡಲೇ ಘಟನಾ ಸ್ಥಳಕ್ಕೆ ಕುದೂರು ಪೊಲೀಸ್ ಅಧಿಕಾರಿಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಘಟನೆ ಸಂಬಂಧ ಕುದೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪೂರ್ವಭಾವಿ ಸಭೆ

ಬೆಳಗಾವಿ: ಪ್ರತಿ ವರ್ಷದಂತೆ ಈ ವರ್ಷವೂ ವಿಶ್ವ ವಿಕಲಚೇತನರ ದಿನಾಚರಣೆಯನ್ನು ಆಚರಿಸುವ ನಿಟ್ಟಿನಲ್ಲಿ ವಿಕಲಚೇತನರಿಗೆ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಏರ್ಪಡಿಸಲು ಹಾಗೂ ಕಾರ್ಯಕ್ರಮವನ್ನು ಏರ್ಪಡಿಸುವ ಕುರಿತು ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನವೆಂಬರ್ 24, 2023 ರಂದು ಮಧ್ಯಾಹ್ನ 12 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ.

ಜಿಲ್ಲೆಯಲ್ಲಿ ವಿಕಲಚೇತನರ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಹಾಗೂ ವಿಶೇಷ ಶಾಲೆಗಳನ್ನು ನಡೆಸುತ್ತಿರುವ ಎಲ್ಲಾ ಸ್ವಯಂ ಸೇವಾ ಸಂಸ್ಥೆಗಳ ಮುಖ್ಯಸ್ಥರು, ವಿಕಲಚೇತನ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು, ಬೆಳಗಾವಿ ಹಾಗೂ ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಇಲಾಖೆ, ಕ್ರೀಡೆ ಮತ್ತು ಯುವ ಸಬಲೀಕರಣ ಇಲಾಖೆ, ಕನ್ನಡ ಮತ್ತು ಸಾಂಸ್ಕೃತಿಕ ಇಲಾಖೆಗಳ ಉಪನಿರ್ದೇಶಕರು ಸಭೆಗೆ ಹಾಜರಾಗಿ ಸಲಹೆ ಸೂಚನೆಗಳನ್ನು ನೀಡಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 26 ರಿಂದ ಯರನಾಳ ಕಾಳಿಕಾದೇವಿ ಯಾತ್ರಾ ಮಹೋತ್ಸವ

ಹುಕ್ಕೇರಿ: ಅನ್ನ, ಅಕ್ಷರ, ಆಶ್ರಯ ತ್ರೀವಿಧ ದಾಸೋಹ ಮೂಲಕ ಧರ್ಮ ಪ್ರಸಾರದಲ್ಲಿ ತೊಡಗಿರುವ ಸುಕ್ಷೇತ್ರ ಹುಕ್ಕೇರಿ ತಾಲೂಕು ಯರನಾಳ ಗ್ರಾಮದ ಶ್ರೀ ಮಹಾಮಾತಾ ಕಾಳಿಕಾದೇವಿ ಯಾತ್ರಾ ಮಹೋತ್ಸವವನ್ನು ಇದೇ ದಿ. 26 ರಿಂದ 28ರವರೆಗೆ ಮೂರು ದಿನಗಳ ಕಾಲ ಏರ್ಪಡಿಸಲಾಗಿದೆ ಎಂದು ಪೀಠಾಧಿಪತಿ ಬ್ರಹ್ಮಾನಂದ ಸ್ವಾಮೀಜಿ ಹೇಳಿದರು.

ಯರನಾಳದ ಶ್ರೀ ಮಠದಲ್ಲಿ ಗುರುವಾರ ಜಾತ್ರಾ ಮಹೋತ್ಸವದ ಕರಪತ್ರ ಮತ್ತು ಪ್ರಚಾರ ಸಾಮಗ್ರಿಗಳನ್ನು ಬಿಡುಗಡೆಗೊಳಿಸಿ ಬಳಿಕ ಸುದ್ಧಿಗಾರರೊಂದಿಗೆ ಮಾತನಾಡಿದ ಅವರು, ಆಧ್ಯಾತ್ಮಿಕ ಮತ್ತು ಸಮಾಜ ಕೈಂಕರ್ಯದಲ್ಲಿ ತೊಡಗಿಸಿಕೊಂಡಿರುವ ಈ ಮಠದಿಂದ ಪ್ರತಿ ವರ್ಷದಂತೆ ಈ ಬಾರಿಯೂ ಕಾಳಿಕಾದೇವಿ ಯಾತ್ರಾ ಮಹೋತ್ಸವವನ್ನು ಅದ್ದೂರಿಯಾಗಿ



ಆಚರಿಸಲಾಗುವುದು ಎಂದರು.

ನ. 26 ರಂದು ಬೆಳಗ್ಗೆ 6 ರಿಂದ ಪ್ರಕೃತಿ ವಿಕೋಪ ಶಾಂತತೆಗೆ ಗಣಹೋಮ, ವನಸ್ಪತಿ ಹೋಮ, ಹವನಾದಿ ನಡೆಯಲಿದೆ. ನ. 27 ರಂದು ಲೋಕ ಕಲ್ಯಾಣಕ್ಕಾಗಿ ಬೆಳಗ್ಗೆ 6 ಕ್ಕೆ ಗಾಯತ್ರಿ ವಿಶ್ವಮಂಗಲ ಚಂಡಿಕಾ ಹೋಮ, ಕಾಮೇಷ್ಠಿ ಯಜ್ಞ ಹೋಮ, ಸಂಜೆ ಭಜನಾ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ನ. 28 ರಂದು ಬೆಳಗ್ಗೆ 6ಕ್ಕೆ ಪಂಚಾಭಿಷೇಕ, ಬೆಳಗ್ಗೆ 9 ರಿಂದ 12ರವರೆಗೆ ಉಡಿ ತುಂಬುವ ಕಾರ್ಯಕ್ರಮ, ಶಿವಾನುಭವ ಗೋಷ್ಠಿ, ಮಧ್ಯಾಹ್ನ 12ಕ್ಕೆ ಪೂರ್ಣಾಹುತಿ, ಮಧ್ಯಾಹ್ನ 1ಕ್ಕೆ ರಥೋತ್ಸವ, ಕುಂಬೋತ್ಸವ ಹಾಗೂ ಪಲ್ಲಕ್ಕಿ ಉತ್ಸವ ನಡೆಯಲಿದೆ ಎಂದು ಅವರು ಮಾಹಿತಿ ನೀಡಿದರು.

ಈ ಯಾತ್ರಾ ಮಹೋತ್ಸವದಲ್ಲಿ ನಿಡಸೋಸಿ ಪಂಚಮ ಶಿವಲಿಂಗೇಶ್ವರ ಸ್ವಾಮೀಜಿ, ಚಿಕ್ಕೋಡಿ ಸಂಪಾದನಾ ಸ್ವಾಮೀಜಿ, ಹುಕ್ಕೇರಿ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ, ಶಿವಬಸವ ಸ್ವಾಮೀಜಿ, ಅಭಿನವ ಮಂಜುನಾಥ ಸ್ವಾಮೀಜಿ, ಜಾರಕಿಹೊಳಿ ಕೃಪಾನಂದ ಸ್ವಾಮೀಜಿ, ಶೆಂಡೂರ ಅರುಣಾನಂದ ಸ್ವಾಮೀಜಿ, ಬೆಳವಿ ಮೃತ್ಯುಂಜಯ ಸ್ವಾಮೀಜಿ ಸಾನಿಧ್ಯ ವಹಿಸುವರು. ಸಚಿವೆ ಲಕ್ಷ್ಮೀ ಹೆಬ್ಬಾಳಕರ, ಸಂಸದ ಅಣ್ಣಾಸಾಹೇಬ ಜೊಲ್ಲೆ, ಶಾಸಕರಾದ ನಿಖಿಲ ಕತ್ತಿ, ಶಶಿಕಲಾ ಜೊಲ್ಲೆ, ದುರ್ಯೋದನ ಐಹೊಳೆ, ಡಿಸಿಸಿ ಬ್ಯಾಂಕ್ ಅಧ್ಯಕ್ಷ ರಮೇಶ ಕತ್ತಿ, ಮಾಜಿ ಸಚಿವ ಶಶಿಕಾಂತ ನಾಯಿಕ, ಬಸವರಾಜ ಮಟಗಾರ ಮತ್ತಿತರ ಗಣ್ಯರು ಉಪಸ್ಥಿತರಿರಲಿದ್ದಾರೆ ಎಂದು ಅವರು ಹೇಳಿದರು.

ಅಪಾರ ಭಕ್ತ ಸಮೂಹವನ್ನೇ ಆಸ್ತಿಯನ್ನಾಗಿ ಮಾಡಿಕೊಂಡಿರುವ ಶ್ರೀಮಠದ ಈ ಯಾತ್ರಾ ಮಹೋತ್ಸವದಲ್ಲಿ ಕರ್ನಾಟಕ, ಗೋವಾ ಮತ್ತು ಮಹಾರಾಷ್ಟ್ರ ರಾಜ್ಯದ ಸಹಸ್ರಾರು ಭಕ್ತಾಧಿಗಳು ಭಾಗವಹಿಸಲಿದ್ದಾರೆ. ಮೂರು ದಿನಗಳ ಕಾಲ ನಡೆಯುವ ಈ ಯಾತ್ರೆಯಲ್ಲಿ ಭಕ್ತಿಯ ಸುಧೆ ಹರಿಯಲಿದೆ. ಯಾತ್ರೆಯ ಎಲ್ಲ ಸಿದ್ಧತೆಗಳ ಕಾರ್ಯ ಭರದಿಂದ ಸಾಗಿದ್ದು ಭಕ್ತಾಧಿಗಳಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ನೋಡಕೊಳ್ಳಲಾಗುವುದು ಎಂದು ಅವರು ತಿಳಿಸಿದರು.

ಜಾರಕಿಹೊಳಿ ಕೃಪಾನಂದ ಸ್ವಾಮೀಜಿ, ಮುಖಂಡರಾದ ಅನಿಲ ಚೌಗಲೆ, ಸುನೀಲ ಬೋಸಲೆ, ವಿಜಯ ಪಾಟೀಲ, ಮುಕುಂದ ಮಠದ, ಸುರೇಶ ತಳವಾರ, ರಮೇಶ ಹುಂಜಿ, ಆನಂದ ಹೊಸಮನಿ ಮತ್ತಿತರರು ಉಪಸ್ಥಿತರಿದ್ದರು.

## ಶ್ರೀಕಾಂತ ಮುಚ್ಚಂಡಿ ಪಿಹೆಚ್.ಡಿ



ಬೆಳಗಾವಿ: ನಗರದ ಶ್ರೀಕಾಂತ ಮುಚ್ಚಂಡಿ ಅವರು ಮಂಡಿಸಿದ ಮುತ್ಸದ್ದಿ ಹಾಗೂ ಚಿಂತಕರಾಗಿ ಸತೀಶ ಜಾರಕಿಹೋಳಿರವರ ಕುರಿತು ಒಂದು ಅಧ್ಯಯನ ಮಹಾಪ್ರಬಂಧಕ್ಕೆ ರಾಣಿ ಚನ್ನಮ್ಮ ವಿಶ್ವವಿದ್ಯಾಲಯವು ಪಿಎಚ್.ಡಿ ಪದವಿ ಪ್ರದಾನ ಮಾಡಿದೆ. ರಾಜ್ಯಶಾಸ್ತ್ರ ವಿಭಾಗದ ಸಂಶೋಧನಾ ವಿದ್ಯಾರ್ಥಿಯಾಗಿದ್ದ ಶ್ರೀಕಾಂತ ಅವರು, ರಾಜ್ಯಶಾಸ್ತ್ರ ಅಧ್ಯಯನ ಪ್ರಾಧ್ಯಾಪಕರು ಹಾಗೂ ಸಂಶೋಧನಾ ಮಾರ್ಗದರ್ಶಕರು ಪ್ರೊ. ವಾಯ್. ಎಸ್. ಬಲವಂತಗೋಳ ಅವರ ಮಾರ್ಗದರ್ಶನದಲ್ಲಿ ಸಂಶೋಧನೆ ಕೈಗೊಂಡಿದ್ದರು.

ಸಂಪುಟ: 4 ಸಂಚಿಕೆ: 247 ಪುಟ: 4 RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089